ರಾಯಚೂರು, ಕೊಪ್ಪಳ, ಯಾದಗಿರಿ, ಕಲಬುರ್ಗಿ, ಬಳ್ಳಾರಿ, ವಿಜಯನಗರ, ಬೀದರ, ಏಕಕಾಲಕ್ಕೆ ಪ್ರಕಟಣೆ
Raichur, Koppal, Yadagiri, Kalburgi, Ballary, Vijaya Nagar, Bidar

# ಕನ್ನಡ ಮಾತೃ ಭೂಮಿ

ಕನ್ನಡದಿನ ಪತ್ರಿಕೆ

ರಾಯಚೂರಿನಿಂದ ರಾಜ್ಯದವರೆಗೆ

ಸಂಪಾಕದರು : ಶ್ಯಾಮ್ ಸುಂದರ್.ಎಲ್
EDITOR : SHYAM SUNDER L

KANNADA MATHRUBHOOMI
KANNADA DAILY PAPER

mathrubhoomircr@gmail.com
Call : 9886635117

ಸಂಪುಟ : Volume : 03 | ಸಂಚಿಕೆ Issuse : 129 | ದಿನಾಂಕ : 17-06-2026 ಬುಧವಾರ Date : 17-06-2026 Wednesday | RNI: Karkan/2023/89199 Post Reg No.: RCR/L/RNP/98/2025-2027 | ರಾಯಚೂರು Raichur | ಪುಟ : Pages : 04 | ರೂ Rs. 2

## ದೇಶ ಬಂಧು ಚಿತ್ತರಂಜನ್ ದಾಸ್ ಅವರ ಆದರ್ಶಗಳನ್ನು ಅಳವಡಿಸಿಕೊಳ್ಳಲು ಕರೆ

**ರಾಯಚೂರು,ಜೂ.16**-ದೇಶದಲ್ಲಿ ನಿರುದ್ಯೋಗ, ಬಡತನ, ಬೆಲೆ ಏರಿಕೆ ಹಾಗೂ ಸಾಮಾಜಿಕ ಸಮಸ್ಯೆಗಳು ಹೆಚ್ಚುತ್ತಿರುವ ಹಿನ್ನೆಲೆಯಲ್ಲಿ ಯುವಜನರು ಚಿತ್ತರಂಜನ್ ದಾಸ್ ಅವರ ಆದರ್ಶಗಳನ್ನು ಅಳವಡಿಸಿಕೊಂಡು ಸಮಾಜಮುಖಿ ಹೋರಾಟಕ್ಕೆ ಮುಂದಾಗಬೇಕು ಎಂದು ಪ್ರಧಾನ ಕಾರ್ಯದರ್ಶಿ ಅಮರಜೀತ್ ಕುಮಾರ್ ಕರೆ ನೀಡಿದರು.

ನಗರದ ಆಲ್ ಇಂಡಿಯಾ ಡೆಮಾಕ್ರೆಟಿಕ್ ಯೂತ್ ಆರ್ಗನೈಸೇಷನ್ ಜಿಲ್ಲಾ ಸಮಿತಿ ಕಚೇರಿಯಲ್ಲಿ ದೇಶಬಂಧು ಚಿತ್ತರಂಜನ್ ದಾಸ್ ಅವರ 100ನೇ ಸ್ಮರಣ ದಿನ ಕಾರ್ಯಕ್ರಮದಲ್ಲಿ ಮಾತನಾಡಿದರು, ದೇಶಬಂಧು ಚಿತ್ತರಂಜನ್ ದಾಸ್ ಅವರು ಭಾರತದ ಸ್ವಾತಂತ್ರ್ಯ ಹೋರಾಟದ → 4

## ಬಸವ ಕೇಂದ್ರದಲ್ಲಿ ನಿಜಾಚರಣೆ ಕ್ರಿಯಾಮೂರ್ತಿಗಳ ತರಬೇತಿ

**ರಾಯಚೂರು, ಜೂ. 16**-ನಗರದ ಬಸವೇಶ್ವರ ನಗರದ ಬಸವ ಕೇಂದ್ರದಲ್ಲಿ ನಿಜಾಚರಣೆ ಕ್ರಿಯಾಮೂರ್ತಿಗಳ ತರಬೇತಿ ಕಾರ್ಯಕ್ರಮ ನಡೆಯಿತು.

ಕಾರ್ಯಕ್ರಮದಲ್ಲಿ ಜಾಗತಿಕ ಲಿಂಗಾಯತ ಮಹಾಸಭೆಯ ಜಿಲ್ಲಾ ಅಧ್ಯಕ್ಷ ಶರಣ ಪಿ. ರುದ್ರಪ್ಪಗೌಡ ಮಾತನಾಡಿ, ನಿಜಾಚರಣೆಯ ಮಹತ್ವ, ವಚನಾಧಾರಿತ ಆಚರಣೆಗಳ ಉದ್ದೇಶ, ಕ್ರಿಯಾಮೂರ್ತಿಗಳ ತತ್ವಬದ್ಧತೆ ಹಾಗೂ ಬಸವ ತತ್ವದ ಪ್ರಚಾರದಲ್ಲಿ ನಿಜಾಚರಣೆಗಳ ಪಾತ್ರ ಕುರಿತು ವಿವರಿಸಿದರು. ಜನನ, ನಾಮಕರಣ, ಸೀಮಂತ, ಕಲ್ಯಾಣ ಮಹೋತ್ಸವ, ಗುರು ಪ್ರವೇಶ ಹಾಗೂ ಅಂತ್ಯಕ್ರಿಯೆ ಸೇರಿದಂತೆ ವಿವಿಧ ಕುಟುಂಬ ಕಾರ್ಯಕ್ರಮಗಳನ್ನು ವಚನಾಧಾರಿತವಾಗಿ ನಡೆಸುವ ಕುರಿತು ತರಬೇತಿ ನೀಡಲಾಯಿತು.

ನಿಜಾಚರಣೆ ವೇಳೆ ವಚನಗಳಿಗೆ ಆದ್ಯತೆ ನೀಡಬೇಕು, ಅನ್ಯ ಧರ್ಮ ಅಥವಾ ಆಚರಣೆಗಳ ಕುರಿತು ಟೀಕೆ-ವಿಮರ್ಶೆ ಮಾಡದೆ ಶಾಂತ, → 4

## ನೇತಾಜಿನಗರ ಪೊಲೀಸರ ಕಾರ್ಯಾಚರಣೆ: ಮೂರು ಜನ ಬೈಕ್ ಕಳ್ಳರ ಬಂಧನ- ಎಸ್‌ಪಿ ಮೆಚ್ಚುಗೆ

**ರಾಯಚೂರು,ಜೂ.17**-ನಗರದ ಅಂಬೇಡ್ಕರ್ ಹಾಸ್ಟೆಲ್ ಮುಂಭಾಗದಿಂದ ಕಳುವಾಗಿದ್ದ ಬೈಕ್ ಪ್ರಕರಣವನ್ನು ಭೇದಿಸಿರುವ ನೇತಾಜಿನಗರ ಪೊಲೀಸರು ಮೂವರು ಆರೋಪಿಗಳನ್ನು ಬಂಧಿಸಿ, ಒಟ್ಟು 11.29 ಲಕ್ಷ ರೂ.ಮೌಲ್ಯದ 15 ಮೋಟಾರ್ ಸೈಕಲ್‌ಗಳನ್ನು ಜಪ್ತಿ ಮಾಡಿದ್ದಾರೆ.

ಮೇ 21ರಿಂದ 25, ನಡುವಿನ ಅವಧಿಯಲ್ಲಿ ನಾರಾಯಣ ರಾಥೋಡ್ ಅವರ ಬಜಾಜ್ ಪಲ್ಸರ್ ಎನ್‌ಎಸ್ 200 (ಕೆಎ-03-ಎಚ್‌ವಿ-7049) ಬೈಕ್ ಕಳುವಾಗಿತ್ತು. ಈ ಸಂಬಂಧ ನೇತಾಜಿನಗರ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿತ್ತು.

ಪ್ರಕರಣದ ತನಿಖೆಗಾಗಿ ಜಿಲ್ಲಾ ಪೊಲೀಸ್ ಅಧೀಕ್ಷಕ ಅರುಣಾಂಗ್ಷುಗಿರಿ, ಹೆಚ್ಚುವರಿ ಪೊಲೀಸ್ ಅಧೀಕ್ಷಕರಾದ ಕುಮಾರಸ್ವಾಮಿ, ಹರೀಶ, ಹಾಗೂ ರಾಯಚೂರು ಉಪ ವಿಭಾಗದ ಪೊಲೀಸ್ ಉಪಾಧೀಕ್ಷಕರ ಶಾಂತವೀರಯ್ಯ ಮಾರ್ಗದರ್ಶನದಲ್ಲಿ ಪಶ್ಚಿಮ ವೃತ್ತದ ಸಿಪಿಐ ಉಮೇಶ → 4

### ವಿಧಾನ ಪರಿಷತ್ ಚುನಾವಣೆ

## ಐದನೇ ಅಭ್ಯರ್ಥಿ ಗೆಲುವಿಗೆ ಕಾಂಗ್ರೆಸ್ ಮಹಾ ರಣತಂತ್ರ ಬಿಡದಿಯಲ್ಲಿ ಶಾಸಕರ ಮಹತ್ವದ ಸಭೆ




■ ಕನ್ನಡ ಮಾತೃ ಭೂಮಿ ವಾರ್ತೆ

**ರಾಮನಗರ**,ಬೆಂಗಳೂರು ಹೊರವಲಯದ ಬಿಡದಿಯ ವಂಡರ್ ಲಾದಲ್ಲಿ ಇಂದು ಸಂಜೆ ಸಿಎಂ ಡಿ ಕೆ ಶಿವಕುಮಾರ್ ನೇತೃತ್ವದಲ್ಲಿ ಕಾಂಗ್ರೆಸ್ ಶಾಸಕಾಂಗ ಪಕ್ಷದ ಸಭೆ ನಡೆಯಿತು. ಸಭೆಯಲ್ಲಿ ಎಐಸಿಸಿ ಪ್ರಧಾನ ಕಾರ್ಯದರ್ಶಿ ರಣದೀಪ್ ಸಿಂಗ್ ಸುರ್ಜೇವಾಲಾ, ನಿಕಟ ಪೂರ್ವ ಸಿಎಂ ಸಿದ್ದರಾಮಯ್ಯ, ಕೆಪಿಸಿಸಿ ಅಧ್ಯಕ್ಷ ಬಿ ಕೆ ಹರಿಪ್ರಸಾದ್, ಸಚಿವರಾದ ಕೆ ಜೆ ಜಾರ್ಜ್, ಕೆ ಎಚ್ ಮುನಿಯಪ್ಪ, ಆರ್ ವಿ ದೇಶಪಾಂಡೆ, ಎಂ ಬಿ ಪಾಟೀಲ್, ಯು ಟಿ ಖಾದರ್, ದಿನೇಶ್ ಗುಂಡೂರಾವ್, ಯತೀಂದ್ರ ಸಿದ್ದರಾಮಯ್ಯ, ಸಿ ಎಲ್ ಪಿ ಕಾರ್ಯದರ್ಶಿ ಅಲ್ಲಮಪ್ರಭು ಪಾಟೀಲ್, ಎಐಸಿಸಿ ಕಾರ್ಯದರ್ಶಿಗಳಾದ ಅಭಿಷೇಕ್ ದತ್ತ, ಗೋಪಿನಾಥ್ ಪಳನಿಸ್ವಾಮಿ ಹಾಜರಿ ದ್ದರು.

ಬೆಂಗಳೂರು ದಕ್ಷಿಣ ಜಿಲ್ಲೆಯ ಬಿಡದಿಯ ವಂಡರ್ ಲಾ ದಲ್ಲಿ ಮುಖ್ಯಮಂತ್ರಿಯಾದ ಬಳಿಕ್ ಇದೇ ಮೊದಲ ಭಾರಿಗೆ ಡಿ ಕೆ ಶಿವಕುಮಾರ್ ನೇತೃತ್ವದಲ್ಲಿ → 4

### ಜೂ.19 ರಂದು ವಿಕಸಿತ ಭಾರತ ಉದ್ಯೋಗ ಯೋಜನೆ ಫಲಾನುಭವಿಗಳ ಸಂವಾದ

## ಹೊಸ ಉದ್ಯೋಗಿಗಳು, ಉದ್ಯೋಗದಾರರಿಗೆ ಪ್ರೋತ್ಸಾಹ ಧನ- ನೀರಜಕುಮಾರ

■ ಕನ್ನಡ ಮಾತೃ ಭೂಮಿ ವಾರ್ತೆ

**ರಾಯಚೂರು,ಜೂ.17**-ದೇಶದಲ್ಲಿ ಹೊಸ ಉದ್ಯೋಗ ಸೃಷ್ಟಿಸಲು ಪ್ರಧಾನಮಂತ್ರಿ ನರೇಂದ್ರ ಮೋದಿಯವರು ಘೋಷಿಸಿರುವ ಪ್ರಧಾನ ಮಂತ್ರಿ ವಿಕಸಿತ ಭಾರತ ರೋಜಗಾರ ಯೋಜನೆಯಡಿ ಉದ್ಯೋಗ ಮತು ಉದ್ಯೋಗ ದಾತರಿಗೆ ಪ್ರೋತ್ಸಾಹಿಸುವ ಯೋಜನೆ ಸದುಪಯೋಗ ಪಡೆಯಬೇಕೆಂದು ಇಪಿಎಫ್‌ಓ ಪ್ರಾದೇಶಿಕ ಆಯುಕ್ತ ನೀರಜ ಕುಮಾರ ಮನವಿ ಮಾಡಿದರು. ಅವರಿಂದು ಮಾಧ್ಯಮಗೋಷ್ಟಿ ಉದ್ದೇಶಿಸಿ ಮಾತನಾಡಿ, ಎರಡು ಹಂತದಲ್ಲಿ ಯೋಜನೆಯನ್ನು ಅನುಷ್ಠಾನಗೊಳಿಸಲಾಗುತ್ತಿದೆ. ಭವಿಷ್ಯ ನಿಧಿ (ಪಿಎಫ್) ನೊಂದಾಯಿಸಿಕೊಳ್ಳುವ ಹೊಸ ನೌಕರರಿಗೆ ಪ್ರೋತ್ಸಾಹಧನನೀಡಲಾಗುತ್ತದೆ.




ಆರು ತಿಂಗಳ ಸೇವೆ ನಂತರ ಇಪಿಎಫ್ ಖಾತೆಗೆ 15 ಸಾವಿರ ರೂಗಳವರಗೆ ಪ್ರೋತ್ಸಾಹ ಧನ ನೀಡಲಾಗುತ್ತದೆ. ಹೊಸದಾಗಿ ಉದ್ಯೋಗ ಸೃಷ್ಟಿಸುವ ಉದ್ಯೋಗದಾತರಿಗೆ ಒಂದು ಲಕ್ಷ ವೇತನ ಹೊಂದಿರುವವರಿಗೆ ಪ್ರತಿ ತಿಂಗಳು 3 ಸಾವಿರ ರೂ ಕನಿಷ್ಟ ಆರು ತಿಂಗಳವರೆಗೆ ಪ್ರೋತ್ಸಾಹಧನ ವಿತರಿಸಲಾಗುತ್ತದೆ. ಉದ್ಯೋಗದಾತರು ಸ್ವಯಂಪ್ರೇರಿತವಾಗಿ ಹೊಸದಾಗಿ ಉದ್ಯೋಗ ಸೃಷ್ಟಿಸಿರು ಮಾಹಿತಿಯನ್ನು ನೀಡಿದರೆ ಮಾತ್ರ ಯೋಜನೆಯಡಿ ಪ್ರೋತ್ಸಾಹಧನ ವಿತರಿಸಲಾಗುತ್ತದೆ. ಜೂ.19 ರಂದು ನಗರ ನವೋದಯು ವೈಧ್ಯಕೀಯ ಕಾಲೇಜಿನಲ್ಲಿ ಫಲಾನುಭವಿಗಳೊಂದಿಗೆ → 4

## ರೈತರ ವಿವಿಧ ಬೇಡಿಕೆಗಳಿಗೆ ಆಗ್ರಹಿಸಿ ಕರ್ನಾಟಕ ಪ್ರಾಂತ ರೈತ ಸಂಘದಿಂದ ಬೃಹತ್ ಪ್ರತಿಭಟನೆ



■ ಕನ್ನಡ ಮಾತೃ ಭೂಮಿ ವಾರ್ತೆ

**ರಾಯಚೂರು,ಜೂ.17**-3)ರೈತರಿಗೆ ಗುಣಮಟ್ಟದ ಬೀಜ ಹಾಗೂ ರಸಗೊಬ್ಬರವನ್ನು ಸಮರ್ಪಕವಾಗಿ ಪೂರೈಸಬೇಕು, ಬಡ ನಿವೇಶನ ರಹಿತ ಕುಟುಂಬಗಳಿಗೆ ಮನೆ ನಿವೇಶನ ಮತ್ತು ಹಕ್ಕುಪತ್ರಗಳನ್ನು ವಿತರಿಸಬೇಕು ಸೇರಿದಂತೆ ವಿವಿಧ ಜನಪರ ಬೇಡಿಕೆಗಳ ಈಡೇರಿಕೆಗೆ ಆಗ್ರಹಿಸಿ ಕರ್ನಾಟಕ ಪ್ರಾಂತ ರೈತ ಸಂಘ (ಕೆಪಿಆರ್‌ಎಸ್) ಜಿಲ್ಲಾ ಸಮಿತಿ ನೇತೃತ್ವದಲ್ಲಿ ಮಂಗಳವಾರ ಬೃಹತ್ ಪ್ರತಿಭಟನಾ ಮೆರವಣಿಗೆ ಹಾಗೂ ಧರಣಿ ಸತ್ಯಾಗ್ರಹ ನಡೆಯಿತು.

ನಗರದ ವಾಲ್ಮೀಕಿ ವೃತ್ತದಿಂದ ಆರಂಭವಾದ ಪ್ರತಿಭಟನಾ ಮೆರವಣಿಗೆಯಲ್ಲಿ ರೈತರು, ಕೃಷಿ ಕೂಲಿಕಾರರು ಹಾಗೂ ವಿವಿಧ ಗ್ರಾಮಗಳ ನಿವಾಸಿಗಳು ಭಾಗವಹಿಸಿ ಘೋಷಣೆಗಳನ್ನು ಕೂಗುತ್ತಾ ಟಿಪ್ಪು ಸುಲ್ತಾನ್ ಉದ್ಯಾನವನದವರೆಗೆ ಮೆರವಣಿಗೆ ನಡೆಸಿದರು. ಬಳಿಕ ಜಿಲ್ಲಾ ಆಡಳಿತ ಭವನದ ಮುಂಭಾಗದಲ್ಲಿ ಧರಣಿ ನಡೆಸಿ ಜಿಲ್ಲಾಡಳಿತದ ಮೂಲಕ ಸರ್ಕಾರಕ್ಕೆ ಮನವಿ ಸಲ್ಲಿಸಿದರು.

ಮುಂಗಾರು ಆರಂಭವಾಗಿದ್ದರೂ ಜಿಲ್ಲೆಯ ಹಲವು ಭಾಗಗಳಲ್ಲಿ ರೈತರಿಗೆ ಗುಣಮಟ್ಟದ ಬೀಜ ಮತ್ತು ರಸಗೊಬ್ಬರಗಳು ಸಮರ್ಪಕವಾಗಿ ದೊರೆಯುತ್ತಿಲ್ಲ. ಕೆಲ ವ್ಯಾಪಾರಿಗಳು ಕೃತಕ ಅಭಾವ ಸೃಷ್ಟಿಸಿ ಹೆಚ್ಚಿನ ಬೆಲೆಗೆ ಮಾರಾಟ ಮಾಡುತ್ತಿರುವ ಬಗ್ಗೆ ದೂರುಗಳು ಕೇಳಿಬರುತ್ತಿವೆ.

ಜಿಲ್ಲಾಡಳಿತ ತಕ್ಷಣ ಮಧ್ಯಪ್ರವೇಶಿಸಿ ಎಲ್ಲಾ ತಾಲ್ಲೂಕುಗಳಲ್ಲಿ ರೈತರಿಗೆ ಎಂ.ಆರ್.ಪಿ. ದರದಲ್ಲಿ ಅಗತ್ಯ ಪ್ರಮಾಣದ ಬೀಜ ಮತ್ತು ರಸಗೊಬ್ಬರ ಲಭ್ಯವಾಗುವಂತೆ ಕ್ರಮ ಕೈಗೊಳ್ಳಬೇಕು ಎಂದು ಒತ್ತಾಯಿಸಿದರು.

ರಾಯಚೂರು ಜಿಲ್ಲೆಯಲ್ಲಿ ಸರ್ಕಾರ ಎಂಎಸ್‌ಪಿ ದರದಲ್ಲಿ ಖರೀದಿಸಿರುವ ಜೋಳದ ಬಾಕಿ ಹಣವನ್ನು ಇನ್ನೂ ಅನೇಕ ರೈತರಿಗೆ ಪಾವತಿಸಿಲ್ಲ. ಬಾಕಿ ಮೊತ್ತವನ್ನು ಕೂಡಲೇ ಬಿಡುಗಡೆ ಮಾಡಬೇಕು ಎಂದು ಆಗ್ರಹಿಸಿದರು.

ರಾಜ್ಯದಲ್ಲಿ ವಿದ್ಯುತ್ ವಿತರಣೆಯನ್ನು ಹಿಂದಿನಂತೆ ಜೆಸ್ಕಾಂ ಮೂಲಕವೇ ಮುಂದುವರಿಸಬೇಕು. ಟಾಟಾ ಪವರ್‌ಗೆ ವಿದ್ಯುತ್ ವಿತರಣೆಯ ಜವಾಬ್ದಾರಿ ನೀಡಬಾರದು ಹಾಗೂ ವಿದ್ಯುತ್ ಖಾಸಗೀಕರಣ ಪ್ರಸ್ತಾಪವನ್ನು ಕೈಬಿಡಬೇಕು ಎಂದು ಒತ್ತಾಯಿಸಿದರು.

ನಗರ ಹಾಗೂ ಗ್ರಾಮೀಣ ಪ್ರದೇಶಗಳ ನಿವೇಶನ ರಹಿತ ಬಡ ಕುಟುಂಬಗಳಿಗೆ ಆಶ್ರಯ ಯೋಜನೆಯಡಿ ನಿವೇಶನ ಮಂಜೂರು ಮಾಡಬೇಕು.

ಹಲವು ವರ್ಷಗಳಿಂದ ಸರ್ಕಾರಿ ಜಾಗ ಹಾಗೂ ಆಶ್ರಯ ಕಾಲೋನಿಗಳಲ್ಲಿ ವಾಸಿಸುತ್ತಿರುವ ಕುಟುಂಬಗಳಿಗೆ ಹಕ್ಕುಪತ್ರ ನೀಡಿ, ಕುಡಿಯುವ ನೀರು, ರಸ್ತೆ, ಚರಂಡಿ, ಬೀದಿ ದೀಪ ಸೇರಿದಂತೆ ಮೂಲಭೂತ ಸೌಕರ್ಯಗಳನ್ನು ಒದಗಿಸಬೇಕು ಎಂದು ಆಗ್ರಹಿಸಿದರು.

ದೇವದುರ್ಗ, ಸಿಂಧನೂರು, ಮಸ್ಕಿ, ಲಿಂಗಸೂಗೂರು ಹಾಗೂ ರಾಯಚೂರು ತಾಲ್ಲೂಕುಗಳ ವಿವಿಧ ಗ್ರಾಮಗಳಲ್ಲಿನ ಸ್ಮಶಾನ ರಸ್ತೆಗಳ ಅಭಿವೃದ್ಧಿ, ಒತ್ತುವರಿ ತೆರವು, ಬಂಡಿದಾರಿ ತೆರವು, ಹೈಟೆಕ್ ಶೌಚಾಲಯ

ನಿರ್ಮಾಣ, ಉದ್ಯೋಗ ಖಾತ್ರಿ ಯೋಜನೆಯನ್ನು ಸಮರ್ಪಕವಾಗಿ ಜಾರಿಗೊಳಿಸುವುದು, ಜಿಪಿಎಸ್ ತಾಂತ್ರಿಕ ಸಮಸ್ಯೆ ಪರಿಹರಿಸುವುದು, ಕಾರ್ಮಿಕರಿಗೆ ಪೂರ್ಣ ಕೂಲಿ ಪಾವತಿಸುವುದು ಹಾಗೂ ಬಿಸಿಲಿನ ತಾಪದಿಂದ ಮೃತಪಟ್ಟ ಕಾರ್ಮಿಕರ ಕುಟುಂಬಗಳಿಗೆ ಪರಿಹಾರ ನೀಡಬೇಕು ಎಂದು ಒತ್ತಾಯಿಸಿದರು. → 4

## ವಿಶ್ವ ರಕ್ತದಾನ ದಿನಾಚರಣೆ: ರಕ್ತದಾನ ಮಾಡುವ ಮೂಲಕ ಜೀವ ಉಳಿಸಲು ಯುವಕರು ಮುಂದಾಗಿ ಎಸ್‌ಪಿ ಅರುಣಾಂಗ್ಷುಗಿರಿ




■ ಕನ್ನಡ ಮಾತೃ ಭೂಮಿ ವಾರ್ತೆ

**ರಾಯಚೂರು,ಜೂ.17**-ಜಿಲ್ಲೆಯಲ್ಲಿ ರಸ್ತೆ ಅಪಘಾತಗಳ ಸಂಖ್ಯೆ ಹೆಚ್ಚಾಗುತ್ತಿದ್ದು, ಚಿಕಿತ್ಸೆ ವೇಳೆ ರಕ್ತದ ಕೊರತೆಯಿಂದ ಕೆಲವರು ಪ್ರಾಣ ಕಳೆದುಕೊಳ್ಳುತ್ತಿರುವುದು ಆತಂಕಕಾರಿ ಸಂಗತಿಯಾಗಿದೆ ಎಂದು ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿ ಅರುಣಾಂಗ್ಷು ಗಿರಿ ಹೇಳಿದರು.

ಅವರಿಂದ ನಗರದ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಮುಂಭಾಗದಲ್ಲಿ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ, ಜಿಲ್ಲಾ ಪೊಲೀಸ್ ಇಲಾಖೆ, ಕರ್ನಾಟಕ ರಾಜ್ಯ ಏಡ್ಸ್ ನಿಯಂತ್ರಣ ಸಂಸ್ಥೆ, ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ, ಜಿಲ್ಲಾ ಏಡ್ಸ್ ತಡೆ ಮತ್ತು ನಿಯಂತ್ರಣ ಘಟಕ, ರಿಮ್ಸ್ ಆಸ್ಪತ್ರೆ, ನವೋದಯ

## ಎಸ್‌ಐಆರ್ ವಿರೋಧಿಸಿ ಪ್ರಗತಿ ಪರ ಸಂಘಟನೆಗಳು ಹಾಗೂ ಜಾತ್ಯಾತೀತ ಪಕ್ಷಗಳು ವತಿಯಿಂದ ಬೈಕ್ ರ್‍ಯಾಲಿ



■ ಕನ್ನಡ ಮಾತೃ ಭೂಮಿ ವಾರ್ತೆ

**ರಾಯಚೂರು,ಜೂ.17**-ಎಸ್‌ಐಆರ್ ವಿರೋಧಿಸಿ ಪ್ರಗತಿ ಪರ ಸಂಘಟನೆಗಳು ಹಾಗೂ ಜಾತ್ಯಾತೀತ ಪಕ್ಷಗಳು ವತಿಯಿಂದ ರಾಜ್ಯವ್ಯಾಪಿ ಜನ ಜಾಗೃತಿ ಅಭಿಯಾನದ ಅಂಗವಾಗಿ ನಗರದ ಅಂಬೇಡ್ಕರ್ ವೃತ್ತದಿಂದ ಬೈಕ್ ರ್‍ಯಾಲಿ ಹಮ್ಮಿಕೊಳ್ಳಲಾಯಿತು.

ಬೈಕ್ ರ್‍ಯಾಲಿ ಅಂಬೇಡ್ಕರ್ ವೃತ್ತದಿಂದ ಆರಂಭವಾಗಿ ಕೇಂದ್ರ ಬಸ್ ನಿಲ್ದಾಣ, ತಹಶಿಲ್ದಾರ್ ಕಚೇರಿ, ಜೈಲ್ ರಸ್ತೆ, ಮಹಿಳಾ ಸಮಾಜ, ಜಾಕಿರ್ ಹುಸೇನ್ ವೃತ್ತ, ಏಕ್ ಮಿನಾರ್, ಭಗತ್ ಸಿಂಗ್ ವೃತ್ತ, ತೀನ್ ಕಂದಿಲ್, ಸರಾಫ್ ಬಜಾರ್, ನೇತಾಜಿ ವೃತ್ತ, ಸಿಟಿ ಟಾಕೀಸ್, ಚಂದ್ರ ಮೌಳೇಶ್ವರ ವೃತ್ತ, ಗಾಂಧಿ ಚೌಕ್, ಮಹಾ ನಗರ ಪಾಲಿಕೆ, ಬಸವೇಶ್ವರ ವೃತ್ತ, ಡಿಸಿ ಮನೆ ಮುಂಭಾಗದಿಂದ ಜಿಲ್ಲಾಧಿಕಾರಿ ಕಚೇರಿ ವರೆಗೆ ನಡೆಯಿತು. → 4

## ಮತದಾರರ ಪಟ್ಟಿ ವಿಶೇಷ ಪರಿಷ್ಕರಣೆ ಹೆಸರಿನಲ್ಲಿ ಮತದಾರರ ಕಡಿತ ವಿರೋಧಿಸಿ ಜೂ.20 ರಂದು ಬೆಂಗಳೂರಿನಲ್ಲಿ ಸಮಾವೇಶ-ವೀರ ಸಂಗಯ್ಯ



■ ಕನ್ನಡ ಮಾತೃ ಭೂಮಿ ವಾರ್ತೆ

**ರಾಯಚೂರು,ಜೂ.17**-ಮತದಾರರ ಪಟ್ಟಿ ವಿಶೇಷ ಪರಿಷ್ಕರಣೆ ಹೆಸರಿನಲ್ಲಿ ಮತದಾರರ ಹಕ್ಕು ಕಸಿಯುವ ಹುನ್ನಾರ ನಡೆಯತ್ತಿದ್ದು ದೇಶಕ್ಕೆ ಅಪಾಯ ತಂದೊಡ್ಡಿದ್ದು ಜನರಲ್ಲಿ ಜಾಗೃತಿ ಮೂಡಿಸಲು ರಾಜ್ಯದಾಧ್ಯಂತ ಐದು ಮಾರ್ಗಗಳಲ್ಲಿ ಜಾಗೃತಿ ಜಾಥಾ ಪ್ರಾರಂಭವಾಗಿದ್ದು ಜೂ.20 ರಂದು ಬೆಂಗಳೂರಿನಲ್ಲಿ ಎಸ್‌ಐಆರ್ ವಿರೋಧಿ ಬೃಹತ್ ಸಮಾವೇಶ ಆಯೋಜಿಸಲಾಗಿದೆ ಎಂದು ಎಸ್‌ಐಆರ್ ವಿರೋಧಿ ಕರ್ನಾಟಕ ಸಂಚಾಲಕ ವೀರಸಂಗಯ್ಯ ಹೇಳಿದರು.

ಅವರಿಂದು ಮಾಧ್ಯಮಗೋಷ್ಟಿ ಉದ್ದೇಶಿಸಿ ಮಾತನಾಡಿ ರಾಜ್ಯದಲ್ಲಿ ಪ್ರಾರಂಭವಾಗಿರುವ ಎಸ್‌ಐಆರ್‌ನಿಂದ ದಲಿತ, ಮಹಿಳೆಯರು, ಅಲ್ಪಸಂಖ್ಯಾತರು, ಆದಿವಾಸಿಗಳು, ಅನಕ್ಷರಸ್ಥರು ಮತದಾನ ಹಕ್ಕಿನಿಂದ ವಂಚನೆಗೆ ಗುರಿಯಾಗುವ ಅಪಾಯವಿದೆ. ಈಗಾಗಲೇ ಪಶ್ಚಿಮ ಬಂಗಾಳ ಸೇರಿದಂತೆ ಎಸ್‌ಐಆರ್ ನಡೆದ ರಾಜ್ಯಗಳಲ್ಲಿ ಬಹುಸಂಖ್ಯಾತರರು ಮತದಾರರ ಪಟ್ಟಿಯಿಂದ ಕಡಿತಗೊಂಡಿರುವದೇ ನಿದರ್ಶನವಾಗಿದೆ. ಅದೇ ಸ್ಥಿತಿ ರಾಜ್ಯದಲ್ಲಿ ನಡೆಯುತ್ತಿರುವದನ್ನುವಿರೋಧಿಸಬೇಕಿದೆ ಎಂದರು.

ಈಗಾಗಲೇ 6ಕೋಟಿ 50 ಮತದಾರರು ಮತದಾರರ ಪಟ್ಟಿಯಿಂದ ಕೈ ಬಿಡಲಾಗಿದೆ.ಪಶ್ಚಿಮ ಬಂಗಾಳ ಒಂದರಲ್ಲಿಯೇ91 ಲಕ್ಷ ಮತದಾರರು ಕಡಿತಗೊಂಡಿದ್ದಾರೆ. 27 ಲಕ್ಷ ಜನ ದಾಖಲೆ ನೀಡಿದರೂ ಪರಿಗಣಿಸದೇ 317 → 4

## ಶಾಸಕ ಪ್ರಸಾದ ಅಬ್ಬಯ್ಯರಿಗೆ ಸಚಿವ ಸ್ಥಾನ ನೀಡಲು ಬಲಗೈ ಜಾತಿಗಳ ಒಕ್ಕೂಟ ಆಗ್ರಹ

■ ಕನ್ನಡ ಮಾತೃ ಭೂಮಿ ವಾರ್ತೆ

**ರಾಯಚೂರು,ಜೂ.17**-ರಾಜ್ಯದ ಸಚಿವ ಸಂಪುಟದಲ್ಲಿ ಉತ್ತರ ಕರ್ನಾಟಕ ಏಕೈಕ ಬಲಗೈ ಶಾಸಕ ಪ್ರಸಾದ ಅಬ್ಬಯ್ಯ ಇವರಿಗೆ ಸಚಿವ ಸ್ಥಾನ ನೀಡಬೇಕೆಂದು ಬಲಗೈ ಜಾತಿಗಳ ಒಕ್ಕೂಟದ ಜಿಲ್ಲಾಧ್ಯಕ್ಷ ಭೀಮಣ್ಣ ಮಂಚಾಲ ಒತ್ತಾಯಿಸಿದರು.

ಅವರಿಂದು ಮಾಧ್ಯಮಗೋಷ್ಟಿ ಉದ್ದೇಶಿಸಿ ಮಾತನಾಡಿ, ಕಳೆದ 32 ವರ್ಷಗಳಿಂದ ಉತ್ತರ ಕರ್ನಾಟಕ ಬೆಳಗಾವಿ ವಿಭಾಗದಲ್ಲಿ ಬಲಗೈ ಸಮುದಾಯವರಿಗೆ ಸಚಿವ ಸ್ಥಾನ ದೊರಕಿಲ್ಲ. ಎಲ್ಲಾ ಸಮೂದಾಯದವರೊಂದಿಗೆ ಉತ್ತಮ ಬಾಂಧವ್ಯ ಹೊಂದಿಗೆ ಶಾಸಕರಾಗಿರುವ ಪ್ರಸಾದ ಅಬ್ಬಯ್ಯ ಇವರು ಪಕ್ಷದ ನಿಷ್ಟಾವಂತ ಕಾರ್ಯಕರ್ತರಾಗಿ ಸೇವೆ ಸಲ್ಲಿಸಿದ್ದಾರೆ. ಈಗಾಗಲೇ ಸಮೂದಾಯವರಿಗೆ ಸಚಿವ ಸ್ಥಾನ ನೀಡಿರುವ ಕಾರಣ ನೀಡಿದೇ ಜನಸಂಖ್ಯೆ ಆಧಾರದ ಮೇಲೆ, ಪಕ್ಷ ಹಾಗೂ ಅಭಿವೃದ್ಧಿ ದೃಷ್ಟಿಯಿಂದ ಪ್ರಸಾದ ಅಬ್ಬಯ್ಯ ಇವರಿಗೆ ಸಚಿವ ಸ್ಥಾನ ನೀಡಬೇಕೆಂದು ಮನವಿ ಮಾಡಿದರು. → 4



## ಹಿರಿಯ ನಾಯಕ ಎನ್.ಎಸ್.ಬೋಸರಾಜರಿಗೆ ಸಚಿವ ಸ್ಥಾನ ನೀಡಲು ಪಕ್ಷದ ಹೈಕಮಾಂಡ ಬಳಿ ನಿಯೋಗ-ಬಾಲಸ್ವಾಮಿ ಕೊಡ್ಲಿ



■ ಕನ್ನಡ ಮಾತೃ ಭೂಮಿ ವಾರ್ತೆ

**ರಾಯಚೂರು,ಜೂ.17**-ಅಭಿವೃದ್ಧಿಯ ಹರಿಕಾರ, ದೂರದೃಷ್ಟಿಯ ರಾಜಕಾರಣಿ ಮಾಜಿ ಸಚಿವ ಎನ್.ಎಸ್ .ಬೋಸರಾಜರಿಗೆ ಸಚಿವ ಸಂಪುಟಕ್ಕೆ ಮರು ಸೇರ್ಪಡೆ ಮಾಡಿಕೊಳ್ಳಬೇಕೆಂದು ಕೆಪಿಸಿಸಿ ಪ್ರಚಾರ ಸಮಿತಿ ರಾಜ್ಯ ಸಂಯೋಜಕ ಬಾಲಸ್ವಾಮಿ ಕೊಡ್ಲಿ ಆಗ್ರಹಿಸಿದರು.

ಅವರಿಂದು ಮಾಧ್ಯಮಗೋಷ್ಟಿ ಉದ್ದೇಶಿಸಿ ಮಾತನಾಡಿ, ನಗರ ಸೇರಿದಂತೆ ಜಿಲ್ಲೆಯ ಅಭಿವೃದ್ಧಿ ಹಾಗೂ ಪಕ್ಷದ ಸಂಘಟನೆಗೆ ಎನ್.ಎಸ್.ಬೋಸರಾಜ ಇವರು ಕೊಡುಗೆಯಿದೆ. ಸರಿ ಸುಮಾರು 1931 ಕೋಟಿ ರೂ ಅಭಿವೃದ್ದಿಗೆ ಅನುದಾನ ಮಂಜೂರು ಮಾಡಿಸುವಲ್ಲಿ ಬೋಸರಾಜ ಇವರ ಶ್ರಮವಿದೆ. ಸಣ್ಣ ನೀರಾವರಿ ಸಚಿವರಾಗಿ ಅನೇಕ ಮಹತ್ವರ ಕಾರ್ಯಗಳನ್ನು ಕೈಗೊಂಡಿದ್ದು ಅವರನ್ನು ಸಚಿವ ಸಂಪುಟಕ್ಕೆ ಮರುಸೇರ್ಪಡೆಗೆ ಪ್ರತಿ ವಿಧಾನಸಭಾ ಕ್ಷೇತ್ರದಿಂದ ಮೂರು ಜನರು ಸೇರಿ ನಿಯೋಗ ಮುಖ್ಯಮಂತ್ರಿ ಹಾಗೂ ಎಐಸಿಸಿ ಅಧ್ಯಕ್ಷರನ್ನು ಭೇಟಿ ಮಾಡಿ → 4

# ಚಿಕ್ಕೋಡಿಯಲ್ಲಿ ಪ್ರಾಮಾಣಿಕತೆ ಮೆರೆದ ಕುಂದಾಪುರದ ವ್ಯಕ್ತಿ

■ ಕನ್ನಡ ಮಾತೃ ಭೂಮಿ ವಾರ್ತೆ

**ಚಿಕ್ಕೋಡಿ,ಜೂ.16-**ಇವರು ಉಡುಪಿ ಜಿಲ್ಲೆ, ಕುಂದಾಪುರ ತಾಲೂಕಿನ, ಸಣ್ಣ ಹಳ್ಳಿಯ ನಿವಾಸಿ, ಚಿಕ್ಕೋಡಿ ಪಟ್ಟಣದ ರಾಘವೇಂದ್ರ ಹೊಟೇಲ್ ಪಕ್ಕದಲ್ಲಿ, ಪಾನ್-ಬೀಡಾ ಅಂಗಡಿ ಮಾಡಿಕೊಂಡು ಜೀವನ ನಡೆಸುತ್ತಿದ್ದಾರೆ, ಇವರ ಹೆಸರು ರಾಜೀವ ಶೆಟ್ಟಿ, ರವಿವಾರ ದಿ : 14-06-2026 ರಂದು ಸಂಜೆಯ ಸಮಯಕ್ಕೆ ಒಬ್ಬ ಅಪರಿಚಿತ ವಿದ್ಯಾವಂತ ಯುವಕ, ಇವರ ಅಂಗಡಿಗೆ ಬಂದು ವ್ಯಾಪಾರ ಮಾಡಿ ಹಣ ಕೊಟ್ಟು ತೆರಳಿದರು,

ಅವರ ಪಾಕೆಟ್ (ಮನಿ ಪರ್ಸ) ಜಾರಿ ಇವರ ಅಂಗಡಿಯ ಮುಂದೆ ಬಿದ್ದಿತು, ಇದನ್ನು ಯಾರೂ ಕೂಡ ಕಂಡಿರಲಿಲ್ಲ, ಕೆಲ ಸಮಯದ ನಂತರ ರಾಜೀವ ಇವರ ಗಮನಕ್ಕೆ ಬಂದಿತು, ಕೂಡಲೇ ಅದನ್ನು ಎತ್ತಿಕೊಂಡ ರಾಜೀವ ಇದು ಯಾರದು ? ಎಂಬ ಬಗ್ಗೆ ಯೋಚಿಸಿದರು, ಗೊತ್ತಾಗದೇ ಇರುವಾಗ ಅವರು ಪಾಕೆಟ್ ತೆರೆದು ನೋಡಿದರು, ಅದರಲ್ಲಿ ಸುಮಾರು 10,000/- ಗಳ ವರೆಗೆ ಹಣ ಹಾಗೂ ಮಹತ್ವದ ಕಾರ್ಡುಗಳು ಕಂಡ ಅವರು ಗಾಬರಿಯಾದರು, ಅದರಲ್ಲಿ ವ್ಹಿ ಆರ್ ಎಲ್ ಬಸ್ ಟಿಕೇಟ್ ಕಂಡು ಬಂದಿತು,

ಯಾರಾದರೂ ಬರಬಹುದು ಎಂದು ಕಾದಿದಾಗ ಅಪರಿಚಿತ ಯುವಕ ಹುಡುಕುತ್ತಾ ಇವರ ಬಳಿ ಬಂದು ಪಾಕೆಟ್ ಕಂಡಿದ್ದೀರಾ ಅಂತಾ ಪ್ರಶ್ನಿಸಿದರು, ತಕ್ಷಣ ಪಾಕೀಟನ್ನು ಅವರ ಕೈಗೆ ನೀಡಿ ಮಾನವೀಯತೆ ಮೆರೆದರು, ಕೂಡಲೇ ಆ ಯುವಕ ಇವರ ಪ್ರಾಮಾಣಿಕ ನಡತೆಯನ್ನು ಕಂಡು ಒಂದು ಸಾವಿರ ರೂ ಹಣ ನೀಡಲು ಮುಂದಾದರು,

ಸದಾ ಅಡಚಣೆಯಲ್ಲಿರುವ ರಾಜೀವ ಹಣ ಸ್ವೀಕರಿಸದೇ ತಿರಸ್ಕರಿಸಿ ಪರರ ಹಣ ನಮಗೆ ಬೇಕಿಲ್ಲ ಸರ್, ಧನ್ಯವಾದಗಳು ಅಂತಾ ಹೇಳಿ ನಗುಮುಖದಿಂದ ಯುವಕನನ್ನು ಕಳಿಸಿದರು, ಇಲ್ಲಿ ನಾವು ಕಾಣುವುದು ಇಷ್ಟೇ ಎಷ್ಟೇ ಬಡತನ ಇದ್ದರೂ ತಮ್ಮ ಪ್ರಾಮಾಣಿಕ ಬದುಕು ಸಾಗಿಸುವ ಇಂತಹ ಗುಣವಂತರು ನಮ್ಮ ನಿಮ್ಮ ಮುಂದೆ ಇದ್ದಾರೆ ಎಂಬುದನ್ನು ಮೆಚ್ಚಲೇ ಬೇಕು.

# 28 ವರ್ಷಗಳ ಸೇವೆಗೆ ವಿದಾಯ: ಪಿಡಿಒ ಉಮೇಶಗೌಡ ತುಪ್ಪದಗೌಡ್ರ ಅವರಿಗೆ ಭಾವಪೂರ್ಣ ಬೀಳ್ಕೊಡುಗೆ



■ ಕನ್ನಡ ಮಾತೃ ಭೂಮಿ ವಾರ್ತೆ

**ಕುಂದಗೋಳ,ಜೂ.16-**ಧಾರವಾಡ ಜಿಲ್ಲೆಯ ಕುಂದಗೋಳ ತಾಲೂಕಿನ ಕಮಡೊಳ್ಳಿ ಗ್ರಾಮ ಪಂಚಾಯಿತಿಯ ಗ್ರೇಡ್-2 ಕಾರ್ಯದರ್ಶಿ ಹಾಗೂ ಪ್ರಭಾರಿ ಗ್ರಾಮ ಪಂಚಾಯಿತಿ ಅಭಿವೃದ್ಧಿ ಅಧಿಕಾರಿ (ಪಿಡಿಒ) ಉಮೇಶಗೌಡ ತುಪ್ಪದಗೌಡ್ರ ಅವರು ಪಂಚಾಯತ್ ರಾಜ್ ಇಲಾಖೆಯಲ್ಲಿ 28 ವರ್ಷಗಳ ಕಾಲ ಪ್ರಾಮಾಣಿಕ ಹಾಗೂ ದಕ್ಷ ಸೇವೆ ಸಲ್ಲಿಸಿ ವಯೋನಿವೃತ್ತಿ ಹೊಂದಿದರು.

ಈ ಹಿನ್ನೆಲೆಯಲ್ಲಿ ಅವರಿಗೆ ಗ್ರಾಮ ಪಂಚಾಯಿತಿ ವತಿಯಿಂದ ಭಾವಪೂರ್ಣ ಬೀಳ್ಕೊಡುಗೆ ಸಮಾರಂಭವನ್ನು ಆಯೋಜಿಸಲಾಗಿತ್ತು.

ಕಾರ್ಯಕ್ರಮವನ್ನು ಗಣ್ಯರ ಸ್ವಾಗತ ಹಾಗೂ ಪ್ರಾರ್ಥನೆಯೊಂದಿಗೆ ಆರಂಭಿಸಲಾಯಿತು. ಸಮಾರಂಭದಲ್ಲಿ ಉಮೇಶಗೌಡ ತುಪ್ಪದಗೌಡ್ರ ಅವರು ತಮ್ಮ ಸುದೀರ್ಘ ಸೇವಾ ಅವಧಿಯ ಸಿಹಿ-ಕಹಿ ಅನುಭವಗಳನ್ನು ಹಂಚಿಕೊಂಡು, ಸಹೋದ್ಯೋಗಿಗಳು ಮತ್ತು ಗ್ರಾಮಸ್ಥರೊಂದಿಗೆ ಹೊಂದಿದ್ದ ಆತ್ಮೀಯ ಒಡನಾಟವನ್ನು ಸ್ಮರಿಸಿದರು.

ಧಾರವಾಡ ಜಿಲ್ಲಾ ಪಂಚಾಯಿತಿ ಹಾಗೂ ಕುಂದಗೋಳ ತಾಲೂಕು ಪಂಚಾಯಿತಿಯ ಅಧಿಕಾರಿಗಳು, ಗ್ರಾಮ ಪಂಚಾಯಿತಿ ಸಿಬ್ಬಂದಿ ವರ್ಗ, ಅಧ್ಯಕ್ಷರು, ಉಪಾಧ್ಯಕ್ಷರು, ಸದಸ್ಯರು, ಊರಿನ ಹಿರಿಯರು, ರಾಜಕೀಯ ಮುಖಂಡರು ಮತ್ತು ಗ್ರಾಮಸ್ಥರು ಕಾರ್ಯಕ್ರಮದಲ್ಲಿ ಭಾಗವಹಿಸಿ ಅವರನ್ನು ಸನ್ಮಾನಿಸಿ ಗೌರವ ಸಲ್ಲಿಸಿದರು.

ಈ ವೇಳೆ ಮಾತನಾಡಿದ ಗಣ್ಯರು, ಉಮೇಶಗೌಡ ತುಪ್ಪದಗೌಡ್ರ, ಅವರು ತಮ್ಮ ಸೇವಾ ಅವಧಿಯಲ್ಲಿ ಸರ್ಕಾರದ

ವಿವಿಧ ಯೋಜನೆಗಳನ್ನು ಜನಸಾಮಾನ್ಯರಿಗೆ ಪರಿಣಾಮಕಾರಿಯಾಗಿ ತಲುಪಿಸುವಲ್ಲಿ ಮಹತ್ವದ ಪಾತ್ರ ವಹಿಸಿದ್ದು, ಗ್ರಾಮಗಳ ಸರ್ವತೋಮುಖ ಅಭಿವೃದ್ಧಿಗೆ ತಮ್ಮದೇ ಆದ ಕೊಡುಗೆ ನೀಡಿದ್ದಾರೆ ಎಂದು ಪ್ರಶಂಸಿಸಿದರು.

ನಿವೃತ್ತಿ ಅಂಗವಾಗಿ ಅವರಿಗೆ ಶಾಲು, ಹಾರ ಹಾಗೂ ಸ್ಮರಣಿಕೆ ನೀಡಿ ಗೌರವಿಸಲಾಯಿತು. ಅವರ ಮುಂದಿನ ಜೀವನ ಆರೋಗ್ಯಕರ, ಸುಖಮಯ ಮತ್ತು ನೆಮ್ಮದಿಯಿಂದ ಕೂಡಿರಲಿ ಎಂದು ಎಲ್ಲರೂ ಶುಭ ಹಾರೈಸಿದರು.

ಕಾರ್ಯಕ್ರಮದ ಕೊನೆಯಲ್ಲಿ ಆಗಮಿಸಿದ ಎಲ್ಲರಿಗೂ ವಂದನಾರ್ಪಣೆ ಸಲ್ಲಿಸಿ, ಊಟೋಪಚಾರದೊಂದಿಗೆ ಸಮಾರಂಭವನ್ನು ಮುಕ್ತಾಯಗೊಳಿಸಲಾಯಿತು.

# ಭಕ್ತಿ ಸಂಗೀತದಿಂದ ಯಾಂತ್ರಿಕ ಜೀವನದಿಂದ ಹೊರ ಬರಲು ಸಾಧ್ಯ: ಎಂ.ಜಿ.ರಾವ್



**ಬೆಳಗಾವಿ,ಜೂ.16-** ಇಂತಹ ಭಕ್ತಿ ಸಂಗೀತದ ಕಾರ್ಯಕ್ರಮ ಆಗಿಂದಾಗ್ಗೆ ನಡೆಯುತ್ತಿರಬೇಕು. ಇದು ಇಂದಿನ ಯಾಂತ್ರಿಕ ಜೀವನದಿಂದ ಹೊರ ಬರುವ ಸುಲಭ ಉಪಾಯ ಎಂದು ಖ್ಯಾತ ಸಂಗೀತ ವಿದ್ವಾನ್ ಎಂ.ಜಿ. ರಾವ್ ಹೇಳಿದರು.

ನಗರದ ನಾದ ಸುಧಾ ಸುಗಮ ಸಂಗೀತ ಶಾಲೆಯಲ್ಲಿ ಆಯೋಜಿಸಲಾಗಿದ್ದ ಅಧಿಕ ಜೇಷ್ಠ ಮಾಸದ ಭಕ್ತಿ ಸಂಗೀತ ಕಾರ್ಯಕ್ರಮದಲ್ಲಿ ಮಾತನಾಡಿದರು.

ಎಲ್ಲಾ ಮಕ್ಕಳು ತುಂಬಾ ಭಕ್ತಿ ಪೂರ್ವಕವಾಗಿ ಭಕ್ತಿ ಗೀತೆಗಳನ್ನು ಪ್ರಸ್ತುತಪಡಿಸಿದ್ದಾರೆ. ಈ ತರದ ಕಾರ್ಯಕ್ರಮಗಳಿಂದ ಮಕ್ಕಳಲ್ಲಿ ಆಧ್ಯಾತ್ಮಿಕದ ಅರಿವು ಮೂಡಿಸುವುದರ ಜೊತೆಗೆ ನಮ್ಮ ಸಂಸ್ಕೃತಿಯನ್ನು ಉಳಿಸಿ ಬೆಳೆಸಿದಂತಾಗುತ್ತದೆ ಎಂದು ಹೇಳಿದರು.

ಸಂಗೀತ ಶಾಲೆಯ ಎಲ್ಲಾ ಮಕ್ಕಳು ಕನ್ನಡ, ಹಿಂದಿ ಹಾಗೂ ಮರಾಠಿ ಭಕ್ತಿಗೀತೆಗಳನ್ನು ಭಕ್ತಿ ಭಾವದಿಂದ ಹಾಡಿದರು.

ಸಂಗೀತ ಶಾಲೆಯ ಸಂಸ್ಥಾಪಕ ಡಾ.ಸತ್ಯನಾರಾಯಣ್ ಅವರು ಪ್ರಾಸ್ತಾವಿಕ ಮಾತನಾಡಿ ಸ್ವಾಗತಿಸಿದರು. ಉಮಾ ಮನವಾಡಿ ವಂದಿಸಿದರು.

# ಬಾಲ ಕಾರ್ಮಿಕ ಪದ್ಧತಿ ಸಮಾಜಕ್ಕೆ ಮಾರಕ: ಪಿಎಸ್ಐ ಕೆ.ನಾಗರತ್ನಮ್ಮ




■ ಕನ್ನಡ ಮಾತೃ ಭೂಮಿ ವಾರ್ತೆ

**ಹರಪನಹಳ್ಳಿ,ಜೂ.16-**ಬಾಲ ಕಾರ್ಮಿಕ ಪದ್ಧತಿ ಸಮಾಜಕ್ಕೆ ಮಾರಕವಾಗಿದ್ದು,ಅದರ ನಿರ್ಮೂಲನೆಗಾಗಿ ನಿರಂತರ ಜಾಗೃತಿ ಮೂಡಿಸುವುದು ಅತ್ಯವಶ್ಯಕ ಎಂದು ಚಿಗಟೇರಿ ಪೊಲೀಸ್ ಠಾಣೆ ಪಿಎಸ್ಐ ಕೆ.ನಾಗರತ್ನಮ್ಮ ತಿಳಿಸಿದರು.

ತಾಲೂಕಿನ ಹಗರಿ ಗಜಾಪುರ ಗ್ರಾಮದ ಸರ್ಕಾರಿ ಪ್ರೌಢಶಾಲೆಯಲ್ಲಿ ಭಾವೈಕ್ಯತೆ ಸಮಾಜಮುಖಿ ಟ್ರಸ್ಟ್ ಸಹಯೋಗದಲ್ಲಿ ಮಂಗಳವಾರ ನಡೆದ ವಿಶ್ವ ಬಾಲಕಾರ್ಮಿಕ ಪದ್ಧತಿ ವಿರೋಧಿ ದಿನಾಚರಣೆಯನ್ನು ಉದ್ಘಾಟಿಸಿ ಅವರು ಮಾತನಾಡಿದರು.

ಪ್ರತಿಯೊಬ್ಬ ಮಗುವಿಗೂ ಶಿಕ್ಷಣ ಪಡೆಯುವ ಹಕ್ಕಿದ್ದು, ಪೋಷಕರು ಮಕ್ಕಳ ಭವಿಷ್ಯವನ್ನು ಗಮನದಲ್ಲಿಟ್ಟುಕೊಂಡು ಅವರನ್ನು ಶಾಲೆಯಿಂದ ಹೊರಗಿಡದೆ, ಶಿಕ್ಷಣ ಮುಂದುವರಿಸಲು ಪ್ರೋತ್ಸಾಹಿಸಬೇಕು, ಬಾಲ ಕಾರ್ಮಿಕ ಪದ್ಧತಿ ಸಮಾಜಕ್ಕೆ ಮಾರಕವಾಗಿದ್ದು,ಅದರ ನಿರ್ಮೂಲನೆಗಾಗಿ ನಿರಂತರ ಜಾಗೃತಿ ಮೂಡಿಸುವುದು ಅತ್ಯವಶ್ಯಕವಾಗಿದೆ ಎಂದು ಸಲಹೆ ನೀಡಿದರು.

ಭಾವೈಕ್ಯತೆ ಸಮಾಜಮುಖಿ ಟ್ರಸ್ಟಿನ ಬಿ.ಭಾಗ್ಯ ಮಾತನಾಡಿ;18ನೇ ಶತಮಾನದ ಕೊನೆ,ಹಾಗೂ 19ನೇ ಶತಮಾನದ ಪ್ರಾರಂಭದಲ್ಲಿ ಬಾಲ ಕಾರ್ಮಿಕ ಪದ್ಧತಿಯು ಉದ್ಭವವಾಗಿದ್ದು ಎಲ್ಲೆಡೆ ಬಾಲ ಕಾರ್ಮಿಕ ಪದ್ಧತಿಯು ತಲೆ ಎತ್ತಿದೆ ಆದ್ದರಿಂದ ಇಂದಿನ ಮಕ್ಕಳನ್ನು ದುಡಿಮೆಗೆ ತಳ್ಳುವ ಬದಲು ಶಾಲೆಗೆ ಕಳುಹಿಸಿ ಅವರಿಗೆ ಉತ್ತಮ ಭವಿಷ್ಯ ರೂಪಿಸಲು ಪೋಷಕರು ಮುಂದಾಗಬೇಕು ಎಂದರು.

ಬಳಿಗನೂರು ಕೊಟ್ರೇಶ್ ಮಾತನಾಡಿ ವಿದ್ಯಾರ್ಥಿಗಳಿಗೆ ಬಾಲ ಕಾರ್ಮಿಕ ಪದ್ಧತಿಯ ದುಷ್ಪರಿಣಾಮಗಳ ಕುರಿತು ಅರಿವು ಮೂಡಿಸಿದರು. ಈ ಸಂದರ್ಭದಲ್ಲಿ ಶಾಲೆಯ ಮುಖ್ಯ ಶಿಕ್ಷಕ ಕುಮಾರಸ್ವಾಮಿ,ಹಾಗೂ ಶಾಲೆಯ ಶಿಕ್ಷಕರು, ಸಿಬ್ಬಂದಿಗಳು,ಮತ್ತು ಭಾವೈಕ್ಯತೆ ಸಮಾಜಮುಖಿ ಟ್ರಸ್ಟ್ ಪದಾಧಿಕಾರಿಗಳು, ಸೇರಿದಂತೆ ವಿದ್ಯಾರ್ಥಿಗಳು ಇದ್ದರು.

# ಎಂಪಿ ತುಕಾರಾಂ ವಿರುದ್ಧ ಬಳ್ಳಾರಿಯಲ್ಲಿ ಬಿಜೆಪಿ ಪ್ರತಿಭಟನೆ

■ ಕನ್ನಡ ಮಾತೃ ಭೂಮಿ ವಾರ್ತೆ

**ಬಳ್ಳಾರಿ, ಜೂ.16-**ಲೋಕಸಭಾ ಸದಸ್ಯ ಈ. ತುಕಾರಾಂ ವಿರುದ್ಧ ಜಿಲ್ಲೆಯ ಬಿಜೆಪಿ ನಾಯಕರು ಸಿಡಿದೆದ್ದು ನಗರದ ಗಡಗಿ ಚೆನ್ನಪ್ಪ ವೃತ್ತದಲ್ಲಿ ಇಂದು ಮಾನವ ಸರಪಳಿ ರಚಿಸಿ ತುಕಾರಾಂ ಅವರ ಪ್ರತಿಕೃತಿ ಧಹಿಸಿ ಅಕ್ರೋಶ ವ್ಯಕ್ತಪಡಿಸದರು.

ರಾಷ್ಟ್ರೀಯ ಹೆದ್ದಾರಿಯ ಕಾಮಗಾರಿ ಕಳಪೆ ಆಗಿದೆಂದು ಡಣಾಪುರ ಬಳಿ ವ್ಯಕ್ತಿಯೋರ್ವ ವೀಡಿಯೋ ಮಾಡಿ ಪ್ರಶ್ನೆ ಮಾಡಿದ್ದಕ್ಕಾಗಿ ಆತನಿಗೆ ಅಶ್ಲೀಲ ಪದ ಬಳಕೆ ಮಾಡಿ ಬೈದೊರುವುದನ್ನು ಖಂಡಿಸಿ ಈ ಪ್ರತಿಭಟನೆ ನಡೆಸಲಾಯ್ತು.

ಕಳಪೆ ಕಾಮಗಾರಿ ಬಗ್ಗೆ ಪ್ರಶ್ನೆ ಮಾಡಿ ವೀಡಿಯೋ ಮಾಡಿದ್ದ ಯುವಕನ ಬಗ್ಗೆ ಕಳ್ಳಮುಂಡೆ ಮಕ್ಕಳು ಏನೇನೂ ಮಾಡ್ತಾರೆ, ಎಚ್ಚರಿಕೆಯಿಂದ ಕೆಲಸ ಮಾಡಬೇಕು ಎಂದಿದ್ದರು. ಅಲ್ಲದೇ ವಿಡಿಯೋ ಮಾಡಿದ ಯುವಕನನ್ನು ಕರೆಸಿ ಬೈದಿದ್ದರಂತೆ ತುಕಾರಾಂ ಅವರು.

ಅದಕ್ಕಾಗಿ ತುಕಾರಾಂ ವಿರುದ್ಧ ಘೋಷಣೆಕೂಗಿ ಸಂಸದ ಸ್ಥಾನಕ್ಕೆ ರಾಜೀನಾಮೆ ನೀಡುವಂತೆ ಮತ್ತು ಅವಾಚ್ಯ ಶಬ್ದ ಬಳಸಿದ ಅವರ ಮೇಲೆ ಕಾನೂನು ಕ್ರಮ ತೆಗೆದುಕೊಳ್ಳುವಂತೆ ಆಪ್ರಹೊಸಲಾಯ್ತು.

ರಾಜ್ಯ ಬಿಜೆಪಿ ಕಾರ್ಯದರ್ಶಿ ಕೆ.ಎಸ್.ದಿವಾರ್ಕ,ಜಿಲ್ಲಾ ಅಧ್ಯಕ್ಷ ಅನಿಲ್ ನಾಯ್ಡು, ರೈತ ಮೋರ್ಚಾ ರಾಜ್ಯ ಉಪಾಧ್ಯಕ್ಷ ಎಸ್. ಗುರುಲಿಂಗನಗೌಡ, ಡಾ.ಅರುಣಾ ಕಾಮಿನೇನಿ ಮೊದಲಾದವರು ಪಾಲ್ಗೊಂಡಿದ್ದರು.



# ಪ್ರಸಾದ್ ಅಬ್ಬಯ್ಯಗೆ ಸಚಿವ ಸ್ಥಾನ ನೀಡುವಂತೆ ಆಗ್ರಹಿಸಿ ಪೂರ್ವಭಾವಿ ಸಭೆ



■ ಕನ್ನಡ ಮಾತೃ ಭೂಮಿ ವಾರ್ತೆ

**ಹುಬ್ಬಳ್ಳಿ,ಜೂ.16-**ಹುಬ್ಬಳ್ಳಿ-ಧಾರವಾಡ ಪೂರ್ವ ವಿಧಾನಸಭಾ ಕ್ಷೇತ್ರದ ಜನಪ್ರಿಯ ಶಾಸಕರಾದ ಪ್ರಸಾದ್ ಅಬ್ಬಯ್ಯ ಅವರಿಗೆ ಸಚಿವ ಸ್ಥಾನ ನೀಡುವಂತೆ ಆಗ್ರಹಿಸಿ ಹಿರಿಯರು, ಮಾರ್ಗದರ್ಶಕರು ಹಾಗೂ ಅಭಿಮಾನಿ ಬಳಗದ ವತಿಯಿಂದ ಪೂರ್ವಭಾವಿ ಸಭೆ ನಡೆಯಿತು.

ಸಭೆಯಲ್ಲಿ ಮಾತನಾಡಿದ ಮುಖಂಡರು, ಹುಬ್ಬಳ್ಳಿ-ಧಾರವಾಡ ಪೂರ್ವ ವಿಧಾನಸಭಾ ಕ್ಷೇತ್ರದ ಅಭಿವೃದ್ಧಿಗೆ ಹಾಗೂ ಅವಳಿ ನಗರದ ಸಮಗ್ರ ಪ್ರಗತಿಗೆ ಪ್ರಸಾದ್ ಅಬ್ಬಯ್ಯ ಅವರಿಗೆ ಸಚಿವ ಸ್ಥಾನ ನೀಡುವುದು ಅಗತ್ಯವಾಗಿದೆ

ಎಂದು ಅಭಿಪ್ರಾಯಪಟ್ಟರು. ರಾಜ್ಯ ಸರ್ಕಾರದಲ್ಲಿ ಈ ಭಾಗಕ್ಕೆ ಸಮರ್ಪಕ ಪ್ರಾತಿನಿಧ್ಯ ದೊರೆಯದಿರುವ ಹಿನ್ನೆಲೆಯಲ್ಲಿ ಸಚಿವ ಸ್ಥಾನ ನೀಡುವ ಮೂಲಕ ಅಭಿವೃದ್ಧಿ ಕಾರ್ಯಗಳಿಗೆ ಮತ್ತಷ್ಟು ವೇಗ ನೀಡಬೇಕು ಎಂದು ಒತ್ತಾಯಿಸಿದರು.

ಪ್ರಸಾದ್ ಅಬ್ಬಯ್ಯ ಅವರು ಕ್ಷೇತ್ರದಲ್ಲಿ ಹಲವು ಜನಪರ ಹಾಗೂ ಅಭಿವೃದ್ಧಿ ಕಾರ್ಯಗಳನ್ನು ಕೈಗೊಂಡಿದ್ದು, ಅವರ ಅನುಭವ ಮತ್ತು ಜನಪರ ಸೇವೆಯನ್ನು ಪರಿಗಣಿಸಿ ಸಚಿವ ಸಂಪುಟದಲ್ಲಿ ಅವಕಾಶ ಕಲ್ಪಿಸಬೇಕು ಎಂದು ಸಭೆಯಲ್ಲಿ ಆಗ್ರಹಿಸಲಾಯಿತು.

ಸಭೆಯಲ್ಲಿ ಗುರುನಾಥ ಉಳ್ಳಿಕಾಶಿ, ಮೋಹನ್ ಲಿಂಬಿಕಾಯಿ, ಸನದಿ ಸೇರಿದಂತೆ ಕಾಂಗ್ರೆಸ್ ಪಕ್ಷದ ಹಲವಾರು ಮುಖಂಡರು, ಹಿರಿಯರು ಹಾಗೂ ಕಾರ್ಯಕರ್ತರು ಭಾಗವಹಿಸಿ ತಮ್ಮ ಅಭಿಪ್ರಾಯಗಳನ್ನು ವ್ಯಕ್ತಪಡಿಸಿದರು.

# 28 ವರ್ಷಗಳ ಕಾಲ ಪಂಚಾಯತ್ ರಾಜ್ ಇಲಾಖೆಯಲ್ಲಿ ಸೇವೆ ಉಮೇಶಗೌಡ ತುಪ್ಪದಗೌಡ್ರ



■ ಕನ್ನಡ ಮಾತೃ ಭೂಮಿ ವಾರ್ತೆ

**ಹುಬ್ಬಳಿ,**ಶ್ರೀ ಉಮೇಶಗೌಡ ತುಪ್ಪದಗೌಡ್ರ 28 ವರ್ಷ್ಗಳ ಕಾಲ ಪಂಚಾಯತ್ ರಾಜ್ ಇಲಾಖೆಯಲ್ಲಿ ಸೇವೆ ಕಾರ್ಯನಿರ್ವಹಿಸಿ ವಯೋನಿವೃತ್ತಿ ಸೇವೆಯನ್ನು ಸಲ್ಲಿಸಿ ತಮ್ಮ ಕರ್ತವ್ಯವನ್ನು ಸೇವೆ ಸಲ್ಲಿಸಿದರ್.ಧಾರವಾಡ ಜಿಲ್ಲಾ ಕುಂದಗೋಳ ತಾಲೂಕು ಕಮಡೊಳ್ಳಿ ಗ್ರಾಮ ಪಂಚಾಯಿತಿ ಗ್ರೇಡ್ -2 ಕಾರ್ಯದರ್ಶಿ ಮತ್ತು ಪ್ರಭಾರಿ ಅಭಿವೃದ್ಧಿ ಅಧಿಕಾರಿಗಳು ಉಮೇಶಗೌಡ ತುಪ್ಪದಗೌಡ್ರುವ್ವಯೋ ನಿವೃತ್ತಿ ಹೊಂದಿದ್ದರು.

ಸಮಾರಂಭದ ಪ್ರಮುಖ ಹಂತಗಳು ಸ್ವಾಗತ ಮತ್ತು ಪ್ರಾರ್ಥನೆ ಕಾರ್ಯಕ್ರಮದ ಆರಂಭದಲ್ಲಿ ಗಣ್ಯರನ್ನು ಸ್ವಾಗತಿಸಿ ನಾಡಗೀತೆ ಅಥವಾ ಪ್ರಾರ್ಥನೆಯೊಂದಿಗೆ ಕಾರ್ಯಕ್ರಮಕ್ಕೆ ಚಾಲನೆ ನೀಡಿದ್ದರ್. ಅನುಭವ ಹಂಚಿಕೆ ನಿವೃತ್ತರು ತಮ್ಮ ವೃತ್ತಿ ಜೀವನದ ಸಿಹಿ ಮತ್ತು ಕಹಿ ಅನುಭವಗಳನ್ನು ಮತ್ತು ಸಹೋದ್ಯೋಗಿ ಗಳೊಂದಿಗಿನ ಒಡನಾಟವನ್ನು ಹಂಚಿಕೊಳ್ಳುತ್ತಾರೆ ಅಭಿನಂದನೆ ಸಲ್ಲಿಸಿದ್ದರು

ಹಿರಿಯ ಅಧಿಕಾರಿಗಳು ಸಹೋದ್ಯೋಗಿಗಳು ಹಾಗೂ ಆಪ್ತರು ಅವರ ನಿಸ್ವಾರ್ಥ ಸೇವೆ ಮತ್ತು ಸಾಧನೆಗಳನ್ನು ನೆನಪಿಸಿಕೊಂಡು ಮಾತನಾಡುತ್ತಾರ್ ಉಡುಗೊರೆ ಮತ್ತು ಶುಭ ಹಾರೈಸಿದ್ದರು.. ಧಾರವಾಡ ಜಿಲ್ಲಾ ಪಂಚಾಯಿತ ಅಧಿಕಾರಿಗಳು ಹಾಗೂ ಕುಂದಗೋಳ ತಾಲೂಕು ಪಂಚಾಯತಿ ಅಧಿಕಾರಿಗಳು ಗ್ರಾಮ ಪಂಚಾಯಿತಿ ಸಿಬ್ಬಂದಿ ವರ್ಗದವರು..

ಕಚೇರಿಯ ಸಿಬ್ಬಂದಿ ಅಥವಾ ಸಂಸ್ಥೆಯ ವತಿಯಿಂದ ಪ್ರೀತಿಯ ಕಾಣಿಕೆಗಳನ್ನು ನೀಡಿ ಅವರ ಮುಂದಿನ ಆರೋಗ್ಯ ಪೂರ್ಣ ಹಾಗೂ ನೆಮ್ಮದಿಯ ಜೀವನಕ್ಕೆ ಹಾರೈಸಲಾಗುತ್ತದ್.

ಗ್ರಾಮ ಪಂಚಾಯತ್ ಅಭಿವೃದ್ಧಿ ಅಧಿಕಾರಿಯ (ಕಈಣ) ವಯೋನಿವೃತ್ತಿ ಬೀಳ್ಕೊಡುಗೆ ಸಮಾರಂಭಕ್ಕೆ ಸುಂದರವಾಗಿದೆ.. ಅಧ್ಯಕ್ಷರು, ಉಪಾಧ್ಯಕ್ಷರು, ಸದಸ್ಯರು, ಊರಿನ ರಾಜಕೀಯ ಮುಖಂಡರು ಹಿರಿಯರು ಹಾಗೂ ಗ್ರಾಮಸ್ಥರ್ ಪ್ರಾಮಾಣಿಕವಾಗಿ ಹಾಗೂ ದಕ್ಷತೆಯಿಂದ ಇಲಾಖೆಗೆ ಸೇವೆ ಸಲ್ಲಿಸಿದ್ದಾರೆ ಇಂದಿನಿಂದ ವಯೋನಿವೃತ್ತಿ ಹೊಂದುತ್ತಿರುವ ನಮ್ಮ ಹೆಮ್ಮೆಯ ಪಿಡಿಓ ಅವರನ್ನು ಕಾರ್ಯಕ್ರಮಕ್ಕೆ ಆತ್ಮೀಯವಾಗಿ ಸ್ವಾಗತಿಸಿದ್ದರು. ಅಭಿನಂದನಾ ನುಡಿಗಳು ಗೌರವಾರ್ಪಣೆ ದಕ್ಷ ಆಡಳಿತ್ ಇವರು ಪಂಚಾಯಿತಿಯಲ್ಲಿ ಕೈಗೊಂ ಡ ಅಭಿವೃದ್ಧಿ ಕಾರ್ಯಗಳು ಸರ್ಕಾರದ ಯೋಜನೆಗಳನ್ನು ಜನಸಾಮಾನ್ಯರಿಗೆ ತಲುಪಿಸಿದ್ದಾರೆ ಪ್ರಾಮಾಣಿಕತೆ ಮತ್ತು ಗ್ರಾಮದ ಸರ್ವತೋಮುಖ ಅಭಿವೃದ್ಧಿಗೆ ನೀಡಿದ ಕೊಡುಗೆಯನ್ನು ಸ್ಮರಿಸುವುದು ಸಹಕಾರ ಸಿಬ್ಬಂದಿ ವರ್ಗದವರೊಂದಿಗೆ ಹಾಗೂ ಗ್ರಾಮಸ್ಥರೊಂದಿಗೆ ಹೊಂದಿದ್ದ ಉತ್ತಮ ಬಾಂಧವ್ಯವನ್ನು ಕೊಂಡಾಡುವುದು ಬೀಳ್ಕೊಡುಗೆ ಹಾಗೂ ಶುಭ ಹಾರೈಸಿದರು.ಗ್ರಾಮ ಪಂಚಾಯಿತಿ ಪಿಡಿಓ ನಿವೃತ್ತಿ ಅಧಿಕಾರಿಗಳಿಗೆ ಶಾಲು, ಹಾರ, ಸ್ಮರಣಿಕೆ ನೀಡಿ ಸನ್ಮಾನಿಸ್ ಗೌರವಿಸುವುದ್ ಶುಭ ಹಾರೈಕೆ ಅವರ ಮುಂದಿನ ನಿವೃತ್ತಿ ಜೀವನವು ಆರೋಗ್ಯಕರವಾಗಿರಲಿ ನೆಮ್ಮದಿಯಿಂದ ಕೂಡಿರಲಿ ಎಂದು ಪ್ರಾರ್ಥಿಸುವುದು ಎಂದರು ಗ್ರಾಮ ಪಂಚಾಯತ್ ಅಭಿವೃದ್ಧಿ ಅಧಿಕಾರಿಯ (ಕಈಣ) ವಯೋನಿವೃತ್ತಿ ಬೀಳ್ಕೊಡುಗೆ ಸಮಾರಂಭಕ್ಕೆ ಸುಂದರವಾದ ಮತ್ತು ಅರ್ಥಪೂರ್ಣವಾದ ಸ್ವಾಗತ ಭಾಷಣ, ಅಭಿನಂದನಾ ನುಡಿಗಳು ಮತ್ತು ನಿರೂಪಣಾ ಹಂತಗಳು ಇಲ್ಲಿವೆ ಸ್ವಾಗತ ವಾಗಿದೆ

ಸ್ವಾಮೀಜಿಗಳು ಹಾಗೂ ಶಾಸಕರು ಊರಿನ ಹಿರಿಯರು ಗ್ರಾಮಸ್ಥರ್ ಸ್ವಾಗತ ಪ್ರಾಮಾಣಿಕವಾಗಿ ಹಾಗೂ ದಕ್ಷತೆಯಿಂದ ಇಲಾಖೆಗೆ ಸೇವೆ ಸಲ್ಲಿಸಿ ವಯೋನಿವೃತ್ತಿ ಹೊಂದುತ್ತಿರುವ ನಮ್ಮ ಹೆಮ್ಮೆಯ ಪಿಡಿಓ ಅವರನ್ನು ಕಾರ್ಯಕ್ರಮವನ್ನು

ಅಭಿನಂದನಾ ನುಡಿಗಳು (ಗೌರವಾರ್ಪಣೆ)ದಕ್ಷ ಆಡಳಿತ: ಇವರು ಪಂಚಾಯಿತಿಯಲ್ಲಿ ಕೈಗೊಂಡ ಅಭಿವೃದ್ಧಿ ಕಾರ್ಯಗಳು, ಸರ್ಕಾರದ ಯೋಜನೆಗಳನ್ನು ಜನಸಾಮಾನ್ಯರಿಗೆ ತಲುಪಿಸಿದ್ದರು ಪ್ರಾಮಾಣಿಕತೆ ಮತ್ತು ಗ್ರಾಮದ ಸರ್ವತೋಮುಖ ಅಭಿವೃದ್ಧಿಗೆ ನೀಡಿದ ಕೊಡುಗೆಯನ್ನು ಸ್ಮರಿಸುವುದು. ಸಹಕಾರ: ಸಿಬ್ಬಂದಿ ವರ್ಗದವರೊಂದಿಗೆ ಹಾಗೂ ಗ್ರಾಮಸ್ಥರೊಂದಿಗೆ ಹೊಂದಿದ್ದ ಉತ್ತಮ ಬಾಂಧವ್ಯವನ್ನು ಕೊಂಡಾಡುವುದು ಬೀಳ್ಕೊಡುಗೆ ಹಾಗೂ ಶುಭ ಹಾರೈಕೆಸನ್ಮಾನ: ನಿವೃತ್ತಿ ಅಧಿಕಾರಿಗೆ ಶಾಲು, ಹಾರ, ಸ್ಮರಣಿಕೆ ನೀಡಿ ಸನ್ಮಾನಿಸಿ, ಗೌರವಿಸುವುದು.ಶುಭ ಹಾರೈಕೆ: ಅವರ ಮುಂದಿನ ನಿವೃತ್ತಿ ಜೀವನವು ಆರೋಗ್ಯಕರವಾಗಿರಲಿ, ನೆಮ್ಮದಿಯಿಂದ ಕೂಡಿರಲಿ ಎಂದು ಪ್ರಾರ್ಥಿಸುವುದು. ವಂದನಾರ್ಪಣೆ ಮತ್ತು ಊಟೋಪಚಾರ: ಕೊನೆಯಲ್ಲಿ ಆಗಮಿಸಿದ ಎಲ್ಲರಿಗೂ ಧನ್ಯವಾದಗಳನ್ನು ಅರ್ಪಿಸಿ ಔತಣಕೂಟದೊಂದಿಗೆ ಕಾರ್ಯಕ್ರಮ ಮುಕ್ತಾಯಗೊಳಿಸಿದ್ದರು.

# ನಾಟಕಗಳು ಕಾಲಘಟ್ಟದ ಸಾಮಾಜಿಕ ಸ್ಥಿತಿಯ ಕನ್ನಡಿ

■ ಕನ್ನಡ ಮಾತೃ ಭೂಮಿ ವಾರ್ತೆ

**ಬಳ್ಳಾರಿ,** ನಾಟಕಗಳು ಆಯಾ ಕಾಲಘಟ್ಟದ ಸಾಮಾಜಿಕ ಪರಿಸ್ಥಿತಿಯ ಕನ್ನಡಿ ಹಿಡಿಯುವ ಕೆಲಸ ಮಾಡುತ್ತಿದ್ದು ವರ್ತಮಾನದಲ್ಲಿ ಪ್ರಭಾವ ಬೀರುತ್ತವೆ ಎಂದು ವಿಧಾನಪರಿಷತ್ ಸದಸ್ಯ ಸಿ.ಟಿ.ರವಿ ತಿಳಿಸಿದರು. ತಾಲೂಕಿನ ಕಪ್ಪಗಲ್ಲು ಗ್ರಾಮದಲ್ಲಿ ರಂಗತೋರಣ ಸಾಂಸ್ಕೃತಿಕ ಸಂಘಟನೆ ಹಮ್ಮಿಕೊಂಡಿದ್ದ ಕಪ್ಪಗಲ್ಲು ನಾಟಕೋತ್ಸವದಲ್ಲಿ ಹಿರಿಯ ರಂಗಭೂಮಿ ಕಲಾವಿದರಾದ ಆದವಾನಿ ವೀಣಾ ಹಾಗೂ ಶ್ರೀಧರ ಹೆಗಡೆ ಅವರಿಗೆ ರಾಜ್ಯಮಟ್ಟದ ಸಾಂಸ್ಕೃತಿಕ ಸಾರ್ವಭೌಮ ಜೋಳದರಾಶಿ ದೊಡ್ಡನಗೌಡ ರಂಗತೋರಣ ಪುರಸ್ಕಾರ ಪ್ರದಾನ ಮಾಡಿ ಅವರು ಮಾತನಾಡಿದರು.

ಮಹಾತ್ಮಗಾಂಧೀಜಿಯವರ ಮೇಲೆ ಹರಿಶ್ಚಂದ್ರ ನಾಟಕ ಪ್ರಭಾವ ಬೀರಿತ್ತು. ವ್ಯಕ್ತಿ ಅಥವಾ ಜನಸಮುದಾಯದ ಮೇಲೆ ಪ್ರಭಾವ ಬೀರುವ ಶಕ್ತಿ ರಂಗಭೂಮಿಗಿದೆ. ನಿರಂತರ ನಾಟಕೋತ್ಸವಗಳ ಮೂಲಕ ಜನರ ಮನಸ್ಸನ್ನು ಅರಳಿಸುವ ಕೆಲಸ ಮಾಡುತ್ತಿರುವ ರಂಗತೋರಣ ಕಾರ್ಯ ಶ್ಲಾಘನೀಯ. ಗ್ರಾಮೀಣ ಪರಿಸರದಲ್ಲಿ ರಂಗಚಟುವಟಿಕೆಗಳು ನಿರಂತರವಾಗಿ ನಡೆಯುವಂತಾಗಬೇಕು. ಆಗ ಮಾತ್ರ ಸಾಂಸ್ಕೃತಿಕ ವಾತಾವರಣವನ್ನು ಎಲ್ಲೆಡೆ ಜೀವಂತವಾಗಿಡಲು ಸಾಧ್ಯವಾಗಲಿದೆ ಎಂದರು. ಸಮಾಜದ ಅಭಿವೃದ್ಧಿಯನ್ನು ಕೇವಲ ಆರ್ಥಿಕ ಮಾನದಂಡಗಳಿಂದ ಅಳೆಯಲು ಸಾಧ್ಯವಿಲ್ಲ. ಹಣ, ಆಸ್ತಿ, ಅಧಿಕಾರ ಮತ್ತು ಭೌತಿಕ ಸೌಲಭ್ಯಗಳು ಕಾಲಕ್ರಮೇಣ ಕಳೆದುಹೋಗಬಹುದು. ಆರ್ಥಿಕ ಶ್ರೀಮಂತಿಕೆ ಏರಿಳಿತಗಳಿಗೆ ಒಳಗಾಗುವುದು ಸಹಜ. ಆದರೆ ಒಂದು ಸಮಾಜದ ನಿಜವಾದ ಗುರುತು ಅದರ ಸಂಸ್ಕೃತಿ, ಪರಂಪರೆ, ಕಲೆ, ಸಾಹಿತ್ಯ ಮತ್ತು ಮೌಲ್ಯಗಳಲ್ಲಿ ಅಡಗಿದೆ. ಇವುಗಳೇ ಆ ಸಮಾಜದ ಸಾಂಸ್ಕೃತಿಕ ಶ್ರೀಮಂತಿಕೆಯನ್ನು ಪ್ರತಿಬಿಂಬಿಸುತ್ತವೆ. ಈ ಸಾಂಸ್ಕೃತಿಕ ಸಂಪತ್ತು ಪೀಳಿಗೆಯಿಂದ ಪೀಳಿಗೆಗೆ



ಸಾಗುತ್ತಾ ಸಮಾಜವನ್ನು ಜೀವಂತವಾಗಿರಿಸುತ್ತದೆ ಎಂದು ತಿಳಿಸಿದರು.

ಜೀವನವೇ ಒಂದು ನಾಟಕ ರಂಗ. ಅವನು ಕರೆದ ಕೂಡಲೇ ಎಲ್ಲವನ್ನೂ ಬಿಟ್ಟು ಹೋಗಿ ಬಿಡಬೇಕಂತೆ. ಆದರೆ, ಈ ಜೀವನ ಎಂಬ ನಾಟಕ ರಂಗದಲ್ಲಿ ನೈತಿಕ ಮೌಲ್ಯಗಳನ್ನು ಉಳಿಸಿಕೊಂಡು ಉತ್ತಮ ಪಾತ್ರಧಾರಿಗಳಾದರೆ ಮಾತ್ರ ಹೆಸರು ಶಾಶ್ವತವಾಗಿ ಉಳಿಯುತ್ತದೆ. ಹಣ, ಆಸ್ತಿ, ಅಧಿಕಾರ ಮತ್ತು ಸ್ಥಾನಮಾನಗಳು ಶಾಶ್ವತವಲ್ಲ. ಆದರೆ ಸಮಾಜದ ಒಳಿತಿಗಾಗಿ ಬದುಕಿದವರು, ಮಾನವೀಯ ಮೌಲ್ಯಗಳನ್ನು ಉಳಿಸಿದವರು ಮತ್ತು ತಮ್ಮ ಕರ್ತವ್ಯವನ್ನು ಪ್ರಾಮಾಣಿಕವಾಗಿ ನಿರ್ವಹಿಸಿದವರು ಜನರ ಹೃದಯದಲ್ಲಿ ಸದಾಕಾಲ ಜೀವಂತವಾಗಿರುತ್ತಾರೆ ಎಂದು ಹೇಳಿದರು.

ಆಂಧ್ರಪ್ರದೇಶದ ಉರವಕೊಂಡ ಮಠದ ಡಾ.ಕರಿಬಸವ ರಾಜೇಂದ್ರ ಮಹಾಸ್ವಾಮಿಗಳು ಸಾನ್ನಿಧ್ಯ ವಹಿಸಿ ಮಾತನಾಡಿದರು. ಪ್ರಾಸ್ತಾವಿಕ ಮಾತನಾಡಿದ ರಂಗತೋರಣ ಸಂಸ್ಥೆಯ ಅಧ್ಯಕ್ಷ ಪ್ರೊ.ಭೀಮಸೇನ ಅವರು ಮೂರು ದಿನಗಳ ನಾಟಕೋತ್ಸವದ ಯಶಸ್ವಿಗೆ ಶ್ರಮಿಸಿದ ಗ್ರಾಮಸ್ಥರ ಸಹಕಾರವನ್ನು ಸ್ಮರಿಸಿದರಲ್ಲದೆ, ನಾಟಕ ಬರೀ ಮನರಂಜನೆಯಷ್ಟೇ ಅಲ್ಲ; ಮನೋವಿಕಾಸವೂ ಹೌದ. ನಾಟಕದಲ್ಲಿ ಬರುವ ನೀತಿಗಳನ್ನು ಬದುಕಿನಲ್ಲಿ ಅಳವಡಿಸಿಕೊಂಡಲ್ಲಿ ಮಾತ್ರ ನಾಟಕೋತ್ಸವ ಶ್ರಮ ಸಾರ್ಥಕವಾಗುತ್ತದೆ ಎಂದು ಹೇಳಿದರು. ಬಳಿಕ ರಾಜ್ಯಮಟ್ಟದ ಸಾಂಸ್ಕೃತಿಕ ಸಾರ್ವಭೌಮ ಜೋಳದರಾಶಿ ದೊಡ್ಡನಗೌಡ ರಂಗತೋರಣ ಪುರಸ್ಕೃತರ ಸಾಧನೆಯನ್ನು ಪರಿಚಯಿಸಿದರು. ಲೆಕ್ಕ ಪರಿಶೋಧಕ ಎರಿಸ್ವಾಮಿ ಚಿಲ್ಕರಾಯಿ, ಎಪಿಎಂಸಿ ಉಪಾಧ್ಯಕ್ಷ ರಾಮಣ್ಣ, ಬೆಂಗಳೂರಿನ ಸಾಮಾಜಿಕ ಕಾರ್ಯಕರ್ತ ವಾದಿರಾಜ ಉಪಸ್ಥಿತರಿದ್ದರು. ರಂಗತೋರಣ ಕಾರ್ಯದರ್ಶಿ ಪ್ರಭುದೇವ ಕಪ್ಪಗಲ್ಲು ಹಾಗೂ ಜೋಳದರಾಶಿ ದೊಡ್ಡನಗೌಡ ಪ್ರತಿಷ್ಠಾನದ ಅಧ್ಯಕ್ಷ ಕೆ.ಪೊಂಪನಗೌಡ ಕಾರ್ಯಕ್ರಮ ನಿರ್ವಹಿಸಿದರು. ನಾಟಕೋತ್ಸವದ ಯಶಸ್ಸಿಗಾಗಿ ಶ್ರಮಿಸಿದ ಮೆಹತಾಬ್, ಚಂದ್ರಶೇಖರ ಆಚಾರ್, ಅಡವಿಸ್ವಾಮಿ, ಅರವಿಂದಯೋಗಿ, ಅನಿಲ್ ಅಂಗಡಿ, ಗಿರೀಶ್ ಆಚಾರ್ ಮತ್ತಿತರರಿದ್ದರು. ಕೊನೆಯಲ್ಲಿ ಜೇವರ್ಗಿ ರಾಜಣ್ಣ ರಚನೆ ಹಾಗೂ ನಿರ್ದೇಶನದ ರೈತ ಮನೆತನ ನಾಟಕ ಪ್ರದರ್ಶನಗೊಂಡಿತು.

# ಶಾಲೆ ಪ್ರವೇಶಕ್ಕೆ ಅರ್ಜಿ ಆಹ್ವಾನ

■ ಕನ್ನಡ ಮಾತೃ ಭೂಮಿ ವಾರ್ತೆ

**ಹರಪನಹಳ್ಳಿ,ಜೂ.17-**ತಾಲೂಕಿನ ಅನಂತನಹಳ್ಳಿ ಬಳಿಯಿರುವ ಪಿಎಂಶ್ರೀ ಸರ್ಕಾರಿ ಆದರ್ಶ ವಿದ್ಯಾಲಯದಲ್ಲಿ ಖಾಲಿಯಿರುವ ಶಾಲೆ ಪ್ರವೇಶಕ್ಕೆ ವಿದ್ಯಾರ್ಥಿಗಳಿಂದ ಅರ್ಜಿ ಆಹ್ವಾನಿಸಲಾಗಿದೆ.

2026-27ನೇ ಸಾಲಿನಲ್ಲಿ 7ನೇ ತರಗತಿಯಲ್ಲಿ 4 ಸ್ಥಾನ, 8ನೇ ತರಗತಿಯಲ್ಲಿ 3 ಸ್ಥಾನ ಹಾಗೂ 9ನೇ ತರಗತಿಯಲ್ಲಿ 6 ಸ್ಥಾನ ಸೇರಿ ಒಟ್ಟು 13 ಸೀಟುಗಳು ಖಾಲಿ ಇದ್ದು, ಖಾಲಿ ಇರುವ ಸ್ಥಾನಗಳಿಗೆ ಜೂ.23 ರಂದು ಆಯ್ಕೆ ಪರೀಕ್ಷೆ ನಡೆಯಲಿದೆ.

ಹರಪನಹಳ್ಳಿ ತಾಲೂಕಿನ ನಿವಾಸಿಗಳು ಅಗತ್ಯ ದಾಖಲೆಗಳೊಂದಿಗೆ ಅರ್ಜಿಯನ್ನು ಜೂ.19 ರೊಳಗೆ ಖುದ್ದಾಗಿ ಶಾಲೆಗೆ ಸಲ್ಲಿಸಬೇಕು. ಖಾಲಿ ಇರುವ ಸ್ಥಾನಗಳ ವಿವರ ಇತ್ಯಾದಿಗಳನ್ನು ಶಾಲೆಯ ಸೂಚನಾ ಫಲಕದಲ್ಲಿ ಪ್ರಕಟಿಸಲಾಗಿದೆ. ಹೆಚ್ಚಿನ ಮಾಹಿತಿಗೆ ಮುಖ್ಯ ಶಿಕ್ಷಕ ಎಚ್. ಕೆ.ಚಂದ್ರಪ್ಪ ಮೊ.9480675698/ 9880955078 ಸಂಪರ್ಕಿಸಬಹುದು ಎಂದು ಪ್ರಕಟಣೆಯಲ್ಲಿ ತಿಳಿಸಲಾಗಿದೆ.

# ಮಾರಿಹಾಳ ಗ್ರಾಮದಲ್ಲಿ ಎನ್‌ಎಸ್‌ಎಸ್ ವಿಶೇಷ ಶಿಬಿರ

# ಉಚಿತ ನೇತ್ರ ತಪಾಸಣೆಯಿಂದ ಗ್ರಾಮಸ್ಥರಿಗೆ ಪ್ರಯೋಜನ

■ ಕನ್ನಡ ಮಾತೃ ಭೂಮಿ ವಾರ್ತೆ




**ಬೆಳಗಾವಿ,**ವಿದ್ಯಾರ್ಥಿಗಳಲ್ಲಿ ಸಮಾಜಸೇವೆ ಮತ್ತು ಗ್ರಾಮೀಣ ಅಭಿವೃದ್ಧಿಯ ಬಗ್ಗೆ ಜಾಗೃತಿ ಮೂಡಿಸುವ ಉದ್ದೇಶದಿಂದ ಬೆಳಗಾವಿಯ ಕೆಎಲ್‌ಎಸ್ ರಾಜಾ ಲಖಮಗೌಡ ಕಾನೂನು ಮಹಾವಿದ್ಯಾಲಯದ ಎನ್‌ಎಸ್‌ಎಸ್ ಘಟಕವು ಮಾರಿಹಾಳ ಗ್ರಾಮದಲ್ಲಿ ವಿಶೇಷ ಎನ್‌ಎಸ್‌ಎಸ್ ಶಿಬಿರವನ್ನು ಆಯೋಜಿಸಿತ್ತು.

ಮಾರಿಹಾಳ ಗ್ರಾಮ ಪಂಚಾಯತಿಯ ಪಿಡಿಒ ಪರಶುರಾಮ ಮೊಲ್ಲೆನ್ನವರ ಅವರು ರಾಷ್ಟ್ರೀಯ ಸೇವಾ ಯೋಜನೆ (ಎನ್‌ಎಸ್‌ಎಸ್) ಚಟುವಟಿಕೆಗಳಲ್ಲಿ ವಿದ್ಯಾರ್ಥಿಗಳ ಭಾಗವಹಿಸುವಿಕೆಯ ಮಹತ್ವವನ್ನು ಒತ್ತಿ ಹೇಳಿದರು. ಗ್ರಾಮೀಣ ಜೀವನವನ್ನು ಅರ್ಥಮಾಡಿಕೊಳ್ಳುವುದು, ಸಮಾಜಸೇವೆಯಲ್ಲಿ ತೊಡಗಿಸಿಕೊಳ್ಳುವುದು ಹಾಗೂ ಸಮುದಾಯದ ಕಲ್ಯಾಣಕ್ಕೆ ಕೊಡುಗೆ ನೀಡುವಲ್ಲಿ ಎನ್‌ಎಸ್‌ಎಸ್ ಸ್ವಯಂಸೇವಕರ ಪಾತ್ರ ಮಹತ್ವದ್ದಾಗಿದೆ ಎಂದು ಅವರು ತಿಳಿಸಿದರು. ಗ್ರಾಮಸ್ಥರೊಂದಿಗೆ ನಿಕಟ ಸಂಪರ್ಕ ಬೆಳೆಸಿ ಅವರ ಜೀವನಮಟ್ಟ ಹಾಗೂ ಪರಿಸರದ ಸುಧಾರಣೆಗೆ ವಿದ್ಯಾರ್ಥಿಗಳು ಶ್ರಮಿಸಬೇಕು ಎಂದು ಕರೆ ನೀಡಿದರು.

ಅಧ್ಯಕ್ಷತೆ ವಹಿಸಿದ್ದ ಮಹಾವಿದ್ಯಾಲಯದ ಪ್ರಾಚಾರ್ಯ ಡಾ. ಎ. ಎಚ್. ಹವಾಲ್ದಾರ, ಎನ್‌ಎಸ್‌ಎಸ್ ಯೋಜನೆಯ ಇತಿಹಾಸ ಮತ್ತು ಉದ್ದೇಶಗಳ ಕುರಿತು ವಿವರಿಸಿ, 1969ರಲ್ಲಿ ಈ ಯೋಜನೆ ಆರಂಭಗೊಂಡಿತು ಎಂದು ತಿಳಿಸಿದರು. ಮಹಾತ್ಮ ಗಾಂಧೀಜಿಯವರ ಗ್ರಾಮಾಭಿವೃದ್ಧಿ ಹಾಗೂ ಸಮುದಾಯ ಸೇವೆಯ ಪರಿಕಲ್ಪನೆಯಿಂದ ಎನ್‌ಎಸ್‌ಎಸ್ ಯೋಜನೆಗೆ ಹೆಚ್ಚಿನ ಪ್ರೇರಣೆ ದೊರೆತಿದ್ದು, ವಿದ್ಯಾರ್ಥಿಗಳು ಸಮಾಜದ ಅಭಿವೃದ್ಧಿಗೆ ಅರ್ಥಪೂರ್ಣ ಕೊಡುಗೆ ನೀಡಬೇಕೆಂದು ಹೇಳಿದರು.

ಎನ್‌ಎಸ್‌ಎಸ್ ಸಂಯೋಜನಾ ಅಧಿಕಾರಿ ಪ್ರೊ. ಸತೀಶ್ ಅನಿಖಿಂಡಿ ಅವರ ಮಾರ್ಗದರ್ಶನದಲ್ಲಿ ಶಿಬಿರವನ್ನು ಆಯೋಜಿಸಲಾಗಿತ್ತು. ಒಟ್ಟು 50 ಎನ್‌ಎಸ್‌ಎಸ್ ಸ್ವಯಂಸೇವಕರು ಶಿಬಿರದಲ್ಲಿ ಭಾಗವಹಿಸಿ ವಿವಿಧ ಸಮಾಜಮುಖಿ ಚಟುವಟಿಕೆಗಳನ್ನು ನಡೆಸಿದರು.

ಶಿಬಿರದ ಅಂಗವಾಗಿ ಬೆಳಗಾವಿಯ ನಂದಾದೀಪ ನೇತ್ರಾಲಯದ ಸಹಯೋಗದಲ್ಲಿ ಉಚಿತ ನೇತ್ರ ತಪಾಸಣಾ ಶಿಬಿರವನ್ನು ಹಮ್ಮಿಕೊಳ್ಳಲಾಯಿತು. 60ಕ್ಕೂ ಹೆಚ್ಚು ಗ್ರಾಮಸ್ಥರು ಈ ಸೌಲಭ್ಯದ ಪ್ರಯೋಜನ ಪಡೆದು ವೈದ್ಯಕೀಯ ಸೇವೆ ಪಡೆದರು.

ಗ್ರಾಮೀಣ ಜೀವನದ ನೈಜ ಅನುಭವವನ್ನು ವಿದ್ಯಾರ್ಥಿಗಳಿಗೆ ಒದಗಿಸುವುದರ ಜೊತೆಗೆ ಸಮಾಜ ಸೇವೆ ಮತ್ತು ಸಾಮಾಜಿಕ ಜವಾಬ್ದಾರಿಯ ಮನೋಭಾವ ಬೆಳೆಸುವಲ್ಲಿ ಈ ಶಿಬಿರ ಪರಿಣಾಮಕಾರಿ ವೇದಿಕೆಯಾಗಿ ಕಾರ್ಯನಿರ್ವಹಿಸಿತು.

## ಮಾರುತಿ ಬಡಿಗೇರ್ 57ರ ಅಭಿನಂದನಾ ಕಾರ್ಯಕ್ರಮ

# ಪ್ರತಿಭೆಗಳನ್ನು ಬೆಳೆಸುವಂತಹ ಕ್ರಿಯಾಶೀಲ ವ್ಯಕ್ತಿ-ಶ್ರೀದೇವಿ ನಾಯಕ್

■ ಕನ್ನಡ ಮಾತೃ ಭೂಮಿ ವಾರ್ತೆ




**ರಾಯಚೂರು,** ಬದುಕಿನಲ್ಲಿ ನಿಸ್ವಾರ್ಥ ಸೇವೆ ಮಾಡುವವರು ಬಹಳ ವಿರಳ ಅಂತಹುದರಲ್ಲಿ ಇನ್ನೊಬ್ಬರನ್ನು ಬೆಳೆಸಿ ತಾವು ಬೆಳೆಯುತ್ತಿರುವ ಸಮಾಜಮುಖಿ ಕೆಲಸ ಮಾಡುತ್ತಿರುವ ನಿಸ್ವಾರ್ಥಿ ಹಾಗೂ ಕ್ರಿಯಾಶೀಲಾ ವ್ಯಕ್ತಿ ಮಾರುತಿ ಬಡಿಗೇರ್ ಅವರಾಗಿದ್ದಾರೆ. ಸಾಂಸ್ಕೃತಿಕ ಲೋಕದಲ್ಲಿ ರಾಜ್ಯ ರಾಷ್ಟ್ರ ಅಂತರಾಷ್ಟ್ರೀಯ ಮಟ್ಟದಲ್ಲಿ ಜಿಲ್ಲೆಯ ಹೆಸರನ್ನು ತಂದಿದ್ದಾರೆ. ಮಾರುತಿ ಬಡಿಗೇರ ಎನ್ನುವುದೇ ಒಂದು ಶಕ್ತಿ ಎಂದು ರಾಷ್ಟ್ರೀಯ ಮಹಿಳಾ ಕಾಂಗ್ರೆಸ್ ಕಾರ್ಯದರ್ಶಿಗಳಾದ ಶ್ರೀಮತಿ ಶ್ರೀದೇವಿ ಆರ್ ವಿ ನಾಯಕ ಮಾತನಾಡಿದರು.

ಅವರು ರಾಯಚೂರು ನಗರದ ಮನರಂಜನಾ ಕೇಂದ್ರದಲ್ಲಿ ಸೋಮವಾರ ಸಂಜೆ ನಡೆದ ಕಲಾ ಸಂಕುಲ ಸಂಸ್ಥೆಯ ಸಂಸ್ಥಾಪಕ ಅಧ್ಯಕ್ಷರು ಹಾಗೂ ಹಿರಿಯ ಪತ್ರಕರ್ತರಾದ ಮಾರುತಿ ಬಡಿಗೇರ್ ಅವರ 57ನೇ ಅಭಿನಂದನಾ ಕಾರ್ಯಕ್ರಮದ ಉದ್ಘಾಟಕರಾಗಿ ಶ್ರೀದೇವಿ ಮಾತನಾಡಿದರು ಜಿಲ್ಲಾ ಸರ್ಕಾರಿ ನೌಕರ ಸಂಘದ ಜಿಲ್ಲಾಧ್ಯಕ್ಷರಾದ ಕೃಷ್ಣ ಶಾವಂತಗೇರ ಇವರು ಅಭಿನಂದನಾ ನುಡಿಯನ್ನು ಮಾತನಾಡಿದರು.

ರಾಯಚೂರು ಜಿಲ್ಲಾ ಕಾರಾಗೃಹದ ಜಿಲ್ಲಾಧೀಕ್ಷಕರಾದ ಅನಿತಾ ಹಿರೇಮನಿ ಅತಿಥಿಗಳಾಗಿ ಆಗಮಿಸಿದ್ದರು. ಪತ್ರಕರ್ತ ಆಲಂಘನಿ ಮತ್ತು ಸಮಾಜ ಸೇವಕ ಅಂಬಾಜಿರಾವ್ ಮೈದರ್ಕರ್ . ಹಾಗೂ ಫಾತಿಮಾ ಫೌಂಡೇಶನ್ ಅಧ್ಯಕ್ಷರಾದ ಡಾ. ಫಾತಿಮಾ ಹುಸೇನ್. ಜಿಲ್ಲಾ ಸರ್ಕಾರಿ ಮಹಿಳಾ ನೌಕರ ಸಂಘದ ಅಧ್ಯಕ್ಷರಾದ ಜಯಶ್ರೀ. ಕಾಂಗ್ರೆಸ್ ಪಕ್ಷದ ಮಹಿಳಾ ಮುಖಂಡರಾದ ಮಾಲಾ ಭಜಂತ್ರಿ ವೇದಿಕೆ ಮೇಲೆ ಅತಿಥಿಗಳಾಗಿ ಭಾಗವಹಿಸಿದ್ದರು. ಮಾರುತಿ ಬಡಿಗೇರ್ ಅವರಿಗೆ ಸನ್ಮಾನಿಸಿ ಗೌರವಿಸಿ ಅಭಿನಂದಿಸಲಾಯಿತು ಮೇಘ ಕಲಾನಿಕೇತನ ರಾಯಚೂರು ಹಾಗೂ ಆಕಾಶ್ ಸಿಂಗಿಂಗ್ ಸ್ಟುಡಿಯೋ ರಾಯಚೂರು ಈ ಕಾರ್ಯಕ್ರಮದ ಆಯೋಜಕರಾಗಿದ್ದರು. ನರೇಂದ್ರ ಮನಕರ್ ಸುನಿಲ್ ಕುಮಾರ್ ಚಿರಂಜೀವಿ ಯಾದವ್ ಇವರು ತುಂಬಾ ಅಚ್ಚುಕಟ್ಟಾಗಿ ಕಾರ್ಯಕ್ರಮವನ್ನು ನೆರವೇರಿಸಿದರು.

ನಗರದ ಪ್ರಮುಖ 25 ಜನ ಗಾಯಕರಿಗೆ ಈ ಸಂದರ್ಭದಲ್ಲಿ ಗೌರವಿಸಿ ಸನ್ಮಾನಿಸಲಾಯಿತು. ಹಳೆಯ ಕನ್ನಡ ಮಧುರ ಗೀತೆಗಳು ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಗಿತ್ತು. ಶ್ರೀಗೌರಿ ಪಲ್ಲಕ್ಕಿ ಭರತನಾಟ್ಯವನ್ನು ಪ್ರದರ್ಶನ ಮಾಡಿದರು.

# ಸಾರ್ವಜನಿಕರ ಅಹವಾಲುಗಳಿಗೆ ಸಕಾಲಕ್ಕೆ ಸ್ಪಂದಿಸಿ-ಜಿಲ್ಲಾಧಿಕಾರಿ ರಾಹುಲ್ ಪಾಂಡ್ವೆ

■ ಕನ್ನಡ ಮಾತೃ ಭೂಮಿ ವಾರ್ತೆ



**ಯಾದಗಿರಿ,ಜೂ.17**-ಜಿಲ್ಲೆಯಲ್ಲಿ ಕುಡಿಯುವ ನೀರಿನ ಸಮರ್ಪಕ ನಿರ್ವಹಣೆ, ಇಲಾಖಾ ವ್ಯಾಪ್ತಿಯಲ್ಲಿ ಸಮಗ್ರ ಕ್ರಿಯಾಯೋಜನೆ, ಕರ್ತವ್ಯ ಯ್ಯಾಪ್ನಲ್ಲಿ ಕಡ್ಡಾಯ ನೋಂದಣಿ, ಸಾರ್ವಜನಿಕ ಕುಂದುಕೊರತೆಗಳ ಕುರಿತು ತಕ್ಷಣ ಕ್ರಮ ಕೈಗೊಳ್ಳುವಂತೆ ಜಿಲ್ಲಾಧಿಕಾರಿ ರಾಹುಲ್ ತುಕಾರಾಮ ಪಾಂಡ್ವೆ ಅವರು ಅಧಿಕಾರಿಗಳಿಗೆ ಸೂಚಿಸಿದ್ದಾರೆ.

ಇತ್ತೀಚೆಗೆ ಮಾನ್ಯ ಮುಖ್ಯಮಂತ್ರಿಗಳ ಅಧ್ಯಕ್ಷತೆಯಲ್ಲಿ ಬೆಂಗಳೂರಲ್ಲಿ ಎಲ್ಲ ಜಿಲ್ಲಾಧಿಕಾರಿಗಳು, ಜಿ.ಪಂ ಮುಖ್ಯ ಕಾರ್ಯ ನಿರ್ವಹಣಾಧಿಕಾರಿಗಳು, ಜಿಲ್ಲಾ ಪೋಲಿಸ್ ವರಿಷ್ಠಾಧಿಕಾರಿಗಳು ಹಾಗೂ ಉಪಸಂರಕ್ಷಣಾಧಿಕಾರಿಗಳೊಂದಿಗೆ ನಡೆದ ಸಭೆಯಲ್ಲಿ ಕೈಗೊಂಡ ನಿರ್ಣಯಗಳ ಮೇಲೆ ಕೈಗೊಳ್ಳಬೇಕಾದ ಕ್ರಮಗಳ ಕುರಿತು ಚರ್ಚಿಸಲು ಇಂದು ಜಿಲ್ಲಾಧಿಕಾರಿಗಳ ಕಚೇರಿ ಸಭಾಂಗಣದಲ್ಲಿ ಕರೆಯಲಾಗಿದ್ದ ಜಿಲ್ಲಾ ಮಟ್ಟದ ಅಧಿಕಾರಿಗಳೊಂದಿಗಿನ ಸಭೆಯಲ್ಲಿ ಅವರು ಮಾತನಾಡಿದರು.

ಪ್ರತಿ ಗ್ರಾಮ ಪಂಚಾಯತ್ ವ್ಯಾಪ್ತಿಯಲ್ಲಿ ಭಾರತ್ ಜೋಡೋ ಯುವಕ್ಲಬ್ಗಳ ರಚನೆಗೆ ಸೂಚಿಸಲಾಗಿದ್ದು, ಸರ್ಕಾರದಿಂದ ಸೂಕ್ತ ಮಾರ್ಗಸೂಚಿಗಳು ಬರಲಿವೆ. ಜಾತ್ಯಾತೀತ ಭಾವನೆ, ನಾಯಕತ್ವ,ಉದ್ಯೋಗ,ಕ್ರೀಡೆ, ಫಿಟ್ನೆಸ್ ಹಾಗೂ ಸಮುದಾಯ ಸೇವೆ ಆಲೋಚನೆ ಈ ಅಭಿಯಾನದಡಿ ಅಡಗಿದ್ದು, ಸಂಬಂ ಧಿಸಿದ ಅಧಿಕಾರಿಗಳು ಸೂಕ್ತ ಕ್ರಮಕ್ಕೆ ಸಜ್ಜುಗೊಳ್ಳು ವಂತೆ ಅವರು ಸೂಚಿಸಿದರು.ಸಾರ್ವಜನಿಕ ಅಹವಾಲುಗಳನ್ನು ನಿಗಧಿತ ಅವಧಿಯೊಳಗೆ ಶೀಘ್ರ ವಿಲೇವಾರಿಗೆ ಗಮನ ನೀಡಬೇಕು.ಐಪಿಜಿಆರ್ ಎಸ್,ಸಕಾಲ,ಇತರೆ ಕುಂದುಕೊರತೆ ಅರ್ಜಿಗಳನ್ನು ತಕ್ಷಣ ವಿಲೇವಾರಿ ಮಾಡಬೇಕು. ಜನಸ್ಪಂದನ ಮೂಲಕ ಪರಿಹರಿಸುವ ಉದ್ದೇಶ ಸಹ ಹೊಂದಲಾಗಿದೆ ಎಂದು ಸಂಬಂಧಿಸಿದ ಅಧಿಕಾರಿಗಳಿಗೆ ಅವರು ತಿಳಿಸಿದರು.

ಸಾರ್ವಜನಿಕ ಕುಂದುಕೊರತೆ ವಿಲೇವಾರಿ ಹಾಗೂ ಸರ್ಕಾರ ನಿರ್ಧರಿಸಿದ ಪ್ರತಿ ಅಭಿಯಾನಗಳ ನಿರ್ವಹಣೆಗೆ ಸಮಿತಿಗಳನ್ನು ರಚಿಸಲಾಗುವುದು. ಕಾಲ ಕಾಲಕ್ಕೆ ಈ ಕುರಿತು ಪರಿಶೀಲಿಸಲಾಗುವುದು ಎಂದ ಅವರು, ಪ್ರತಿ ಇಲಾಖಾ ವ್ಯಾಪ್ತಿಯಲ್ಲಿ ತಮ್ಮ ಕೆಲಸಗಳು,ಯೋಜನೆಗಳ ಕುರಿತು ಸಿಟಿಜನ್ಸ್ ಚಾರ್ಟರ್ ನ್ನು ಮುಂದಿನ ಹತ್ತು ದಿನಗಳಲ್ಲಿ ಅಳವಡಿಸಬೇಕು.ಕಚೇರಿಗಳ ಸ್ವಚ್ಛತೆ , ವಿದ್ಯುತ್ ಸೌಕರ್ಯ, ವಿದ್ಯುತ್ ಬ್ಯಾಕ್‌ಅಪ್ ಸೌಲಭ್ಯ,ಶಾಲಾ,ಕಾಲೇಜು, ಆಸ್ಪತ್ರೆಗಳು,ವಸತಿ ನಿಲಯಗಳು,ಬಸ್ ನಿಲ್ದಾಣಗಳ ಹಾಗೂ ಕಚೇರಿಗಳ ವ್ಯಾಪ್ತಿಯಲ್ಲಿ ಸ್ವಚ್ಛತೆ ಮತ್ತು ಸಸಿಗಳನ್ನು ನೆಟ್ಟು ಹಸರೀಕರಣಗೊಳಿಸುವ ಕುರಿತು ಕ್ರಮ ಕೈಗೊಳ್ಳಲು ಅವರು ಸೂಚನೆ ನೀಡಿದರು.

ಇಲಾಖಾವಾರು ಸಮಗ್ರ ಕ್ರಿಯಾಯೋಜನೆ ರೂಪಿಸಬೇಕು. ಮುಂಗಾರು ಹಂಗಾಮಿನಲ್ಲಿ ಮಳೆ ಕಡಿಮೆ ಸಾಧ್ಯತೆ ಇರುವ ಹಿನ್ನೆಲೆಯಲ್ಲಿ ಕುಡಿಯುವ ನೀರಿಗೆ ಸಂಬಂಧಿಸಿದಂತೆ ಕಂಟಿನ್ಜನ್ಸಿ ಪ್ಲ್ಯಾನ್ ಮುಂಬರುವ ಹದಿನೈದು ದಿನಗಳಲ್ಲಿ ಸಲ್ಲಿಸಬೇಕು ಎಂದು ಸೂಚಿಸಿದರು.ಮಾನ್ಯ ಮುಖ್ಯಮಂತ್ರಿಗಳು ಸೂಚಿಸಿದಂತೆ ಭೂ-ಗ್ಯಾರಂಟಿ ಅಭಿಯಾನದಡಿ ಬಿ-ಖಾತಾದಿಂದ ಎ ಖಾತಾಗೆ ಸಮಗ್ರ ಪರಿವರ್ತನೆಗೆ ಕ್ರಮ ಆಗಬೇಕು. ಸರ್ಕಾರಿ ಜಮೀನು ಒತ್ತುವರಿತೆರವುಗೊಳಿಸಬೇಕು ಜಮೀನುಗಳ ಆರ್. ಟಿ. ಸಿ ಅನುಷ್ಠಾನ,ಬಾಕಿ ಇರುವ ಕುರಿತು ಮುಂದಿನ ಹತ್ತು ದಿನಗಳಲ್ಲಿ ಕ್ರಮ ಕೈಗೊಳ್ಳಬೇಕು ಎಂದು ಸೂಚಿಸಿದರು.

ಮುಂಬರುವ ದಿನಗಳಲ್ಲಿ ಯುವ ಉದ್ಯೋಗ ಸೇತು ಮಿಷನ್, ಯಾದಗಿರಿ ಜಿಲ್ಲೆಯಿಂದ ಗರಿಷ್ಠ ಉದ್ಯೋಗ ನೋಂದಣಿ,ಒಂದು ಬಾರಿ ವಿದ್ಯುತ್ ಸಂಪರ್ಕ ಪರಿಹಾರ, ಲಕ್ಷಾಂತರ ಮನೆಗಳನ್ನು ಔಪಚಾರಿಕ ವಿದ್ಯುತ್ ಜಾಲಕ್ಕೆ ತರುವುದು,ಎಐ ಆಧಾರಿತ ಏಕೀಕೃತ ಹಾಗೂ ಸಮಗ್ರ ದೂರು ಪರಿಹಾರ ವ್ಯವಸ್ಥೆ ಗಳ ಕುರಿತು ಮಾರ್ಗಸೂಚಿ ಅನ್ವಯ ಸೂಕ್ತ ಕ್ರಮ ಕೈಗೊಳ್ಳಬೇಕು.

ಕರ್ತವ್ಯ ಯ್ಯಾಪ್ನಲ್ಲಿ ಎಲ್ಲ ಅಧಿಕಾರಿಗಳು ಹಾಗೂ ಸಿಬ್ಬಂದಿಗಳು ನೋಂದಣಿ ಮಾಡುವಂತೆ ನೋಡಿಕೊಳ್ಳಲು ಸೂಚನೆ ನೀಡಿದ ಅವರು, 371 (ಜೆ ) ರಡಿ ಇಲಾಖಾವಾರು ಖಾಲಿಯಿರುವ ಗ್ರೂಪ್ ಸಿ ಹಾಗೂ ಡಿ ಹುದ್ದೆಗಳ ಬಗ್ಗೆ ವರದಿ ಸಲ್ಲಿಸುವಂತೆ ಅಧಿಕಾರಿಗಳಿಗೆ ಸೂಚನೆ ನೀಡಿದರು. ಈ ಸಭೆಯಲ್ಲಿ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಲವೀಶ್ ಒರಡಿಯಾ, ಅಪರ ಜಿಲ್ಲಾಧಿಕಾರಿ ರಮೇಶ ಕೋಲಾರ ಸೇರಿದಂತೆ ಜಿಲ್ಲಾ ಮಟ್ಟದ ಅಧಿಕಾರಿಗಳು ಉಪಸ್ಥಿತರಿದ್ದರು.

## ವಿಕಾಸ ಗೆಳೆಯರ ಬಳಗದ ವತಿಯಿಂದ ರಕ್ತದಾನ ಶಿಬಿರ

# ಗೆಳೆಯನನು ಜೀವಂತವಾಗಿಡುತ್ತಿರುವುದು ಶ್ಲಾಘನೀಯ ಅಭಿನವ ಸೋಮನಾಥ ಶಿವಾಚಾರ್ಯರು



■ ಕನ್ನಡ ಮಾತೃ ಭೂಮಿ ವಾರ್ತೆ

**ಸಿರವಾರ, ಜೂ.16**-ಜೀವ ಅತ್ಯಮೂಲ್ಯವಾದುದು. ಗೆಳೆಯನ ಅಗಲಿಕೆಯ ನಂತರವೂ ಉತ್ತಮ ಕಾರ್ಯಗಳನ್ನು ಮಾಡುವ ಮೂಲಕ ಅವನನ್ನು ಜನರ ಮನಸ್ಸಿನಲ್ಲಿ ಜೀವಂತವಾಗಿರಿಸುತ್ತಿರುವ ಗೆಳೆಯರ ಬಳಗದ ಕಾರ್ಯ ಶ್ಲಾಘನೀಯ ಎಂದು ನವಲಕಲ್ ಬೃಹನ್ಮಠದ ಅಭಿನವ ಸೋಮನಾಥ ಶಿವಾಚಾರ್ಯರು ಹೇಳಿದರು.

ಪಟ್ಟಣದ ಛಾಯಾಗ್ರಾಹಕ ದಿ. ವಿಕಾಸ್ ಅವರ ಜನ್ಮದಿನದ ಅಂಗವಾಗಿ, ಮಂದಕಲ್ ಗೆಳೆಯರ ಬಳಗ, ಜ್ಞಾನವೃಕ್ಷ ಟ್ರಸ್ಟ್ (ದೇವದುರ್ಗ), ವಿಕಾಸ ಗೆಳೆಯರ ಬಳಗ (ಹುಲಿಗೆಮ್ಮ ದೇವಸ್ಥಾನ, ಸಿರವಾರ) ಹಾಗೂ ರೀಮ್ಸ್ ಆಸ್ಪತ್ರೆಯ ಸಹಯೋಗದಲ್ಲಿ ಹಮ್ಮಿಕೊಂಡಿದ್ದ ರಕ್ತದಾನ ಶಿಬಿರವನ್ನು ಉದ್ಘಾಟಿಸಿ ಅವರು ಮಾತನಾಡಿದರು.

**ಕಾರ್ಯಕ್ರಮದ ಮುಖ್ಯಾಂಶಗಳು:** ರಕ್ತದಾನದ ಮಹತ್ವ: ಇಂದು ಅನೇಕ ಆಸ್ಪತ್ರೆಗಳಲ್ಲಿ ರಕ್ತ ಸಿಗದೆ ಸಾವು ಸಂಭವಿಸುತ್ತಿವೆ. ಅಂತಹ ಸಂದರ್ಭದಲ್ಲಿ ಇಂತಹ ರಕ್ತದಾನ ಶಿಬಿರವನ್ನು ಆಯೋಜಿಸುವ ಮೂಲಕ ಇತರರ ಜೀವ ಉಳಿಸಲು ಆಸರೆಯಾಗಿದ್ದೀರಿ ಎಂದು ಶ್ರೀಗಳು ಮೆಚ್ಚುಗೆ ವ್ಯಕ್ತಪಡಿಸಿದರು.

ಯುವಜನತೆಗೆ ಕಿವಿಮಾತು: ಯುವಕರು ಮದ್ಯಪಾನ, ಧೂಮಪಾನದಂತಹ ದುಶ್ಚಟಗಳಿಗೆ ದಾಸರಾಗದೆ, ಇಂತಹ ಸಮಾಜಮುಖಿ ಕಾರ್ಯಗಳಲ್ಲಿ ತಮ್ಮನ್ನು ತೊಡಗಿಸಿಕೊಳ್ಳಬೇಕು ಎಂದು ಕರೆ ನೀಡಿದರು.

ಪರಿಸರ ಜಾಗೃತಿ: ಪ್ರತಿಯೊಬ್ಬರೂ ದಿ. ವಿಕಾಸ್ ಅವರ ಹೆಸರಿನಲ್ಲಿ ತಲಾ ಒಂದು ಸಸಿಯನ್ನು ನೆಟ್ಟು ಪರಿಸರ ರಕ್ಷಣೆಗೆ ಮುಂದಾಗಬೇಕು ಎಂದು ಸಲಹೆ ನೀಡಿದರು.

ಈ ಸಂದರ್ಭದಲ್ಲಿ ಸಂಜೀವಿನಿ ಟ್ರಸ್ಟ್‌ನ ಜ್ಞಾನಮಿತ್ರ, ಗಾಯಕ ಶಂಕರಗೌಡ, ರೀಮ್ಸ್ ಆಸ್ಪತ್ರೆಯ ವೈದ್ಯ ಡಾ. ಪವನಕುಮಾರ,

ವಿನಾಯಕ ಶಾಲೆಯ ಮುಖ್ಯೋಪಾಧ್ಯಾಯ ಬಸವಲಿಂಗಪ್ಪ, ಉಪನ್ಯಾಸಕ ಫಕ್ರುದ್ದೀನ್, ಮೌನೇಶ ನಾಯಕ ಮಂದಕಲ್ ಸೇರಿದಂತೆ ಮಂದಕಲ್ ಗೆಳೆಯರ ಬಳಗ, ಜ್ಞಾನವೃಕ್ಷ ಟ್ರಸ್ಟ್ ಮತ್ತು ವಿಕಾಸ ಗೆಳೆಯರ ಬಳಗದ ಪದಾಧಿಕಾರಿಗಳು ಉಪಸ್ಥಿತರಿದ್ದರು.

# ದ್ವಿಭಾಷಾ ಕಲಿಕೆ ಹೆಸರಲ್ಲಿ ಕನ್ನಡದ ವಿದ್ಯಾರ್ಥಿಗಳಿಗೆ ಬಿ ಶ್ರೇಣಿ : ಎಐಡಿಎಸ್‌ಓ ತೀವ್ರ ವಿರೋಧ!

■ ಕನ್ನಡ ಮಾತೃ ಭೂಮಿ ವಾರ್ತೆ

**ಯಾದಗಿರಿ,ಜೂ.17**-ಹಿಂದಿನ ತರಗತಿಯಿಂದ ಮುಂದಿನ ತರಗತಿಯ ಕಲಿಕೆಗೆ ವಿದ್ಯಾರ್ಥಿಗಳು ಪ್ರವೇಶಿಸುವ ಮುನ್ನ ಸೇತುಬಂಧ ಪರೀಕ್ಷೆಗಳನ್ನು ಸರ್ಕಾರ ನಡೆಸುತ್ತಿದೆ. ಈ ಪರೀಕ್ಷೆಗಳ ಮೌಲ್ಯ ಮಾಪನದಲ್ಲಿ ಸರ್ಕಾರವು ಪ್ರಸಕ್ತ ಶೈಕ್ಷಣಿಕ ವರ್ಷದಿಂದ ಅನುಸರಿಸುವ ಮಾನದಂಡವು ಅನೇಕ ಪ್ರಶ್ನೆಗಳನ್ನು ಹುಟ್ಟು ಹಾಕಿದೆ. ದ್ವಿಭಾಷಾ ಮಾಧ್ಯಮ ಜಾರಿಯಲ್ಲಿರುವ ಸರ್ಕಾರಿ ಶಾಲೆಗಳಲ್ಲಿ, ಇಂಗ್ಲೀಷ್ ಮಾಧ್ಯಮದಲ್ಲಿ ಉತ್ತರಿಸಿದರೆ ಮಾತ್ರ ಎ ಶ್ರೇಣಿ' ಇಡಲಾಗುತ್ತಿದೆ. ಎಷ್ಟೇ ಉತ್ತಮವಾಗಿ ಉತ್ತರ ಬರೆದರೂ, ಕನ್ನಡ ಮಾಧ್ಯಮದಲ್ಲಿ ಉತ್ತರಿಸಿರುವ ವಿದ್ಯಾರ್ಥಿಗಳಿಗೆ ಬಿ ಶ್ರೇಣಿ' ನೀಡಲಾಗುತ್ತಿದೆ.

ಕಲಿಕೆಯಲ್ಲಿ ಕನ್ನಡಕ್ಕೆ ಎರಡನೇ ಸ್ಥಾನ ನೀಡುತ್ತಿರುವುದು ಮತ್ತು ಕನ್ನಡದಲ್ಲಿ ಬರೆಯುವ ವಿದ್ಯಾರ್ಥಿಗಳಿಗೆ ಮಾನ್ಯತೆ ನೀಡದಿರುವುದು ಸ್ಪಷ್ಟವಾಗಿ ಭಾಷಾ ಆಯ್ಕೆ ಸ್ವಾತಂತ್ರ್ಯದ ಉಲ್ಲಂಘನೆಯಾಗಿದೆ. ಪ್ರಾಥಮಿಕ ಶಿಕ್ಷಣದಲ್ಲಿ ಮಾತೃ ಭಾಷೆಗೆ ಉತ್ತೇಜನೆ ನೀಡುವುದನ್ನು ಕಡ್ಡಾಯಗೊಳಿಸಿರುವ ಸುಪ್ರಿಂಕೋರ್ಟಿನ ಇತ್ತೀಚಿನ ತೀರ್ಪನ್ನು ಕೂಡ ಸರ್ಕಾರವು ಉಲ್ಲಂಘಿಸುತ್ತಿದೆ. ಕರ್ನಾಟಕದ ರಾಜ್ಯ ಸರ್ಕಾರದ ಈ ನಡೆಯನ್ನು ಎಐಡಿಎಸ್‌ಓ ತೀವ್ರವಾಗಿ ಖಂಡಿಸುತ್ತದೆ.

ಪ್ರಾಥಮಿಕ ಹಂತದಲ್ಲಿ ಮಾತೃಭಾಷೆಯ ಕಲಿಕೆಯನ್ನು ಉತ್ತೇಜಿಸಬೇಕಿದ್ದ ಸರ್ಕಾರವೇ ತದ್ವಿರುದ್ಧವಾಗಿ ಕನ್ನಡದ ಆಯ್ಕೆಯೆಡೆಗೆ ನೀರುತ್ತೇಜನೆ ತೋರುತ್ತಿರುವುದು ಮಾತೃ ಭಾಷಾ ಶಿಕ್ಷಣಕ್ಕೆ ಮತ್ತು ನಾಡಿನ ಜನತೆಗೆ ಮಾಡಿರುವ ದ್ರೋಹವಾಗಿದೆ.

ವಿದ್ಯಾರ್ಥಿಗಳು, ಶಿಕ್ಷಕರು ಹಾಗೂ ಪಾಲಕರೊಡನೆ ಸಮಾಲೋಚನೆ ನಡೆಸದೇ, ಎಲ್ಲ ಪ್ರಜಾತಾಂತ್ರಿಕ ಪ್ರಕ್ರಿಯೆಯನ್ನು ಗಾಳಿಗೆ ತೂರಿ ದ್ವಿಭಾಷಾ ಮಾಧ್ಯಮವನ್ನು ಅಳವಡಿಸಲಾಗಿದೆ. ಇದೇ ಸಮಸ್ಯೆಯ ಮೂಲ. ಮಾತೃ ಭಾಷಾ ಶಿಕ್ಷಣ ಓರ್ವ ವಿದ್ಯಾರ್ಥಿಯ ಮಾನಸಿಕ ಬೆಳವಣಿಗೆಯ ತಳಹದಿ ಆ ತಳಹದಿಯನ್ನೇ ರಾಜ್ಯ ಸರ್ಕಾರ ಕಡೆಗಣಿಸುತ್ತಿರುವುದು, ಭಾಷಾ ತಜ್ಞರು ಹಾಗೂ ಶಿಕ್ಷಣ ತಜ್ಞರ ಅಭಿಪ್ರಾಯಕ್ಕೆ ತದ್ವಿರುದ್ಧವಾಗಿದೆ.

ರಾಜ್ಯ ಸರ್ಕಾರವು ಕೂಡಲೇ ಈ ಶಿಕ್ಷಣ ವಿರೋಧಿ ಅವೈಜ್ಞಾನಿಕ ಮತ್ತು ಅಪ್ರಜಾತಾಂತ್ರಿಕ ಕ್ರಮವನ್ನು ಕೈಬಿಡಬೇಕು ಮತ್ತು ಕನ್ನಡ ಮಾಧ್ಯಮದ ಆಯ್ಕೆ ಸ್ವಾತಂತ್ರ್ಯವನ್ನು ರಕ್ಷಿಸಿ ಉತ್ತೇಜನೆ ನೀಡಬೇಕೆಂದು ಎಐಡಿಎಸ್‌ಓ ಯಾದಗಿರಿ ಜಿಲ್ಲಾ ಸಮಿತಿಯು ಆಗ್ರಹ ವ್ಯಕ್ತಪಡಿಸುತ್ತದೆ.

# ಮನೆ ಗಿಡಗಳು ಮನೆಯ ಸೌಂದರ್ಯವನ್ನು ಹೆಚ್ಚಿಸುವುದಲ್ಲದೆ ನಮ್ಮ ಆರೋಗ್ಯಕ್ಕೂ ಬಹಳ ಒಳ್ಳೆಯದು: ಶಾಸಕ ತುನ್ನೂರ



■ ಕನ್ನಡ ಮಾತೃ ಭೂಮಿ ವಾರ್ತೆ

**ಯಾದಗಿರಿ,ಜೂ.17**-ನಗರವನ್ನು ಹಸಿರಿಕರಣ ಮಾಡಲು ಮುಂದಾಗಿರುವ ನಗರಸಭೆ ಈ ನಿಟ್ಟಿನಲ್ಲಿ ವಿನೂತನ ಕಾರ್ಯಕ್ರಮವೊಂದು ಹಂತ,ಹಂತವಾಗಿ ಜಾರಿ ಮಾಡಲು ಮುಂದಾಗಿದೆ. ಈ ನಿಟ್ಟಿನಲ್ಲಿ ನಗರದ ಲಕ್ಷ್ಮೀ ನಗರದ ಸಾರ್ವಜನಿಕ ಉದ್ಯಾನವನದಲ್ಲಿ ನನ್ನ ಕುಟುಂಬ, ನಮ್ಮ ನೆಗಿಡ ಎಂಬ ಹೆಸರಲ್ಲಿ ಉದ್ಯಾನವನಗಳ ಸುತ್ತ ಮುತ್ತಲಿನ ಜನರಿಂದಲ್ಲೇ ಸಸಿ ನೆಡೆಸಿ, ಅವುಗಳ ಪೊಷಣೆ ಮಾಡುವ ಮೂಲಕ ನಗರವನ್ನು ಹಸಿರಿಕರಣಕ್ಕೆ ನಗರಸಭೆ ಮುಂದಾಗಿದೆ.

ಸೋಮವಾರ ಶಾಸಕ ಚನ್ನಾರೆಡ್ಡಿ ಪಾಟೀಲ್ ತುನ್ನೂರ ಅವರು ಸಾಂಕೇತಿಕವಾಗಿ ಸಸಿ ನೆಡುವ ಮೂಲಕ ಈ ಮಹತ್ವದ ಕೆಲಸಕ್ಕೆ ಚಾಲನೆ ನೀಡಿದರು.

ಈ ವೇಳೆ ಮಾತನಾಡಿದ ಅವರು, ಪರಿಸರ ಉಳಿದರೇ ನಾವೇಲ್ಲ ಆರೋಗ್ಯದಿಂದ ಇರಲು ಸಾಧ್ಯವೆಂದರು. ಕಾರಣ, ಎಲ್ಲ ತಮ್ಮ, ತಮ್ಮ ಏರಿಯಾಗಳಲ್ಲಿನ ಉದ್ಯಾನವನಗಳಲ್ಲಿ ಸಸಿ ನೆಟ್ಟು ಅವುಗಳನ್ನು ಪೊಷಿಸಬೇಕೆಂದು ಹೇಳಿದರು.

ಅವುಗಳನ್ನು ಕುಟುಂಬದ ಸದಸ್ಯರಂತೆಯೇ ಬೆಳೆಸುವ ಸಂಕಲ್ಪ ಮಾಡಬೇಕೆಂದರು. ಮಕ್ಕಳಲ್ಲಿ ಪರಿಸರದ ಅರಿವು ಮೂಡಿಸಬೇಕು. ಆ ಮೂಲಕ ಹೊಸ ಪೀಳಿಗೆ ಮೂಲಕ ಜಿಲ್ಲೆ ಹಸಿರುಮಯವಾಗಲಿ ಎಂದರು.

ನಗರಸಭೆ ಪೌರಾಯುಕ್ತ ಉಮೇಶ ಚವ್ಹಾಣ ಮಾತನಾಡಿ, ನಗರದ ಹತ್ತು ಉದ್ಯಾನಗಳಲ್ಲಿ ಈ ಕಾರ್ಯಕ್ರಮ್ ಹಾಕಿಕೊಳ್ಳಲಾಗಿದೆ.ಪ್ರತಿ ಉದ್ಯಾನವನದಲ್ಲೂ ಕನಿಷ್ಟ ಐವತ್ತು ಸಸಿಗಳನ್ನು ಆಯಾ ಏರಿಯಾಗಳ ನಿವಾಸಿಗಳಿಂದಲ್ಲೇ ನೆಡಿಸಿ, ಪ್ರತಿಯೊಂದು ಸಸಿಗೂ ನೆಟ್ಟವರ ಮನೆ ಹೆಸರು ಕೊಟ್ಟು, ಅದರ ಹೊಣೆಗಾರಿಕೆ ಅವರಿಗೆ ವಹಿಸಲಾಗುವುದೆಂದರು. ನಗರಸಭೆ ಸಿಬ್ಬಂದಿಗಳಾದ ಶಿವಪುತ್ರ,ಲಕ್ಷ್ಮೀ ನಗರದ ನೂರಾರು ಜನರು ಸೇರಿದಂತೆಯೇ ಇತರರಿದ್ದರು.

# ದುರಹಂಕಾರ ಬಿಟ್ಟು ಕಾನೂನು ಪಾಲಿಸಿ: ಇಲ್ಲಿ ಶ್ರೀರಾಮನೇ ಲೆಕ್ಕ ಕೊಡಬೇಕು, ಇನ್ನು ರಾಮನ ಹೆಸರಲ್ಲಿ ರಾಜಕೀಯ ಮಾಡಿದವರು ಕೊಡಬಾರ್ದಾ?

■ ಕನ್ನಡ ಮಾತೃ ಭೂಮಿ ವಾರ್ತೆ

**ನವದೆಹಲಿ,ಜೂ.16**-ರಾಷ್ಟ್ರೀಯ ಸ್ವಯಂಸೇವಕ ಸಂಘ ನೋಂದಣಿ ಮಾಡಿಸಬೇಕು ಮತ್ತು ಪಾರದರ್ಶಕವಾಗಿ ಲೆಕ್ಕ ಕೊಡಬೇಕು ಎಂದು ಮತ್ತೆ ಆಗ್ರಹಿಸಿರುವ ಗೃಹ ಸಚಿವ ಪ್ರಿಯಾಂಕ್ ಖರ್ಗೆ ಅವರು, ನಮ್ಮ ದೇಶದಲ್ಲಿ ಶ್ರೀರಾಮನೇ ಲೆಕ್ಕ ಕೊಡಬೇಕು. ಇನ್ನು ಶ್ರೀರಾಮನ ಹೆಸರಿನಲ್ಲಿ ರಾಜಕೀಯ ಮಾಡಿದವರು ಲೆಕ್ಕ ಕೊಡಬಾರದಾ? ಎಂದು ಮಂಗಳವಾರ ಪ್ರಶ್ನಿಸಿದ್ದಾರೆ. ನಿನ್ನೆ ಆರ್‌ಎಸ್‌ಎಸ್ ನೋಂದಣಿ ಮತ್ತು ಹಣಕಾಸು ವಹಿವಾಟುಗಳ ಮಾಹಿತಿ ಕೋರಿ ಸಂಘದ ಮುಖ್ಯಸ್ಥ ಮೋಹನ್ ಭಾಗವತ್ ಅವರಿಗೆ ಪತ್ರ ಬರೆದ ಪ್ರಿಯಾಂಕ್ ಖರ್ಗೆ ವಿರುದ್ಧ ಪ್ರತಿಪಕ್ಷ ಬಿಜೆಪಿ ತೀವ್ರ ವಾಗ್ದಾಳಿ ನಡೆಸುತ್ತಿದೆ. ಈ ಹಿನ್ನೆಲೆಯಲ್ಲಿ ಇಂದು ದೆಹಲಿಯಲ್ಲಿ ಸುದ್ದಿಗೋಷ್ಠಿ ಉದ್ದೇಶಿಸಿ ಮಾತನಾಡಿದ ಪ್ರಿಯಾಂಕ್ ಖರ್ಗೆ, ಆರ್‌ಎಸ್‌ಎಸ್ ನವರು 'ದುರಹಂಕಾರ ಬಿಟ್ಟು ಕಾನೂನು' ಪಾಲಿಸಬೇಕು ಎಂದು ಹೇಳಿದ್ದಾರೆ. ಅಯೋಧ್ಯೆಯಲ್ಲಿ ರಾಮ ಮಂದಿರದ ದೇಣಿಗೆ ವಿಚಾರದಲ್ಲಿ ಹಗರಣ ನಡೆದಿದೆ. ನಮ್ಮ ದೇಶದಲ್ಲಿ ಶ್ರೀರಾಮನೇ ಲೆಕ್ಕ ಕೊಡುವ ಪರಿಸ್ಥಿತಿ ಇದೆ. ಇನ್ನೂ ಶ್ರೀರಾಮನ ಹೆಸರಿನಲ್ಲಿ ರಾಜಕೀಯ ಮಾಡಿದವರು ಯಾಕೆ ಲೆಕ್ಕ ಕೊಡಬಾರದು? ಎಂದು ಪ್ರಶ್ನಿಸಿದರು.

ಬಿಜೆಪಿಯವರು ಆರ್‌ಎಸ್‌ಎಸ್‌ನ ಆಳು ಮಕ್ಕಳು, ಅವರು ವಿರೋಧ ಮಾಡೇ ಮಾಡ್ತಾರೆ. ಪಾರದರ್ಶಕತೆ ಕೇಳುವುದು ತಪ್ಪಾ? ಪತ್ರದಲ್ಲಿ ತಪ್ಪೇನಿದೆ ಹೇಳಿ? ನಿತ್ಯ ಸಾವಿರಾರು ಶಾಖಾ ಸಭೆಗಳನ್ನ ನಡೆಸಲಾಗುತ್ತಿದೆ. ಆರ್‌ಎಸ್‌ಎಸ್ ಮಾಹಿತಿ ನೀಡದಂತೆ ಲಕ್ಷಾಂತರ ಜನರನ್ನು ಸೇರಿಸಿ ಪಂಥಸಂಚಲನ ಮಾಡುತ್ತಿದ್ದಾರೆ. ಅಖಿಲ ಭಾರತ ಪ್ರತಿನಿಧಿ ಸಭಾ ಈ ಮಾಹಿತಿ ನೀಡಿದೆ. ಹೈಕೋರ್ಟ್ ಆದೇಶ ಉಲ್ಲಂಘಿಸಿ ಪಥಸಂಚಲನ ಮಾಡಿದರೆ ಪ್ರಶ್ನೆ ಮಾಡಬಾರದಾ? ಎಂದು ಕೇಳಿದರು.

ಜವಬ್ದಾರಿ ಸ್ಥಾನದಲ್ಲಿ ಕುಳಿತು ನಾನು ಕೇಳುತ್ತಿದ್ದೇನೆ. ಯಾವುದೇ ಧರ್ಮದ ಸಂಘ ಸಂಸ್ಥೆಗಳಾದರೂ ಕಾನೂನು ಅಡಿಯಲ್ಲಿ ಬರಬೇಕು. ಯಾವುದೇ ಕಾರ್ಯಕ್ರಮ ಮಾಡಿದ್ರೂ ಪೊಲೀಸ್ ಅನುಮತಿ ಪಡೆಯಬೇಕು. ಆರ್‌ಎಸ್‌ಎಸ್ ಪಡೆಯುವುದು ತಪ್ಪಾ? ನಿಮ್ಮ ಆಡಳಿತ ಸಿಬ್ಬಂದಿ ಯಾರು ಎಂದು ತಿಳಿದುಕೊಳ್ಳಬಾರದಾ? ದೇಣಿಗೆ ಸಂಗ್ರಹ ಮಾಡುತ್ತಿದ್ದಾರೆ ಎಷ್ಟು ಬರ್ತಿದೆ? ಇದೆಲ್ಲಾ ಕೇಳಬಾರದಾ? ಆರ್‌ಎಸ್‌ಎಸ್‌ನವರು ಕಾನೂನು ಹೋರಾಟಕ್ಕೆ ಮೂರು ಕೋಟಿ ಖರ್ಚು ಮಾಡಿದ್ದಾರೆ. ಸಂಘದ ನಾಯಕರು ಅಮೆರಿಕ ಪ್ರವಾಸ ಮಾಡುತ್ತಾರೆ. ಅವರಿಗೆ ಹಣ ಎಲ್ಲಿಂದ ಬರ್ತಿದೆ? ಅವರ ಚಟುವಟಿಕೆಗಳು ಏನು? ಅಂತ ಪ್ರಶ್ನೆಗಳ ಮಳೆಸುರಿಸಿದರು.

ಸಾಂವಿಧಾನಿಕ ಪ್ರಜಾಪ್ರಭುತ್ವದಲ್ಲಿ, ಯಾವುದೇ ಸಂಸ್ಥೆ, ಅದು ಎಷ್ಟೇ ಹಳೆಯದಾಗಿರಲಿ ಅಥವಾ ಪ್ರಭಾವಶಾಲಿಯಾಗಿರಲಿ ದೇಶದ ಕಾನೂನು ಪಾಲಿಸಬೇಕು. ದುರಹಂಕಾರವನ್ನು ದೂರವಿಡಿ, ಕಾನೂನನ್ನು ಅನುಸರಿಸಿ ಮತ್ತು ನಿಮ್ಮ 'ಪದಾಧಿಕಾರಿಗಳು' ಅಥವಾ 'ಕಾನೂನು ಮುಖ್ಯಸ್ಥರು' ಬಂದು ನನಗೆ ವಿವರಿಸಲಿ ಎಂದು ಪ್ರಿಯಾಂಕ್ ಖರ್ಗೆ ಹೇಳಿದರು.

ಸಫಾಯಿ ಕರ್ಮಚಾರಿಗೂ ನೊಂದಣಿ ಬೇಕು, ಇವರಿಗೆ ನೋಂದಣಿ ಯಾಕೆ ಇಲ್ಲ? ಎಲ್ಲದಕ್ಕೂ ಧರ್ಮ ಅಡ್ಡ ತರ್ತಾರೆ, ನಾನು ಎಲ್ಲಿ ಧರ್ಮ ಉಲ್ಲೇಖಿಸಿದ್ದೇನೆ? ನನ್ನ ಪತ್ರದಲ್ಲಿ ಹಿಂದೂ ಅನ್ನೊ ಪದ ಎಲ್ಲಿದೆ? ಕೆಲವು ಕಡೆ ನನ್ನ ಪತ್ರಕ್ಕೆ ಸರ ಸಂಘ ಸಂಚಾಲಕ ಮೋಹನ್ ಭಾಗವತ್ ಉತ್ತರಿಸಿದ್ದಾರೆ ಎನ್ನಲಾಗುತ್ತಿದೆ. ವಾಸ್ತವದಲ್ಲಿ ಅವರು ಇನ್ನು ಉತ್ತರ ನೀಡಿಲ್ಲ ಮೋಹನ್ ಬಾಗವತ್ ಅವರು ಜೂನ್ 13 ರಂದು ನೀಡಿದ ಹೇಳಿಕೆಯನ್ನು ತಿರುಚಲಾಗುತ್ತಿದೆ. ನಾನು ನಿನ್ನೆ ಪತ್ರ ಬಿಡುಗಡೆ ಮಾಡಿದ್ದೇನೆ. ಅದಕ್ಕೂ ಮುನ್ನ ಹೇಳಿಕೆ ನೀಡಿದ್ದಾರೆ, ಹಾಗಿದ್ದಾಗ ಅದು ಉತ್ತರ ಹೇಗೆ ಆಗಲು ಸಾಧ್ಯ? ನಾನು ಧರ್ಮಕ್ಕೆ ನೋಂದಣಿ ಕೇಳುತ್ತಿಲ್ಲ, ಸಂಘಕ್ಕೆ ನೋಂದಣಿ ಕೇಳುತ್ತಿದ್ದೇನೆ ಅವರು ಉತ್ತರಿಸಲಿ ಎಂದರು.

# ವಿದ್ಯಾರ್ಥಿಗಳಿಗೆ ಉಚಿತ ಬಸ್ ಪಾಸ್ ಸರ್ಕಾರದ ಕ್ರಮ ಸ್ವಾಗತ:ಹೊನ್ನೇಶ

**ಯಾದಗಿರಿ,ಜೂ.17**- ರಾಜ್ಯ ಸರ್ಕಾರದಿಂದ ಶಾಲಾ ಕಾಲೇಜು ವಿದ್ಯಾರ್ಥಿಗಳಿಗೆ ಉಚಿತ ಬಸ್ ಪಾಸ್ ಘೋಷಣೆಯನ್ನು ಕಾಂಗ್ರೆಸ್ ಎನ್,ಎಸ್,ಯು,ಐ ಜಿಲ್ಲಾ ಘಟಕ ಅಧ್ಯಕ್ಷ ಹೊನ್ನೇಶ ದೊಡ್ಮನಿ ಬಳಿಚಕ್ರ ಸ್ವಾಗತಿಸಿದ್ದಾರೆ.ಈ ಕುರಿತು ಪತ್ರಿಕಾ ಹೇಳಿಕೆ ನೀಡಿರುವ ಅವರು ರಾಜ್ಯದ ಮುಖ್ಯಮಂತ್ರಿ ಡಿ.ಕೆ ಶಿವಕುಮಾರ್ ನೇತೃತ್ವದ ಕಾಂಗ್ರೆಸ್ ಸರ್ಕಾರ ಅಸ್ತಿತ್ವಕ್ಕೆ ಬಂದ ಕ್ಷಣವೇ ಶಾಲಾ ಕಾಲೇಜು ವಿದ್ಯಾರ್ಥಿಗಳಿಗೆ ಉಚಿತ ಬಸ್ ಪಾಸ್ ವಿತರಿಸಲು ಕ್ರಮ ಕೈಗೊಂಡಿರುವುದು ಅತ್ಯಂತ ಸಂತಸದ ವಿಷಯ ರಾಜ್ಯದ ಅದೆಷ್ಟು ಬಡ ವಿದ್ಯಾರ್ಥಿಗಳಿಗೆ ಶಿಕ್ಷಣ ಕಲಿಯಲು ಅನುಕೂಲವಾಗಲಿದೆ ಈ ಹಿಂದೆ ಬಡ ಕೂಲಿ ಕಾರ್ಮಿಕರ ರೈತರ ಮಕ್ಕಳು ಶಾಲಾ ಕಾಲೇಜುಗಳಿಗೆ ತೇರಳಬೇಕಾದರೆ ಪ್ರತಿ ವರ್ಷ ದುಡ್ಡು ಕಟ್ಟಿ ಪಾಸ್ ತೆಗೆದುಕೊಳ್ಳುವ ಪರಿಸ್ಥಿತಿ ಇತ್ತು ಆದರೆ ಈಗ ಉಚಿತ ಬಸ್ ಪಾಸ್ ಜಾರಿಗೆ ತಂದಿದ್ದು ವಿದ್ಯಾರ್ಥಿಗಳ ಪಾಲಿಗೆ ಶುಭ ಸುದ್ದಿ ಡಿ.ಕೆ ಶಿವಕುಮಾರ್ ಅವರು ಕೂಡಾ ಕಾಂಗ್ರೆಸ್ ವಿದ್ಯಾರ್ಥಿ ಘಟಕದಿಂದ ಈ ಮಟ್ಟಕ್ಕೆ ಬೆಳೆದು ಬಂದಿದ್ದು ವಿದ್ಯಾರ್ಥಿಗಳ ಕಷ್ಟವನ್ನು ಅರ್ಥೈಸಿಕೊಂಡು ಉಚಿತ ಬಸ್ ಪಾಸ್ ವಿತರಣೆ ಜಾರಿಗೆ ತಂದಿದ್ದು ರಾಜ್ಯ ಸರ್ಕಾರದ ಈ ನಿರ್ಧಾರದಿಂದ ವಿದ್ಯಾರ್ಥಿಗಳಿಗೆ ತುಂಬಾ ಸಹಾಯ ಮಾಡಿದಂತಾಗಿದೆ ಎಲ್ಲಾ ಶಾಲಾ ಕಾಲೇಜಿನ್ ಸಮಸ್ತ ವಿದ್ಯಾರ್ಥಿ ಮಿತ್ರರು ಉಚಿತ ಬಸ್ ಪಾಸಿನ್ ಸದುಪಯೋಗವನ್ನು ಪಡಿಸಿಕೊಳ್ಳುವಂತೆ ಸಲಹೆ ನೀಡಿದ್ದಾರೆ.ನಮ್ಮ ಕಾಂಗ್ರೆಸ್ ಸರ್ಕಾರ ನುಡಿದಂತೆ ನಡೆದಿದೆ ಹಲವು ಹತ್ತಾರು ಯೋಜನೆಗಳನ್ನು ಜಾರಿಗೆ ತಂದು ಬಡವರ ಪಾಲಿಗೆ ಬೆಳಕಾಗಿದೆ.

# ಪೋಕ್ಸೋ ಪ್ರಕರಣದ ಆರೋಪಿಗೆ 20 ವರ್ಷಗಳ ಕಠಿಣ ಶಿಕ್ಷೆ, ಸಂತ್ರಸ್ತೆಗೆ 4 ಲಕ್ಷ ರೂ. ಪರಿಹಾರ ನೀಡುವಂತೆ ಕೋರ್ಟ್ ಆದೇಶ

**ಚಿಕ್ಕಮಗಳೂರು,ಜೂ.16**-ಬಾಲಕಿ ಮೇಲಿ ನ ಲೈಂಗಿಕ ದೌರ್ಜನ್ಯ ಪ್ರಕರಣ ಸಂಬಂಧ ಆರೋಪಿಯೊಬ್ಬನಿಗೆ ಚಿಕ್ಕಮಗಳೂ ರು ಜಿಲ್ಲಾ ನ್ಯಾಯಾಲಯವು 20 ವರ್ಷಗಳ ಕಠಿಣ ಶಿಕ್ಷೆ ವಿಧಿಸಿ ತೀರ್ಪು ನೀಡಿದೆ. ಅಲ್ಲದೇ ಸಂತ್ರಸ್ತೆಗೆ 4 ಲಕ್ಷ ರೂ. ಪರಿಹಾರ ನೀಡುವಂತೆ ತನ್ನ ಆದೇಶದಲ್ಲಿ ತಿಳಿಸಿದೆ.

ಕಳಸ ಪೊಲೀಸ್ ಠಾಣಾ ವ್ಯಾಪ್ತಿಯಲ್ಲಿ ದಾಖಲಾಗಿದ್ದ ಪೋಕ್ಸೋ ಪ್ರಕರಣವೊಂದರಲ್ಲಿ ಆರೋಪಿಗೆ 20 ವರ್ಷಗಳ ಕಠಿಣ ಕಾರಾಗೃಹ ಶಿಕ್ಷೆ, ₹25,000 ದಂಡದ ಜೊತೆಗೆ ಸಂತ್ರಸ್ತ ಬಾಲಕಿಗೆ ₹4 ಲಕ್ಷ ಪರಿಹಾರ ನೀಡುವಂತೆ ನ್ಯಾಯಾಲಯ ಮಹತ್ವದ ತೀರ್ಪು ನೀಡಿ ಆದೇಶ ಮಾಡಿದೆ.

ಪ್ರಕರಣದ ಹಿನ್ನೆಲೆ ಹೀಗಿದೆ; ಹೆಮ್ಮಕ್ಕಿ ಗ್ರಾಮದ ಬಿಳಗೂರು ನಿವಾಸಿ ಅನಿಲ್ (30) ಎಂಬಾತ ಅಪ್ರಾಪ್ತೆಯ ಮೇಲೆ ಲೈಂಗಿಕ ದೌರ್ಜನ್ಯ ಎಸಗಿದ್ದ ಆರೋಪದಡಿ 2024ರ ನವೆಂಬರ್ 16 ರಂದು ಕಳಸ ಪೊಲೀಸ್ ಠಾಣೆಯಲ್ಲಿ ಭಾರತೀಯ ದಂಡ ಸಂಹಿತೆಯ ಕಲಂ 376 (2)(ಎನ್), ಪೋಕ್ಸೋ ಕಾಯ್ದೆಯ ಕಲಂ 4 ಮತ್ತು 6 ಹಾಗೂ ಎಸ್‌ಸಿ/ಎಸ್‌ಟಿ ದೌರ್ಜನ್ಯ ತಡೆ ಕಾಯ್ದೆಯ ವಿವಿಧ ಕಲಂಗಳಡಿ ಪ್ರಕರಣ ದಾಖಲಾಗಿತ್ತು.

ಪ್ರಕರಣದ ವಿಚಾರಣೆ ನಡೆಸಿದ ಚಿಕ್ಕಮಗಳೂರಿನ ಹೆಚ್ಚುವರಿ ಜಿಲ್ಲಾ ಮತ್ತು ಸತ್ರ ನ್ಯಾಯಾಲಯ (ಎಫ್.ಟಿ.ಎಸ್.ಸಿ.-1) ಆರೋಪಿಯ ವಿರುದ್ಧದ

ಆರೋಪಗಳು ಸಾಬೀತಾಗಿರುವುದಾಗಿ ತೀರ್ಮಾನಿಸಿ, ಜೂನ್ 15, 2026 ರಂದು ಶಿಕ್ಷೆ ಪ್ರಕಟಿಸಿದೆ. ನ್ಯಾಯಾಲಯ ಆರೋಪಿಗೆ 20 ವರ್ಷಗಳ ಕಠಿಣ ಶಿಕ್ಷೆ ಹಾಗೂ ₹25 ಸಾವಿರ ದಂಡ ವಿಧಿಸಿದೆ.

# ...ಮೊದಲನೇ ಪುಟದಿಂದ

## ವಿಧಾನ ಪರಿಷತ್ ಚುನಾವಣೆ : ಐದನೇ ಅಭ್ಯರ್ಥಿ ಗೆಲುವಿಗೆ ಕಾಂಗ್ರೆಸ್ ಮಹಾ ರಣತಂತ್ರ, ಬಿಡದಿಯಲ್ಲಿ ಶಾಸಕರ ಮಹತ್ವದ ಸಭೆ

ಕಾಂಗ್ರೆಸ್ ಶಾಸಕಾಂಗ ಪಕ್ಷದ ಸಭೆ ಹಮ್ಮಿಕೊಳ್ಳಲಾಗಿತ್ತು. ಸಭೆಯಲ್ಲಿ ಇದೇ 18ರಂದು ನಡೆಯಲಿರುವ ವಿಧಾನ ಪರಿಷತ್ ಚುನಾವಣೆಯಲ್ಲಿ ಕಾಂಗ್ರೆಸ್ ಅಭ್ಯರ್ಥಿ ಗೆಲ್ಲಿಸಿಕೊಂಡು ಬರುವ ಬಗ್ಗೆ ಚರ್ಚಿಸಲಾಯಿತು. ಸಭೆಯಲ್ಲಿ ಒಗ್ಗಟ್ಟಿನ ಮಂತ್ರ ಜಪಿಸಲಾಯಿತು. ಚುನಾವಣೆಯವರೆಗೂ ಕೂಡ ಶಾಸಕರು ಇದೇ ರೆಸಾರ್ಟ್ ನಲ್ಲಿ ತಂಗಲಿದ್ದಾರೆ.

ಚುನಾವಣೆ ದಿನದಂದು ಇಲ್ಲಿಂದಲೆ ಎಲ್ಲಾ ಶಾಸಕರು ವಿಧಾನಸೌಧಕ್ಕೆ ತೆರಳಿ ಮತದಾನ ಮಾಡಲಿದ್ದಾರೆ. ನಮ್ಮಲ್ಲಿ ಯಾವುದೇ ರೀತಿಯ ಭಿನ್ನಾಭಿಪ್ರಾಯ ಇಲ್ಲ. ನಾವೆಲ್ಲರೂ ಒಗ್ಗಟ್ಟಾಗಿದ್ದು, ಚುನಾವಣೆಯಲ್ಲಿ ನಮ್ಮ ಅಭ್ಯರ್ಥಿಯನ್ನ ಗೆಲ್ಲಿಸಿಕೊಂಡು ಬರಬೇಕೆಂದು ಸಭೆಯಲ್ಲಿ ಚರ್ಚಿಸಲಾಯಿತು.

ಮೇಲ್ಮನೆ ಚುನಾವಣೆ ಮಧ್ಯೆ ಕಾಂಗ್ರೆಸ್, ಜೆಡಿಎಸ್ ಶಾಸಕರ ರೆಸಾರ್ಟ್ ಪಾಲಿಟಿಕ್ಸ್; ಏಳನೇ ಅಭ್ಯರ್ಥಿಯ ಗೆಲುವಿನ ಲೆಕ್ಕಾಚಾರ ಏನು?

ಪರಿಷತ್ ಚುನಾವಣೆಗೆ ಈ ಎಲ್ಲ ಹೆಸರುಗಳ ಘೋಷಣೆ: ಕೆಪಿಸಿಸಿ ಅಧ್ಯಕ್ಷ ಬಿ.ಕೆ.ಹರಿಪ್ರಸಾದ್, ಪಿ.ವಿ.ಮೋಹನ್, ತಿಪ್ಪಣ್ಣಪ್ಪ ಕಮಕನೂರು ಹಾಗೂ ಮಳವಳ್ಳಿ ಶಿವಣ್ಣ ಅವರ ಹೆಸರನ್ನು ವಿಧಾನಪರಿಷತ್ ಚುನಾವಣೆಗೆ ಕಾಂಗ್ರೆಸ್ ಈ ಹೆಸರುಗಳನ್ನು ಮೊದಲಿಗೆ ಘೋಷಿಸಿತ್ತು. ಬಳಿಕ ಐದನೇ ಅಭ್ಯರ್ಥಿಯಾಗಿ ವಿನಯ್ ಕಾರ್ತಿಕ್ ಅವರನ್ನು ನಿಲ್ಲಿಸುವುದಾಗಿ ಪ್ರಕಟಿಸಿತ್ತು.

ಕಾಂಗ್ರೆಸ್ ಅಭ್ಯರ್ಥಿಗಳ ಗೆಲುವಿನ ಲೆಕ್ಕಾಚಾರ ಹೀಗಿದೆ: ಸದ್ಯ ವಿಧಾನಸಭೆ 222 ಸದಸ್ಯ ಬಲಾಬಲ ಹೊಂದಿದೆ. ಈ ಪೈಕಿ 135 ಕಾಂಗ್ರೆಸ್ ಶಾಸಕರಾಗಿದ್ದಾರೆ. ವಿಧಾನಸಭೆಯಿಂದ ಮೇಲ್ಮನೆಗೆ ನಡೆಯುವ ಚುನಾವಣೆಯಲ್ಲಿ ಒಬ್ಬ ಅಭ್ಯರ್ಥಿ ಜಯಗಳಿಸಲು 28 ಮತಗಳ ಅಗತ್ಯ ಇದೆ. ಅದರಂತೆ ಕಾಂಗ್ರೆಸ್ ತನ್ನ 4 ಅಭ್ಯರ್ಥಿಗಳನ್ನು ಸುಲಭವಾಗಿ ಗೆಲ್ಲಿಸಬಹುದಾಗಿದೆ. ಐದನೇ ಅಭ್ಯರ್ಥಿಯನ್ನು ಗೆಲ್ಲಿಸಲು ಪಕ್ಷೇತರ ಅಭ್ಯರ್ಥಿಗಳ ಬೆಂಬಲ ಮತ್ತು ಉಚ್ಚಾಟಿತ ಇಬ್ಬರು ಬಿಜೆಪಿ ಶಾಸಕರ ಮತಗಳ ಬೆಂಬಲ ಅಗತ್ಯ ಇದೆ. ಐದನೇ ಅಭ್ಯರ್ಥಿಯ ಗೆಲುವು ಸಾಧ್ಯತೆ: ತಲಾ 28 ಶಾಸಕರ ಮತಗಳಂತೆ ಒಟ್ಟು 112 ಮೊದಲ ಪ್ರಾಶಸ್ತ್ಯದ ಮತಗಳು ಕಾಂಗ್ರೆಸ್‌ನ 4 ಅಭ್ಯರ್ಥಿಗಳಿಗೆ ಚಲಾವಣೆ ಆಗಲಿವೆ. ಬಳಿಕ ಕಾಂಗ್ರೆಸ್ ಬಳಿ 23 ಮತಗಳು ಉಳಿಯಲಿದೆ. ಮೂವರು ಪಕ್ಷೇತರ ಶಾಸಕರು ಹಾಗೂ ಇಬ್ಬರು ಉಚ್ಚಾಟಿತ ಬಿಜೆಪಿ ಶಾಸಕರ ಬೆಂಬಲದೊಂದಿಗೆ 28 ಮತಗಳು ಕ್ರೋಢೀಕರಣವಾಗಲಿದ್ದು, ತನ್ನ ಐದನೇ ಅಭ್ಯರ್ಥಿಯ ಗೆಲುವು ಸಾಧ್ಯವಾಗಲಿದೆ. ಈ ಲೆಕ್ಕಾಚಾರದೊಂದಿಗೆ ಕಾಂಗ್ರೆಸ್ ತನ್ನ ಐದನೇ ಅಭ್ಯರ್ಥಿಯನ್ನು ಕಣಕ್ಕಿಳಿಸಿದೆ.

## ಹೊಸ ಉದ್ಯೋಗಿಗಳು, ಉದ್ಯೋಗದಾರರಿಗೆ ಪ್ರೋತ್ಸಾಹ ಧನ- ನೀರಜಕುಮಾರ

ನೇರ ಸಂವಾದ ನಡೆಯಲಿದೆ. ಅಂದು ದೇಶದ ಪ್ರದಾನಿ ನರೇಂದ್ರ ಮೋದಿಯವರು ನಡೆಸಲಿರುವ ಸಂವಾದ ಕಾರ್ಯಕ್ರಮ ನೇರ ಪ್ರಸಾರ ನಡೆಸಲಾಗುತ್ತದೆ. ಉದ್ಯೋಗದಾತರು, ಉದ್ಯೋಗಿಗಳು ಭಾಗವಹಿಸುವಂತೆ ಮನವಿ ಮಾಡಿದರು. ರಾಯಚೂರು, ಬಾಗಲಕೋಟೆ ಮತ್ತು ಯಾದಗಿರಿ ಜಿಲ್ಲೆಗಳ ಒಳಗೊಂಡ ಪ್ರಾದೇಶಿಕ ಕಚೇರಿ ವ್ಯಾಪ್ತಿ ಫಲಾನುಭವಿಗಳು ಭಾಗವಹಿಸಲಿದ್ದಾರೆ ಎಂದರು. ದೇಶದ 200 ಕೇಂದ್ರಗಳಲ್ಲಿ ನಡೆಯಲಿರುವ ನೇರ ಪ್ರಸಾರದಲ್ಲಿ ರಾಯಚೂರು ಕೇಂದ್ರವೂ ಒಂದಾಗಿದೆ ಎಂದರು.ಅನುಷ್ಠಾನಾಧಿಕಾರಿ ಶರಣಬಸವ ಮಾತನಾಡಿ ಮೂರು ಜಿಲ್ಲೆಗಳಲ್ಲಿ 595 ಫಲಾನುಭವಿಗಳಿಗೆ ಯೋಜನೆ ಲಾಭ ಪಡೆಯಲಿದ್ದಾರೆ. ಉದ್ಯೋಗದಾತರು ಹಾಗೂ ಉದ್ಯೋಗಿಗಳಿಗೆ ನೆರವಾಗಲಿರುವ ಪ್ರೋತ್ಸಾಹದಾಯಕ ಯೋಜನೆ ಪ್ರಧಾನ ಮಂತ್ರಿ ವಿಕಸಿತಭಾರತ ಉದ್ಯೋಗಯೋಜನೆಯಡಿ ದೇಶದಾದ್ಯಂತ 3.5 ಕೋಟಿ ಗೂ ಅಧಿಕ ಹೊಸ ಉದ್ಯೋಗ ಸೃಷ್ಟಿಯಾಗಲಿದೆ. ಈಗಾಗಲೇ ಯೋಜನೆ ಜಾರಿಯಲ್ಲಿ ಫಲಾನುಭವಿಗಳಿಗೆ ತಲುಪಿರುವ ಕುರಿತು ಸಂವಾದ ಕಾರ್ಯಕ್ರಮ ನಡೆಯಲಿದೆ ಎಂದರು. ಈ ಸಂದರ್ಬದಲ್ಲಿ ಲೆಕ್ಕಾಧಿಕಾರಿ ರಾಘವೇಂದ್ರರಾವ್ ಕುಲ್ಕರ್ಣಿ ಇದ್ದರು.

## ಮತದಾರರ ಪಟ್ಟಿ ವಿಶೇಷ ಪರಿಷ್ಕರಣೆ ಹೆಸರಿನಲ್ಲಿ ಮತದಾರರ ಕಡಿತ ವಿರೋಧಿಸಿ ಜೂ.20 ರಂದು ಬೆಂಗಳೂರಿನಲ್ಲಿ ಸಮಾವೇಶ-ವೀರ ಸಂಗಯ್ಯ

ಜನರಿಗೆ ಮಾತ್ರ ಮತದಾರರ ಪಟ್ಟಿಗೆ ಮರು ಸೇರ್ಪಡೆ ಮಾಡಲಾಗಿದೆ. ಮತದಾರರ ಪಟ್ಟಿ ಪರಿಷ್ಕರಣೆ ಹೆಸರಿನಲ್ಲಿ ಕೇಂದ್ರ ಚುನಾವಣೆ ಆಯೋಗ ಕಡಿತ ಗೊಂಡು ಮತದಾರರ ಸೇರ್ಪಡೆಗೆ ಭರವಸೆ ನೀಡುತ್ತಿಲ್ಲ. ಅರ್ಜಿಸಲ್ಲಿಸಬಹುದು ಆದರೆ 12 ದಾಖಲೆಗಳನ್ನು ನೀಡಬೇಕು. ಹೆಸರುಗಳ ಬದಲಾವಣೆ ಹೆಸರಿನಲ್ಲಿ ಕಡಿತಗೊಳಿಸಲಾಗುತ್ತಿದೆ. ಅನಕ್ಷರಸ್ಥರು, ಆದಿವಾಸಿಗಳು ಅರ್ಜಿಗಳ ನೀಡಲು ತಿಳಿಯದೇ ವಂಚನೆಗೆ ಒಳಗಾಗುವ ಅಪಾಯವಿದೆ. ಕೂಡಲೇ ಎಸ್ಐಆರ್ ನಿಲ್ಲಿಸಬೇಕು. ರಾಜ್ಯದ ಕಾಂಗ್ರೆಸ್ ಸರ್ಕಾರ ಸ್ಪಷ್ಟ ನಿರ್ಧಾರ ಪ್ರಕಟಿಸಬೇಕೆಂದು ಆಗ್ರಹಿಸಿದರು. ಜೂ.20 ರಂದು ಬೆಂಗಳೂರಿನಲ್ಲಿ ನಡೆಯಲಿರುವ ಸಮಾವೇಶಕ್ಕೆ ಜನರು ಬೆಂಬಲಿಸಬೇಕೆಂದರು.

ರೈತ ಸಂಘದ ರಾಜ್ಯ ಗೌರವಾಧ್ಯಕ್ಷ ಚಾಮರಸ ಮಾಲಿಪಾಟೀಲ್ ಮಾತನಾಡಿ ಸರಿ ಸುಮಾರು 1975 ರಿಂದಲೂ ಮತದಾರರ ಪಟ್ಟಿಯಲ್ಲಿದ್ದ ನನ್ನ ಹೆಸರು ಕಡಿತಗೊಳಿಸಲಾಗಿದೆ. ಹೆಸರಿನಲ್ಲಿ ವ್ಯತ್ಯಾಸವಿದೆ ಎಂದು ಹೇಳುತ್ತಿರುವ ಅಧಿಕಾರಿಗಳು ಸರಿಪಡಿಸುವ ಕೆಲಸ ಮಾಡುತ್ತಿಲ್ಲ. ಅಗತ್ಯ ದಾಖಲೆ ನೀಡುತ್ತೇನೆ ಆದರೆ ತಿಳಿಯದೇ ಇರುವ ಜನರು ಮತದಾರರ ಪಟ್ಟಿಯಿಂದ ವಂಚನೆಗೆ ಒಳಗಾಗಬಾರದು ಎಂದರು.

ಈ ಸಂದರ್ಬದಲ್ಲಿ ಕಾಂಗ್ರೆಸ್ ಮುಖಂಡ ಮಹ್ಮದ ಶಾಲಂ, ಎನ್.ಶ್ರೀನಿವಾಸರೆಡ್ಡಿ, ಜಾನವೆಸ್ಲಿ ಚಿಕಲಪರ್ವಿ, ಅಸುಮುದ್ದೀನ್ ಅಕ್ತರ್, ಗುರುರಾಜ, ವಿಜಯರಾಣಿ, ಚೆನ್ನಮ್ಮ ,ಸುರೇಖಾ ಸೇರಿದಂತೆ ಅನೇಕರಿದ್ದರು.

## ವಿಶ್ವ ರಕ್ತದಾನ ದಿನಾಚರಣೆ: ರಕ್ತದಾನ ಮಾಡುವ ಮೂಲಕ ಜೀವ ಉಳಿಸಲು ಯುವಕರು ಮುಂದಾಗಿ ಎಸ್‌ಪಿ ಅರುಣ್ಣಾಂಗಿರಿ

ಆಸ್ಪತ್ರೆ, ರಕ್ತನಿಧಿ ಕೇಂದ್ರಗಳು, ಲಯನ್ಸ್ ಕ್ಲಬ್, ಎಎಂಇ ಟೆಂಡಲ್ ಕಾಲೇಜು, ನಂದಿನಿ ನರ್ಸಿಂಗ್ ಕಾಲೇಜು, ರೋಟರಿ ಕ್ಲಬ್, ಐಎಂಎ, ರೆಡ್ ಕ್ರಾಸ್ ಸಂಸ್ಥೆ, ರೆಡ್ ರಿಬ್ಬನ್ ಕ್ಲಬ್, ಎನ್‌ಎಸ್‌ಎಸ್, ವಿವಿಧ ಸಂಘ ಸಂಸ್ಥೆಗಳು ಸಂಯುಕ್ತ ಆಶ್ರಯದಲ್ಲಿ ವಿಶ್ವ ರಕ್ತದಾನಿಗಳ ದಿನಾಚರಣೆ ಅಂಗವಾಗಿ ಜಾಗೃತಿ ಜಾಥಾಗೆ ಚಾಲನೆ ನೀಡಿ ಮಾತನಾಡಿದರು,

ವಾಹನ ಸವಾರರು ಕಡ್ಡಾಯವಾಗಿ ಹೆಲ್ಮೆಟ್ ಧರಿಸಿ ಸುರಕ್ಷಿತವಾಗಿ ವಾಹನ ಚಲಾಯಿಸಬೇಕು. ರಕ್ತದ ಅವಶ್ಯಕತೆ ಹೆಚ್ಚಿರುವುದರಿಂದ ಜನರು ಸ್ವಯಂಪ್ರೇರಿತರಾಗಿ ರಕ್ತದಾನಕ್ಕೆ ಮುಂದಾಗಬೇಕು ಎಂದರು.

ವಿಶೇಷವಾಗಿ ಎ-ನೆಗೆಟಿವ್, ಬಿ-ನೆಗೆಟಿವ್ ಹಾಗೂ ಎಬಿ-ನೆಗೆಟಿವ್ ಸೇರಿದಂತೆ ಅಪರೂಪದ ರಕ್ತಗುಂಪು ಹೊಂದಿರುವವರು ರಕ್ತದಾನ ಮಾಡುವ ಮೂಲಕ ಅಮೂಲ್ಯ ಜೀವಗಳನ್ನು ಉಳಿಸಬಹುದು ಎಂದು ತಿಳಿಸಿದರು. ನಾನು ಈಗಾಗಲೇ 60 ಬಾರಿ ರಕ್ತದಾನ ಮಾಡಿದ್ದೇನೆ. ಸಾರ್ವಜನಿಕರೂ ರಕ್ತದಾನ ಮಾಡಲು ಮುಂದೆ ಬರಬೇಕು ಎಂದು ಅವರು ಹೇಳಿದರು.

ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ ಅಧಿಕಾರಿ ಡಾ. ಸುರೇಂದ್ರ ಬಾಬು ಮಾತನಾಡಿ, ಜಿಲ್ಲೆಯಲ್ಲಿ ರಕ್ತದಾನದ ಬಗ್ಗೆ ಜನರಲ್ಲಿ ಇನ್ನೂ ಸಮರ್ಪಕ ಜಾಗೃತಿ ಕೊರತೆಯಿದೆ. ರಕ್ತದಾನ ಮಾಡುವುದರಿಂದ ಯಾವುದೇ ಅಡ್ಡಪರಿಣಾಮ ಉಂಟಾಗುವುದಿಲ್ಲ. ಬದಲಾಗಿ ದೇಹದಲ್ಲಿ ಹೊಸ ರಕ್ತಕಣಗಳ ಉತ್ಪತ್ತಿಯಾಗುವುದರಿಂದ ಆರೋಗ್ಯದ ಮೇಲೂ ಉತ್ತಮ ಪರಿಣಾಮ ಬೀರುತ್ತದೆ ಎಂದರು.

ರಕ್ತವಿಲ್ಲದೆ ಅನೇಕ ಜೀವಗಳನ್ನು ಉಳಿಸಲು ಸಾಧ್ಯವಿಲ್ಲ. ರಕ್ತದಾನ ಮಾಡಿದರೆ ಜೀವಗಳನ್ನು ಉಳಿಸಲು ಸಾಧ್ಯವಾಗುತ್ತದೆ. ಆದ್ದರಿಂದ ಜನರು ಜಾಗೃತರಾಗಿ ರಕ್ತದಾನ ಮಾಡುವ ಮೂಲಕ ಜೀವ ಉಳಿಸಬೇಕು ಎಂದರು.

ವಿಶ್ವ ರಕ್ತದಾನಿಗಳ ದಿನದ ಅಂಗವಾಗಿ ಹಮ್ಮಿಕೊಂಡಿರುವ ಜಾಗೃತಿ ಜಾಥಾದ ಮೂಲಕ ಹೆಚ್ಚಿನ ಸಂಖ್ಯೆಯಲ್ಲಿ ಜನರು ಸ್ವಯಂಪ್ರೇರಿತರಾಗಿ ಮುಂದೆ ಬಂದು ರಕ್ತದಾನ ಮಾಡಬೇಕು. ವಿದ್ಯಾರ್ಥಿಗಳು, ವಿವಿಧ ಸಂಘ-ಸಂಸ್ಥೆಗಳ ಪದಾಧಿಕಾರಿಗಳು, ಇಲಾಖೆಗಳ ನೌಕರರು ಹಾಗೂ ಸಾರ್ವಜನಿಕರು ರಕ್ತದಾನದಲ್ಲಿ ಭಾಗವಹಿಸಬೇಕು ಎಂದು ಅವರು ಮನವಿ ಮಾಡಿದರು.

ಈ ಸಂದರ್ಭದಲ್ಲಿ ರಿಮ್ಸ್ ಪ್ರಾಚಾರ್ಯ ರಮೇಶ ಕೀರ್ತಿ, ಗುರುದತ್ತ, ಡಾ. ಶಿವಕುಮಾರ್,ಶಾಕೀರ್ ಮೈನುದ್ದಿನ್, ಡಾ. ಗಣೇಶ, ಆರ್‌ಸಿಹೆಚ್ ನಂದಿತಾ, ಸೇರಿದಂತೆ ಆರೋಗ್ಯ ಇಲಾಖೆ ಅಧಿಕಾರಿಗಳು ವಿವಿಧ ಕಾಲೇಜುಗಳ ವಿದ್ಯಾರ್ಥಿಗಳು ಭಾಗವಹಿಸಿದ್ದರು.

## ಹಿರಿಯ ನಾಯಕ ಎನ್.ಎಸ್.ಬೋಸರಾಜರಿಗೆ ಸಚಿವ ಸ್ಥಾನ ನೀಡಲು ಪಕ್ಷದ ಹೈಕಮಾಂಡ ಬಳಿ ನಿಯೋಗ-ಬಾಲಸ್ವಾಮಿ ಕೊಡ್ಲಿ

ಒತ್ತಾಯಿಸುವದಾಗಿ ಹೇಳಿದರು. ಕಳೆದ 53 ವರ್ಷಗಳಿಂದ ಕಾಂಗ್ರೆಸ್ ಪಕ್ಷದ ನಿಷ್ಠಾವಂತರ ಕಾರ್ಯಕರ್ತರಾಗಿ ಪಕ್ಷವನ್ನು ಅಧಿಕಾರಕ್ಕೆ ತರುವ ಜೊತೆಗೆ ಅನೇಕ ಹುದ್ದೆಗಳಲ್ಲಿ ಸೇವೆ ನೀಡಿದ್ದಾರೆ. ಕಾಡಾ ಅಧ್ಯಕ್ಷರಾಗಿ, ಎಚ್‌ಕೆಡಿಬಿ ಅಧ್ಯಕ್ಷರಾಗಿ ಎರಡು ಬಾರಿ ಮಾನವಿ ಶಾಸಕರಾಗಿ, ಎರಡು ಬಾರಿ ವಿಧಾನ ಪರಿಷತ್ ಸದಸ್ಯರಾಗಿ , ಮುಖ್ಯಮಂತ್ರಿಗಳ ಕಾರ್ಯದರ್ಶಿಯಾಗಿ, ಸಣ್ಣ ನೀರಾವರಿ ಸಚಿವರಾಗಿ ಸೇವೆ ನೀಡಿದ್ದಾರೆ. ಹತ್ತಾರು ವರ್ಷಗಳಿಂದ ನಡೆಯದ ಇರುವ ಅಭಿವೃದ್ದಿ ಕಾರ್ಯಗಳಿಗೆ ಚಾಲನೆ ದೊರಕಿಸಲು ಪ್ರಯತ್ನಿಸಿ ಯಶಸ್ವಿಯಾಗಿದ್ದಾರೆ. 34 ಕೋಟಿ ರೂ ವೆಚ್ಚದಲ್ಲಿ ರಾಯಚೂರು ನಗರದ ಅಭಿವೃದ್ದಿ, ನಿಂತು ಹೋಗಿದ್ದ ವಿಮಾನ ನಿಲ್ದಾಣ, ಮಹಾನಗರ ಪಾಲಿಕೆ ಮೇಲ್ದರ್ಜೆ, ಉಪಪ್ರಾದೇಶಿಕ ಕೇಂದ್ರ ಅಭಿವೃದ್ದಿಗೆ 20 ಕೋಟಿ ರೂ ಅನುದಾನ ಚಿಕಲಪರ್ವಿ ಬ್ಯಾರೇಜ್, ಮಾನವಿ ತಾಲೂಕಿನ ಮುಷ್ಟೂರು ಸೇತುವೆ ನಿರ್ಮಾಣ ಸೇರಿದಂತೆ ಜಿಲ್ಲೆಯ ಅನೇಕ ಅಭಿವೃದ್ದಿ ಕಾಮಗಾರಿಗಳನ್ನು ಕೈಗೊಳ್ಳಲು ಕಾರಣವಾಗಿದ್ದು ಸಚಿವ ಸ್ಥಾನ ದೊರಕಿಸಿದಲ್ಲಿ ಮತ್ತಷ್ಟು ಅಭಿವೃದ್ದಿಗೆ ಸಹಕಾರಿಯಾಗುತ್ತದೆ.ಸೇವಾ ಅನುಭವಹಾಗೂ ಪಕ್ಷದ ಸಂಘಟನಾತ್ಮಕವಾಗಿ ಬೆಳೆಯಲು ಸಹಕಾರಿಯಾಗಲಿರುವ ಎನ್.ಎಸ್.ಬೋಸರಾಜ ಇವರಿಗೆ ಸಚಿವ ಸ್ಥಾನ ನೀಡುವಂತೆ ಮನವಿಮಾಡುವದಾಗಿ ಹೇಳಿದರು. ಈ ಸಂದರ್ಬದಲ್ಲಿಯುವ ಕಾಂಗ್ರೆಸ್ ಅಧ್ಯಕ್ಷ ಮರಿಸ್ವಾಮಿ ಗಟ್ಟು, ಅರುಣ ಚಂದ್ರ, ಪ್ರಿತಮಂ ಕೊಡ್ಲಿ ಇದ್ದರು.

## ಒಣ ರಾಜಕಾರಣ ಮಾಡುವುದು ಪ್ರಿಯಾಂಕ್ ಖರ್ಗೆ ಅವರಿಗೆ ಶೋಭೆ ತರಲ್ಲ: ಅರವಿಂದ ಬೆಲ್ಲದ್




**ಧಾರವಾಡ,ಜೂ.16-**ಆರ್‌ಎಸ್‌ಎಸ್ ಮಾನ್ಯತೆ ಬಗ್ಗೆ ಸಚಿವ ಪ್ರಿಯಾಂಕ್ ಖರ್ಗೆ ಹೇಳಿಕೆ ವಿಚಾರವಾಗಿ ಪ್ರತಿಕ್ರಿಯಿಸಿರುವ ವಿಪಕ್ಷ ಉಪನಾಯಕ ಅರವಿಂದ ಬೆಲ್ಲದ್ ಅವರು, ಪ್ರಿಯಾಂಕ್ ಖರ್ಗೆ ಅವರು ರಾಷ್ಟ್ರೀಯ ಅಧ್ಯಕ್ಷರ ಮಗ, ಸಣ್ಣ ವಯಸ್ಸಿನಲ್ಲಿ ದೊಡ್ಡ ಹುದ್ದೆಗಳನ್ನು ನಿರ್ವಹಿಸುವ ಅವಕಾಶ ಸಿಕ್ಕಿದೆ. ಕಾಂಗ್ರೆಸ್‌ನಲ್ಲಿ ಪ್ರಮುಖ ಲೀಡರ್ ಆಗಿ ಹೊರಹೊಮ್ಮಿದ್ದಾರೆ. ಅವರು ಸಣ್ಣ ಸ್ಟಂಟ್‌ಗಳಿಗೆ ಹೋಗಬಾರದು ಎಂದು ಕಿವಿ ಮಾತು ಹೇಳಿದ್ದಾರೆ.

ಈ ಕುರಿತು ಮಾಧ್ಯಮದವರೊಂದಿಗೆ ಮಾತನಾಡಿದ ಅವರು, ಕೇಂದ್ರ ಹಾಗೂ ರಾಷ್ಟ್ರ ಮಟ್ಟದಲ್ಲಿ ಸುದ್ದಿಯಾಗಲು ಈ ರೀತಿ ಮಾಡುತ್ತಿದ್ದಾರೆ. ಅವರಿಗೆ ಆ ಅವಶ್ಯಕತೆ ಇಲ್ಲ, ಇಲಾಖೆಯ ಕೆಲಸಗಳನ್ನು ಮಾಡಿ ಹೆಸರು ತೆಗೆದುಕೊಳ್ಳಲಿ. ಅದನ್ನು ಬಿಟ್ಟು ಒಣ ರಾಜಕಾರಣ ಮಾಡುವುದು ಅವರಿಗೆ ಶೋಭೆ ತರಲ್ಲ, ಅವರ ರಾಜಕೀಯ ಜೀವನಕ್ಕೂ ಇದು ಒಳ್ಳೆಯದಲ್ಲ. ಇಡೀ ರಾಜ್ಯಾದ್ಯಂತ ಗೃಹ ಇಲಾಖೆಯಿಂದ್ ಒಳ್ಳೆ ಕೆಲಸ ಮಾಡಬಹುದು ಎಂದಿದ್ದಾರೆ.

ರಾಜ್ಯದಲ್ಲಿ ಡ್ರಗ್ಸ್ ಹಾವಳಿ ಮಿತಿಮೀರಿದೆ. ಹಳ್ಳಿಗಳಲ್ಲಿ ಕುಡುಕರ ಸಂಖ್ಯೆ ಹೆಚ್ಚಾಗಿದೆ. ದುಡಿದ ಹಣವನ್ನು ಕುಡಿತಕ್ಕೆ ಬಳಕೆ ಮಾಡಿಕೊಳ್ಳಲಾಗುತ್ತಿದೆ. ಅಕ್ರಮ್ ಬೆಟ್ಟಿಂಗ್ ಕೆಲಸ ನಡೆದಿವೆ. ಗನ್ ಇಲ್ಲದವರಿಂದ ಹಣ ತೆಗೆದುಕೊಂಡು ಲೈಸೆನ್ಸ್ ಕೊಡುತ್ತಿದ್ದಾರೆ. ಇವುಗಳನ್ನು ಬಂದ್ ಮಾಡುವ ಕೆಲಸ ಪ್ರಿಯಾಂಕ್ ಖರ್ಗೆ ಮಾಡಬೇಕಿದೆ. ಅದರ ಮೂಲಕ ಜನರ ಬಾಳಿಗೆ ಬೆಳಕಾಗಬೇಕಿದೆ. ಇದನ್ನು ಬಿಟ್ಟು ಒಣ ಉಸಾಬರಿ ಕೆಲಸ ಮಾಡುವ ಅವಶ್ಯಕತೆ ಇಲ್ಲ. ಅವರ ರಾಜಕೀಯ ಭವಿಷ್ಯ ಮುಂದೆ ದೊಡ್ಡದಿದೆ. ಈ ರೀತಿ ಸ್ಟಂಟ್‌ಗಳನ್ನು ಮಾಡುವುದನ್ನು ಬಿಡಬೇಕಿದೆ ಎಂದು ಹರಿಹಾಯ್ದಿದ್ದಾರೆ.

ಗ್ಯಾರಂಟಿ ಯೋಜನೆಗಳ ಫಲಾನುಭವಿಗಳಿಗೆ ಕತ್ತರಿ ಹಾಕುವ ವಿಚಾರವಾಗಿ ಮಾತನಾಡಿ, ಸಿದ್ದರಾಮಯ್ಯ ಅವರು ಪೂರ್ತಿಯಾಗಿ ದಿವಾಳಿ ಮಾಡಿ ಹೋಗಿದ್ದಾರೆ. ಖಾಲಿ ಕಿಸೆಯ ಸರ್ಕಾರವನ್ನು ಡಿಕೆಗೆ ಕೊಟ್ಟಿದ್ದಾರೆ. ಡಿಕೆ ಅವರು ಸರ್ಕಾರದ ಸ್ಕೀಮ್‌ಗಳನ್ನು ಕಟ್ ಮಾಡಿ ಸರ್ಕಾರ ನಡೆಸಲು ಮುಂದಾಗಿದ್ದಾರೆ. ಫಲಾನುಭವಿಗಳಿಗೆ ಸ್ಕೀಮ್ ಕೊಡುವುದನ್ನು ಕಟ್ ಮಾಡುವ ಪ್ಲಾನ್, ಇನ್ನೊಮ್ಮೆ ರಿಜಿಸ್ಟರ್ ಮಾಡುವುದು, ಹೊಸ ಸ್ಕಿಮ್, ಹೀಗೆ ಮಾಡಿ ನಾಲ್ಕೈದು ತಿಂಗಳು ಮಾಡಿ ಹಣ ಉಳಿಸುವುದು, ಜನರ ದಾಖಲೆಯಲ್ಲಿ ತಪ್ಪಿವೆ ಎಂದು ಹಲವರನ್ನು ನಿಖಾಲಿ ಮಾಡುವುದು, ಈ ರೀತಿ ಮಾಡ್ ಜನರಿಗೆ ದುಡ್ಡು ಕೊಟ್ಟ ಹಾಗೇನೂ ಆಗಬೇಕು, ಮೂಗಿನ ಮೇಲೆ ಬೆಣ್ಣೆ ಹಚ್ಚಿ ಕೊಡದಂತೆ ಮಾಡುವ ಪ್ರಯತ್ನವೂ ನಡೆದಿದೆ. ಅವರನ್ನು ಇಡೀ ರಾಜ್ಯದ ಜನತೆ ಗಮನಿಸುತ್ತಿದೆ. ಮುಂದೆ ಜನರೇ ತಕ್ಕ ಉತ್ತರ್ ಕೊಡುತ್ತಾರೆ ಎಂದು ಆಕ್ರೋಶ ವ್ಯಕ್ತಪಡಿಸಿದ್ದಾರೆ.

ಬಿಡದಿಯಲ್ಲಿ ಟೌನ್‌ಶಿಪ್ ನಿರ್ಮಾಣದ ವಿಚಾರಕ್ಕೆ ಮಾತನಾಡಿ, ಬೆಂಗಳೂರಿನಲ್ಲಿ ಇವತ್ತು ಇಕ್ಕಟ್ಟಾಗಿದೆ. ಬೆಂಗಳೂರು ಸುತ್ತಮುತ್ತ ಸ್ಯಾಟ್ಲೈಟ್ ಟೌನ್ ಆಗಬೇಕಿದೆ. ಅಲ್ಲೇ ಕೆಲಸ ಮಾಡಿ, ಅಲ್ಲೇ ವಸತಿ ಮಾಡುವ ಉತ್ತಮ ಟೌನ್ ನಿರ್ಮಾಣ ಮಾಡಬೇಕು.

ಕಾಂಗ್ರೆಸ್ ನಾಯಕರ ಭೂಮಿಗಳ ಪಕ್ಕದಲ್ಲಿ ನಿರ್ಮಾಣ ಮಾಡುವ ಅವಶ್ಯಕತೆ ಇಲ್ಲ, ಈಗಾಗಲೇ ಬೇಕಾದಷ್ಟು ಹಣವನ್ನು ಕಾಂಗ್ರೆಸ್ ನಾಯಕರು ಮಾಡಿದ್ದಾರೆ. ಮತ್ತಷ್ಟು ಅವಕಾಶಗಳು ಅವರಿಗೆ ಇವೆ. ಫಲವತ್ತಾದ ರೈತರ ಜಮೀನು ತೆಗೆದುಕೊಂಡು ಅಲ್ಲಿ ಟೌನ್ ಶಿಪ್ ಮಾಡುವ ಕೆಲಸ ಮಾಡಬೇಡಿ ಎಂದಿದ್ದಾರೆ.

## ಸಿಎಂ ಡಿ.ಕೆ.ಶಿವಕುಮಾರ್ ಇಡೀ ರಾಜ್ಯದ ಅಭಿವೃದ್ಧಿಗೆ ಬದ್ಧರಾಗಿದ್ದಾರೆ: ಕಿರಣ್ ಮಜುಂದಾರ್ ಶಾ



**ಬೆಂಗಳೂರು,ಜೂ.16-**ಸಿಎಂ ಡಿ.ಕೆ.ಶಿವಕುಮಾರ್ ಅವರು ಬೆಂಗಳೂರು ಮಾತ್ರವಲ್ಲ ಇಡೀ ರಾಜ್ಯದ ಅಭಿವೃದ್ಧಿಗೆ ಬದ್ಧರಾಗಿದ್ದಾರೆ ಎಂದು ಬಯೋಕಾನ್ ಸಂಸ್ಥಾಪಕಿ ಕಿರಣ್ ಮಜುಂದಾರ್ ಶಾ ತಿಳಿಸಿದರು.

ವಿಧಾನಸೌಧದಲ್ಲಿ ಸಿಎಂ ಡಿ.ಕೆ. ಶಿವಕುಮಾರ್ ಅವರನ್ನು ಭೇಟಿಯಾಗಿ ಬಳಿಕ ಮಾತನಾಡಿದ ಅವರು, ನಾವೆಲ್ಲರೂ ಬೆಂಗಳೂರನ್ನು ವಿಶ್ವದರ್ಜೆಯ ನಗರವನ್ನಾಗಿ ಮಾಡಲು ತೆಗೆದುಕೊಳ್ಳುವ ಉಪಕ್ರಮಗಳನ್ನು ಬೆಂಬಲಿಸುತ್ತೇವೆ. ಮುಖ್ಯಮಂತ್ರಿ ಡಿ.ಕೆ. ಶಿವಕುಮಾರ್ ಅವರೊಂದಿಗೆ ನಮ್ಮ ಭೇಟಿ ತುಂಬಾ ಚೆನ್ನಾಗಿ ನಡೆಯಿತು. ಬೆಂಗಳೂರನ್ನು ವಿಶ್ವದರ್ಜೆಯ ನಗರವಾಗಿ ಅಭಿವೃದ್ಧಿಪಡಿಸಲು ಅಗತ್ಯವಿರುವ ಎಲ್ಲ ಹೊಸ ಉಪಕ್ರಮಗಳಿಗೆ ನಾವೆಲ್ಲರೂ ಅವರಿಗೆ ಬೆಂಬಲ ನೀಡುತ್ತಿದ್ದೇವೆ ಎಂದು ನಾನು ಭಾವಿಸುತ್ತೇನೆ ಎಂದರು.

ನಾವು ಪ್ರತಿನಿಧಿಸುವ ಪ್ರತಿಯೊಂದು ದೇಶವೂ ಈ ಪ್ರಯತ್ನಕ್ಕೆ ಬೆಂಬಲ ನೀಡಲು ಸಿದ್ಧವಾಗಿದೆ. ಹಾಗಾಗಿ, ಇದೇ ನಮ್ಮ ಸಂಭಾಷಣೆಯ ಮುಖ್ಯ ಸಾರಾಂಶವಾಗಿದೆ. ಮುಖ್ಯಮಂತ್ರಿಯವರು ಕೇವಲ ಬೆಂಗಳೂರನ್ನು ಮಾತ್ರವಲ್ಲದೇ ಇಡೀ ಕರ್ನಾಟಕವನ್ನು ಅಭಿವೃದ್ಧಿಪಡಿಸಲು ಮತ್ತು ಇದನ್ನು ವಿಶ್ವದರ್ಜೆಯ ನಗರ ಹಾಗೂ ದೇಶದಲ್ಲೇ ಮುಂಚೂಣಿಯಲ್ಲಿರುವ ರಾಜ್ಯವನ್ನಾಗಿ ಮಾಡಲು ಬದ್ಧರಾಗಿದ್ದಾರೆ ಎಂದು ತಿಳಿಸಿದರು.

ಬೆಂಗಳೂರಿನ ನಾಗರಿಕ ಸೌಲಭ್ಯಗಳು ಮತ್ತು ಮೂಲಸೌಕರ್ಯಗಳ ಕುರಿತು ತಮ್ಮ ಸುದೀರ್ಘ ಟೀಕೆಗಳ ಮಧ್ಯೆ ಸಿಎಂಗೆ ನೀಡಿದ ಸಲಹೆ ವಿಚಾರವಾಗಿ ಮಾತನಾಡಿ, ಸಿಎಂ ಡಿಕೆಶಿ ಅವರು ಈಗಾಗಲೇ ಸಾಕಷ್ಟು ಕೆಲಸ ಮಾಡುತ್ತಿದ್ದಾರೆ. ಅವರು ಇನ್ನಷ್ಟು ಜೋರಾಗಿ ಕೆಲಸಗಳನ್ನು ಚುರುಕುಗೊಳಿಸಲಿದ್ದಾರೆ. ಇನ್ನೂ ಮಾಡಬೇಕಾದ ಕೆಲಸಗಳು ಸಾಕಷ್ಟಿವೆ. ಬೆಂಗಳೂರಿಗೆ ಉತ್ತಮ ಮೂಲಸೌಕರ್ಯಗಳ ಅಗತ್ಯವಿದೆ ಎಂದರು.

ಇದರಲ್ಲಿ ಸುರಂಗ ರಸ್ತೆ, ಹಲವು ಮೇಲ್ಸೇತುವೆ ಹೆದ್ದಾರಿಗಳು, ಕಾರಿಡಾರ್‌ಗಳು ಮತ್ತು ಪೆರಿಫೆರಲ್ ರಿಂಗ್ ರೋಡ್ ಸೇರಿವೆ. ಹಾಗೆಯೇ ಔಟರ್ ರಿಂಗ್ ರೋಡ್ ಸುಧಾರಣೆಗಾಗಿ ವಿಶೇಷ ಬಜೆಟ್ ಹಂಚಿಕೆಯನ್ನೂ ಸಹ ನೀಡಲಾಗಿದೆ. ಹಾಗಾಗಿ, ಮುಂದೆ ಸಾಕಷ್ಟು ಬದಲಾವಣೆಗಳು ಆಗಲಿವೆ. ಖಂಡಿತವಾಗಿಯೂ ಅವರು ಕಸ ಮತ್ತು ಘನತ್ಯಾಜ್ಯ ನಿರ್ವಹಣೆಯಲ್ಲಿ ಧೈರ್ಯದ ಕ್ರಮಗಳನ್ನು ಕೈಗೊಂಡಿದ್ದಾರೆ. ಆದ್ದರಿಂದ ನಾಗರಿಕರಾಗಿ ನಾವೂ ಸಹ ನಮ್ಮ ಜವಾಬ್ದಾರಿಯನ್ನು ಅರಿತು ನಾಗರಿಕ ಪ್ರಜ್ಞೆಯನ್ನು ಮೆರೆಯಬೇಕು ಎಂದು ತಿಳಿಸಿದರು.

ಸಿಎಂ ಡಿ.ಕೆ. ಶಿವಕುಮಾರ್ ಅವರನ್ನು ಕಿರಣ್ ಮಜುಂದಾರ್ ಶಾ, ಸುರೇಶ್, ಗೀತಾಂಜಲಿ ಕಿರ್ಲೋಸ್ಕರ್, ವಿಕ್ರಂ ವಿಶ್ವನಾಥ್, ಮೋಹನ್ ಸುರೇಶ್, ಶಬೀನಾ ಸುಲ್ತಾನ, ಕಾರ್ತಿಕ್ ತಲ್ಲಮ್, ರಾಘವೇಂದ್ರ ಪೂಜಾರಿ, ರವಿಶಂಕರ್ ಮತ್ತಿತರರನ್ನು ಒಳಗೊಂಡ ವಿವಿಧ ದೇಶಗಳ ಗೌರವಾನ್ವಿತ ರಾಯಭಾರಿಗಳ ನಿಯೋಗವು ವಿಧಾನಸೌಧದ ಸಿಎಂ ಕಚೇರಿಯಲ್ಲಿ ಮಂಗಳವಾರ ಭೇಟಿಯಾಗಿ ಅಭಿನಂದನೆ ಸಲ್ಲಿಸಿತು.

## ಮೈಸೂರು ಅಗ್ನಿ ಅವಘಡ; ಬಾರ್ ನಡೆಸಲು ಲೈಸೆನ್ಸ್ ಪಡೆದಿರಲಿಲ್ಲ: ಸಚಿವ ಯತೀಂದ್ರ



**ಮೈಸೂರು,ಜೂ.16-**ಸೋಮವಾರ ನಗರದ ದಟ್ಟಗಹಳ್ಳಿಯ ಮಾರ ಹೆಸರಿನ ಬಾರ್ ನಲ್ಲಿ ನಡೆದ ಅಗ್ನಿ ಅವಘಡದಲ್ಲಿ ಇಬ್ಬರು ಕೆಲಸಗಾರರು ಜೀವ ಕಳೆದುಕೊಂಡಿದ್ದಾರೆ. ಈ ಬಾರ್ ನಡೆಸಲು ಅಬಕಾರಿ ಇಲಾಖೆಯಿಂದ ಲೈಸೆನ್ಸ್ ಪಡೆದಿರಲಿಲ್ಲ. ಇದರಲ್ಲಿ ಅಬಕಾರಿ ಡಿಸಿ ಕರ್ತವ್ಯ ಲೋಪ ಇದ್ದು, ಇದರ ಬಗ್ಗೆ ಜಿಲ್ಲಾಧಿಕಾರಿಗಳಿಗೆ ವರದಿ ಕಳಿಸಲು ತಿಳಿಸಿದ್ದೇನೆ ಎಂದು ಸಚಿವ ಯತೀಂದ್ರ ಸಿದ್ದರಾಮಯ್ಯ ಹೇಳಿದರು.

ಸಚಿವರಾದ ಮೇಲೆ ಮೊದಲ ಬಾರಿಗೆ ಮೈಸೂರಿಗೆ ಭೇಟಿ ನೀಡಿದ ಯತೀಂದ್ರ ಸಿದ್ದರಾಮಯ್ಯ, ಬಾ್ ದುರಂತದ ಬಗ್ಗೆ ನಗರದಲ್ಲಿಂದು ಮಾಧ್ಯಮದವರೊಂದಿಗೆ ಮಾತನಾಡಿದರು. ಇದರಲ್ಲಿ ಅಗ್ನಿಶಾಮಕ ಇಲಾಖೆ ಲೋಪವೂ ಇದೆ ಎಂದರು. ಇದಕ್ಕೂ ಮೊದಲು ದುರಂತದ ಬಗ್ಗೆ ಅಧಿಕಾರಿಗಳಿಂದ ಮಾಹಿತಿ ಪಡೆದರು.

ಈ ದುರಂತದಲ್ಲಿ ಇಬ್ಬರು ಕೆಲಸಗಾರರು ಸಾವನ್ನಪ್ಪಿದ್ದರೆ, 7 ಜನ ಗಾಯಗೊಂಡಿದ್ದಾರೆ. ಬಾರ್ ನಡೆಸಲು ಎರಡನೇ ಮಹಡಿಯಲ್ಲಿ ಯಾವುದೇ ಲೈಸೆನ್ಸ್ ಪಡೆದಿರಲಿಲ್ಲ, ಅದರೂ ಅಬಕಾರಿ ಅಧಿಕಾರಿಗಳು ಸುಮ್ಮನೆ ಇದ್ದಾರೆ. ಇಲ್ಲಿ ಅಬಕಾರಿ ಡಿಸಿ ಕರ್ತವ್ಯಲೋಪ ಇದೆ. ಈ ಬಗ್ಗೆ ಜಿಲ್ಲಾಧಿಕಾರಿಗಳಿಗೆ ವರದಿ ನೀಡುವಂತೆ ತಿಳಿಸಿದ್ದೇನೆ ಎಂದರು.ಆಫ್ರಿಕಾ ಥೀಮ್‌ನಲ್ಲಿ ರೆಡಿಯಾದ ಮಾರ ಬಾರ್‌ನಲ್ಲಿ ಒಣ ಹುಲ್ಲು ಹಾಗೂ ಬಿದಿರುಗಳಿಂದ ಶೃಂಗಾರ ಮಾಡಲಾಗಿತ್ತು. ಅದಕ್ಕೆ ವಿದ್ಯುತ್ ಶಾರ್ಟ್ ಸರ್ಕ್ಯೂಟ್ ಅದ ತಕ್ಷಣ ಬೆಂಕಿ ಹತ್ತಿಕೊಂಡಿದೆ ಎಂದು ಅವರು ತಿಳಿಸಿದರು.

## ದೇಶ ಬಂಧು ಚಿತ್ತರಂಜನ್ ದಾಸ್ ಅವರ ಆದರ್ಶಗಳನ್ನು ಅಳವಡಿಸಿಕೊಳ್ಳಲು ಕರೆ

ಪ್ರಮುಖ ನಾಯಕ, ಪ್ರಖ್ಯಾತ ವಕೀಲ ಹಾಗೂ ನೇತಾಜಿ ಸುಭಾಷ್ ಚಂದ್ರ ಬೋಸ್ ಅವರ ರಾಜಕೀಯ ಗುರುವಾಗಿದ್ದರು. ಸ್ವಾತಂತ್ರ್ಯ, ಸಾಮಾಜಿಕ ನ್ಯಾಯ, ಮಹಿಳಾ ಶಿಕ್ಷಣ ಹಾಗೂ ಯುವಜನರ ಮೌಲ್ಯಾಧಾರಿತ ಬದುಕಿಗೆ ಅವರು ನೀಡಿದ ಕೊಡುಗೆ ಸ್ಮರಣೀಯವಾಗಿದೆ ಎಂದು ಹೇಳಿದರು.

ಸಂಘಟನೆಯ ರಾಜ್ಯಾಧ್ಯಕ್ಷ ಶರಣಪ್ಪ ಉದ್ಬಾಳ್ ಮಾತನಾಡಿ, ಕೇಂದ್ರ ಹಾಗೂ ರಾಜ್ಯ

ಸರ್ಕಾರಗಳಲ್ಲಿನ ಖಾಲಿ ಹುದ್ದೆಗಳನ್ನು ಭರ್ತಿ ಮಾಡುವಂತೆ ಯುವಜನರು ಸಂಘಟಿತ ಹೋರಾಟ ನಡೆಸಬೇಕು ಎಂದು ಒತ್ತಾಯಿಸಿದರು.

ಜಿಲ್ಲಾ ಅಧ್ಯಕ್ಷ ಚನ್ನಬಸವ ಜಾನೇಕಲ್ ಪ್ರಾಸ್ತಾವಿಕವಾಗಿ ಮಾತನಾಡಿದರು.

ಜಿಲ್ಲಾ ಕಾರ್ಯದರ್ಶಿ ವಿನೋದ್ ಕುಮಾರ್ ಸ್ವಾಗತಿಸಿದರು. ಕಾರ್ಯಕ್ರಮದಲ್ಲಿ ಸಂಘಟನೆಯ ಪದಾಧಿಕಾರಿಗಳು, ಕಾರ್ಯಕರ್ತರು ಹಾಗೂ ಸದಸ್ಯರು ಭಾಗವಹಿಸಿದ್ದರು.

## ಶಾಸಕ ಪ್ರಸಾದ ಅಬ್ಬಯ್ಯರಿಗೆ ಸಚಿವ ಸ್ಥಾನ ನೀಡಲು ಬಲಗೈ ಜಾತಿಗಳ ಒಕ್ಕೂಟ ಆಗ್ರಹ

ಒಕ್ಕೂಟದ ಕಾರ್ಯಾಧ್ಯಕ್ಷ ಕೆ.ಇ.ಕುಮಾರ ಮಾತನಾಡಿ, ಕೇಂದ್ರ ಸಚಿವರಾಗಿದ್ದ ಶಂಕರಾನಂದ ಇವರ ಪುತ್ರ ಓಂಪ್ರಕಾಶ ಕಣಗಲಿ ಇವರಿಗೆ ಎಂಎಲ್‌ಸಿ ಮಾಡಿದು ಬಿಟ್ಟರೆ ಬಲಗೈ ಸಮೂದಾಯವರಿಗೆ ಸಚಿವ ಸಂಪುಟದಲ್ಲಿ ಅವಕಾಶ ದೊರಕಿಲ್ಲ. ಬಲಗೈ ಸಮೂದಾಯಕ್ಕೆ ಸಾಮಾಜಿಕ ನ್ಯಾಯ ಒದಗಿಸುವ ಜೊತೆಗೆ ಪಕ್ಷದ ಸಂಘಟನಾತ್ಮಕ ಚುವಟಿಕೆಗಳಿಗೆ ಪೂರಕವಾಗಲು ಪ್ರಸಾದ ಅಬ್ಬಯ್ಯ ಇವರಿಗೆ ಸಚಿವ ಸ್ಥಾನ ನೀಡಬೇಕೆಂದರು.

ಈ ಸಂದರ್ಬದಲ್ಲಿ ಮಹಾನಗರ ಪಾಲಿಕೆ ಮಾಜಿ ಸದಸ್ಯ ಬಿ.ರಮೇಶ, ಎಂ.ಮಾರೆಪ್ಪಪ, ಆರ್.ರಾಮಕೃಷ್ಣ, ಆರ್. ಬಸವರಾಜ, ಆಂಜಿನಯ್ಯ ಕೊಂಬಿನ್, ಶಶಿಧರ, ವಿಜಯ ಗಾರ್ಲೆ, ಪ್ರಾಣೇಶ ಮಂಚಾಲ, ಕೆ.ಬಾಬು, ಎಂ.ವೆಂಕಟೇಶ, ನಾಗರಾಜ,, ಮಹೇಶ, ಈರಣ್ಣ ಕುರ್ಡಿ, ಬಾಬು ಕೆಎಸ್‌ಆರ್‌ಟಿಸಿ, ಎಂ.ಎಸ್.ರಮೇಶ, ವೆಂಕಟೇಶ, ಶಾಂತಮಲ್ಲೇಶ ಸೇರಿದಂತೆ ಅನೇಕರಿದ್ದರು.

## ಎಸ್‌ಐಆರ್ ವಿರೋಧಿಸಿ ಪ್ರಗತಿ ಪರ ಸಂಘಟನೆಗಳು ಹಾಗೂ ಜಾತ್ಯಾತೀತ ಪಕ್ಷಗಳು ವತಿಯಿಂದ ಬೈಕ್ ರ‍್ಯಾಲಿ

ಈ ಸಂದರ್ಭದಲ್ಲಿ ಕರ್ನಾಟಕ ರಾಜ್ಯ ರೈತ ಸಂಘ ಹಾಗೂ ಹಸಿರು ಸೇನೆಯ ಮುಖಂಡ ವೀರ ಸಂಗಯ್ಯ, ಚಾಮರಸ ಮಾಲಿಪಾಟೀಲ್,ಮಾರೆಪ್ಪ ಹರವಿ, ಮಹಮದ್ ಶಾಲಂ, ಯೂಸೂಫ್, ಜಾನ್‌ವೆಸ್ಲಿ, ಅಸಿಮುದ್ದಿನ್ ಅಕ್ತರ, ಗುರುರಾಜ, ವಿಶ್ವನಾಥ ಪಟ್ಟಿ, ವಿಜಯರಾಣಿ, ಚೆನ್ನಮ್ಮ, ಸುರೇಖಾ, ಆಂಜನೇಯ ಕುರುಬದೊಡ್ಡಿ, ಶರಣುಕುಮಾರ ಸೇರಿದಂತೆ ಅನೇಕರು ಸಂಘಟನೆಗಳ ಮುಖಂಡರು, ಪದಾಧಿಕಾರಿಗಳಿದ್ದರು.

## ರೈತರ ವಿವಿಧ ಬೇಡಿಕೆಗಳಿಗೆ ಆಗ್ರಹಿಸಿ ಕರ್ನಾಟಕ ಪ್ರಾಂತ ರೈತ ಸಂಘದಿಂದ ಬೃಹತ್ ಪ್ರತಿಭಟನೆ

ರಾಯಚೂರು ತಾಲ್ಲೂಕಿನ ಯಾಪಲದಿನ್ನಿ, ಜಂಬಲದಿನ್ನಿ, ಮಮದಾಪುರ, ಪುಚ್ಚಲದಿನ್ನಿ, ಕೂತ್ತದೊಡ್ಡಿ ಹಾಗೂ ಮಲದೊಡ್ಡಿ ಗ್ರಾಮಗಳ ವಸತಿರಹಿತ ಕುಟುಂಬಗಳಿಗೆ ಮನೆ ನಿರ್ಮಿಸಬೇಕು. ಕೂತ್ತದೊಡ್ಡಿ ಹಾಗೂ ಹೆಗ್ಗಸನಹಳ್ಳಿ ಗ್ರಾಮಗಳಿಗೆ ಸಾರ್ವಜನಿಕ ಸ್ಮಶಾನ ಭೂಮಿ ಮಂಜೂರು ಮಾಡಬೇಕು. ಯಾಪಲದಿನ್ನಿ, ಮಮದಾಪುರ ಹಾಗೂ ಯರಗುಂಟಾ ಗ್ರಾಮಗಳ ಸಾರ್ವಜನಿಕ ಸ್ಮಶಾನ ಭೂಮಿಯ ಒತ್ತುವರಿಯನ್ನು ತೆರವುಗೊಳಿಸಬೇಕು ಎಂದರು.

ಪ್ರತಿಭಟನೆಯಲ್ಲಿ ಕರ್ನಾಟಕ ಕೃಷಿ ಕೂಲಿಕಾರ ಮತ್ತು ಗ್ರಾಮೀಣ ಕಾರ್ಮಿಕರ ಸಂಘದ ರಾಜ್ಯ ಅಧ್ಯಕ್ಷ ಚಂದ್ರಪ್ಪ, ಬಸವಂತ್ರಾಯಗೌಡ, ನರಸಣ್ಣ ನಾಯಕ, ಚನ್ನಪ್ಪ ಆನೆಗುಂದಿ, ಕೆ.ಜಿ. ವೀರೇಶ, ಕರಿಯಪ್ಪ ಅಚ್ಚೊಳಿ, ರಂಗನಗೌಡ, ದೇವೇಂದ್ರಗೌಡ, ಶಬ್ಬೀರ್ ಜಾಲಹಳ್ಳಿ, ಹೆಚ್. ಪದ್ಮಾ, ಪೆಂಚಲಯ್ಯ, ರಂಗಪ್ಪ ಯಾಪಲದಿನ್ನಿ ಸೇರಿದಂತೆ ರೈತರು, ಕೃಷಿ ಕೂಲಿಕಾರರು ಮತ್ತು ವಿವಿಧ ಗ್ರಾಮಗಳ ಸಾರ್ವಜನಿಕರು ಪ್ರತಿಭಟನೆಯಲ್ಲಿ ಭಾಗವಹಿಸಿದ್ದರು.

## ಬಸವ ಕೇಂದ್ರದಲ್ಲಿ ನಿಜಾಚರಣೆ ಕ್ರಿಯಾಮೂರ್ತಿಗಳ ತರಬೇತಿ

ಪವಿತ್ರ ವಾತಾವರಣ ಕಾಪಾಡಬೇಕು ಹಾಗೂ ಸಾಮಾಜಿಕ ಸಮಾನತೆಗೆ ಒತ್ತು ನೀಡಬೇಕು ಎಂದು ತಿಳಿಸಲಾಯಿತು. ಕಾರ್ಯಕ್ರಮದಲ್ಲಿ ಮಕ್ಕಳಿಗೆ ವಚನ ಪಾಠಶಾಲೆ ನಡೆಸಲಾಯಿತು. ಡಾ. ಪ್ರಿಯಾಂಕ ಗದ್ವಾಲ ವಚನ ಬೋಧನೆ ಮಾಡಿದರು. ವೆಂಕಣ್ಣ ಆಶಾಪುರ್ ಮತ್ತು ನಾಗೇಶ್ವರಪ್ಪ ವಚನ ಗಾಯನ ನಡೆಸಿಕೊಟ್ಟರು. ಪಾರ್ವತಿ ಪಾಟೀಲ್ ಸಾಮೂಹಿಕ ಬಸವ ಪ್ರಾರ್ಥನೆ ನಡೆಸಿದರು. ಕೇಂದ್ರದ ಗೌರವಾಧ್ಯಕ್ಷ ಹರವಿ ನಾಗನಗೌಡ ಕಾರ್ಯಕ್ರಮ ಉದ್ಘಾಟಿಸಿದರು. ಈ ಸಂದರ್ಭದಲ್ಲಿ ಚನ್ನಬಸವ ಇಂಜಿನಿಯರ್, ಎಸ್. ಶಂಕರಗೌಡ, ಸರೋಜಾ ಮಾಲಿ ಪಾಟೀಲ್, ಮುಕ್ತಾ ನರಕಲದಿನ್ನಿ, ತಾಯಮ್ಮ ಯಲ್ಲನಗೌಡ, ಚನ್ನ ಬಸವಣ್ಣ ಮಹಾಜನ ಶೆಟ್ಟಿ, ಜಗದೇವಿ ಚನ್ನಬಸವ, ಚಿನ್ಮಯಿ ಮಾಚನೂರು ಸೇರಿದಂತೆ ಅನೇಕರು ಭಾಗವಹಿಸಿದ್ದರು.

## ನೇತಾಜಿನಗರ ಪೊಲೀಸರ ಕಾರ್ಯಾಚರಣೆ: ಮೂರು ಜನ ಬೈಕ್ ಕಳ್ಳರ ಬಂಧನ- ಎಸ್‌ಪಿ ಮೆಚ್ಚುಗೆ

ಕಾಂಬಳೆ ನೇತೃತ್ವದಲ್ಲಿ ವಿಶೇಷ ತಂಡವನ್ನು ರಚಿಸಲಾಗಿತ್ತು. ತನಿಖೆ ವೇಳೆ ಆರೋಪಿತರಾದ ಆಂಜನೇಯ್ಯ ಅಂಜಿ, ಕಾರ್ತಿಕ್ ಅಲಿಯಾಸ್ ಆಲೋಡ್ ಕಾರ್ತಿಕ್ ಹಾಗೂ ಆಕಾಶ ಆಲಿಯಾಸ್ ಕಮಲಾಪುರ ಆಕಾಶ ಅವರನ್ನು ಬಂಧಿಸಲಾಗಿದೆ. ಅವರಿಂದ ಒಟ್ಟು 15 ಮೋಟಾರ್ ಸೈಕಲ್‌ಗಳನ್ನು ಜಪ್ತಿ ಮಾಡಲಾಗಿದ್ದು, ಅವುಗಳ ಅಂದಾಜು ಮೌಲ್ಯ 11.29 ಲಕ್ಷ ರೂ.ಎಂದು ಪೊಲೀಸರು ತಿಳಿಸಿದ್ದಾರೆ. ಕಾರ್ಯಾಚರಣೆಯಲ್ಲಿ ಪಿಎಸ್‌ಐ ಬಸವರಾಜ್ (ಕಾನೂನು ಮತ್ತು ಸುವ್ಯವಸ್ಥೆ), ಪಿಎಸ್‌ಐ ಶಾರದ (ತನಿಖೆ) ಹಾಗೂ ಪೊಲೀಸ್ ಸಿಬ್ಬಂದಿ ಅಮರಪ್ಪ, ಶಿವರಾಜ್, ಅರುಣಕುಮಾರ್, ಮಲ್ಲಪ್ಪ, ದಳಪತಿ, ಮಲ್ಲೇಶ ವಾಕಟಿ, ಜಿ. ಚಂದ್ರಶೇಖರ್ ಮತ್ತು ಮಲ್ಲಿಕಾರ್ಜುನ ಭಾಗವಹಿಸಿದ್ದರು.

OWNER, PUBLISHER, PRINTER BY: SHYAM SUNDER L. PUBLISHED FROM: H: NO: 5-3-6, HANUMAN TALKIES ROAD, OPP VAIKUNTAM TEMPLE, NETAJI NAGAR, RAICHUR-584101, DIST: RAICHUR, KARNATAKA AND PRINTED AT: KANNADA MATHRUBHOOMI PRINTERS, SHOP NO: 5-3-6, HANUMAN TALKIES ROAD, OPP VAIKUNTAM TEMPLE, NETAJI NAGAR, RAICHUR-584101, DIST: RAICHUR, KARNATAKA, EDITOR BY: SHYAM SUNDER L